24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 51 | ನವದೆಹಲಿ | ಬೆಲೆ ₹10 | ಆಗಸ್ಟ್ 18, 2026 ಮಂಗಳವಾರ

## ಒಳಪುಟಗಳಲ್ಲಿ

ಜಮ್ಮು-ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ಕೊಡಿ: ಸಿಎಂ - ಪು.4

ಬಿಡದಿ ಟೌನ್‌ಶಿಪ್ ವಿರೋಧಿಸಿ ಇಂದಿನಿಂದ ಫ್ರೀಡಂಪಾರ್ಕ್‌ನಲ್ಲಿ ಜೆಡಿಎಸ್ ಧರಣಿ - ಪು.5

ಪತ್ನಿಯ ಶೀಲ ಶಂಕಿಸಿ ಜಿಲೆಟಿನ್‌ನಿಂದ ಮನೆ ಸ್ಫೋಟ - ಪತಿಯ ಆತ್ಮಾಹುತಿ ಬಾಂಬ್, ಪತ್ನಿ-ಮಕ್ಕಳು ಸಹಿತ ಎಲ್ಲರೂ ಛಿದ್ರ ಛಿದ್ರ.- ಪು.6

ಹೊಸ ತಂತ್ರಜ್ಞಾನದ ಅರಿವು ಔಷಧ ವಿಜ್ಞಾನ ವಿದ್ಯಾರ್ಥಿಗಳಿಗೆ ಅಗತ್ಯ -ಪು.7

# ತಮಿಳುನಾಡಿಗೆ ಕಾವೇರಿ ನೀರು ಹರಿಸಲು ಕರ್ನಾಟಕಕ್ಕೆ ಸುಪ್ರೀಂ ಆದೇಶ

### ತ.ನಾಡು ಸಲ್ಲಿಸಿದ್ದ ಅರ್ಜಿ ವಿಚಾರಣೆ, ಕಾವೇರಿ ಪ್ರಾಧಿಕಾರದ ಆದೇಶ ಪಾಲನೆಗೆ ಕಟ್ಟಪ್ಪಣೆ

**ನವದೆಹಲಿ, ಆ.17: ಕಾವೇರಿ ನೀರು ಹಂಚಿಕೆ ವಿವಾದಕ್ಕೆ ಸಂಬಂಧಿಸಿದಂತೆ ಸೋಮವಾರ ಮಹತ್ವದ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ತಮಿಳುನಾಡಿಗೆ ಕರ್ನಾಟಕದಿಂದ ನಿಗದಿತ ಪ್ರಮಾಣಕ್ಕಿಂತಲೂ ಹೆಚ್ಚಿನ ನೀರು ಹರಿದು ಬಂದಿರುವಂತೆ ಕಾಣುತ್ತಿದೆ ಎಂದು ಅಭಿಪ್ರಾಯಪಟ್ಟಿದೆ. ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಅವರ ಪೀಠ ಈ ಅಭಿಪ್ರಾಯ ವ್ಯಕ್ತಪಡಿಸಿದೆ. ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರದ ಆದೇಶ ಎತ್ತಿಹಿಡಿದ ಕೋರ್ಟ್, ತಮಿಳುನಾಡಿಗೆ ಪ್ರತಿದಿನ 12 ಸಾವಿರ ಕ್ಯೂಸೆಕ್ ನೀರು ಹರಿಸುವಂತೆ ಸೂಚಿಸಿದೆ.**

ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ವೇಳೆ, ಕರ್ನಾಟಕದಿಂದ ತನ್ನ ಪಾಲಿನ ಕಾವೇರಿ ನೀರು ಸಮರ್ಪಕವಾಗಿ ಬಿಡುಗಡೆಯಾಗುತ್ತಿಲ್ಲ ಎಂದು ತಮಿಳುನಾಡು ವಾದಿಸಿತು. ಮಳೆ ಕೊರತೆಯ ವರ್ಷವಾಗಿರುವುದರಿಂದ ತನ್ನ ಪಾಲಿನ ನೀರಿನ ಅಗತ್ಯ ಹೆಚ್ಚಿದೆ ಎಂದು ರಾಜ್ಯ ಸರ್ಕಾರದ ಪರ ವಕೀಲರು ತಿಳಿಸಿದರು.

ತಮಿಳುನಾಡಿನ ಪರ ವಕೀಲರು ವಾದಿಸಿ, ಈವರೆಗೆ ಕೇವಲ 14.814 ಟಿಎಂಸಿ ನೀರು ಬಂದಿದ್ದು, ಒಟ್ಟು 64 ಟಿಎಂಸಿ ನೀರು ಬರಬೇಕಿತ್ತು. ಅನುಪಾತದ ಪ್ರಕಾರ 35 ಟಿಎಂಸಿ ನೀರು ಬರಬೇಕಾಗಿದ್ದು, ಸುಮಾರು 20 ಟಿಎಂಸಿ ಕೊರತೆ ಇದೆ ಎಂದು ವಾದಿಸಿದರು. ಅಲ್ಲದೆ, ದಿನಕ್ಕೆ 12,000 ಕ್ಯುಸೆಕ್ ನೀರು ಹರಿಸುವಂತೆ ಪ್ರಾಧಿಕಾರದ ನಿರ್ದೇಶನವಿದೆ ಎಂದು ತಿಳಿಸಿದರು.

ಇದಕ್ಕೆ ಪ್ರತಿಯಾಗಿ ಕರ್ನಾಟಕದ ಪರ ಹಿರಿಯ ವಕೀಲ ಶ್ಯಾಮ್ ದಿವಾನ್, ಕಾವೇರಿ



ಜಲಾನಯನ ಪ್ರದೇಶದಲ್ಲಿ ತೀವ್ರ ನೀರಿನ ಕೊರತೆ ಇದೆ ಎಂದು ನ್ಯಾಯಾಲಯಕ್ಕೆ ತಿಳಿಸಿದರು. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನೀಡಿರುವ ನಿರ್ದೇಶನಗಳನ್ನು ಕರ್ನಾಟಕ ಪಾಲಿಸುತ್ತಿಲ್ಲ ಎಂಬ ತಮಿಳುನಾಡಿನ ಆರೋಪವನ್ನು ಅವರು ತಳ್ಳಿಹಾಕಿದರು.

ಕರ್ನಾಟಕದಿಂದ ನಿರೀಕ್ಷೆಗಿಂತ ಹೆಚ್ಚಿನ ನೀರು ಬಿಡುಗಡೆಯಾಗಿದೆ ಎಂದು ಹೇಳಿದ ಅವರು, ಆಗಸ್ಟ್ 13ರಿಂದ 16ರವರೆಗೆ ದಿನಕ್ಕೆ 12,000 ಕ್ಯುಸೆಕ್ ಪ್ರಮಾಣಕ್ಕಿಂತ ಕಡಿಮೆ ನೀರು ಹರಿದಿದ್ದರೂ, ಮುಂದಿನ ದಿನಗಳಲ್ಲಿ ಅದನ್ನು ಸರಿದೂಗಿಸಲಾಗುವುದು ಎಂದು ತಿಳಿಸಿದರು. ಸೋಮವಾರ ಬೆಳಗ್ಗೆ 8 ಗಂಟೆಯ ವೇಳೆಗೆ ತಮಿಳುನಾಡಿಗೆ ಹರಿಯುತ್ತಿದ್ದ ನೀರಿನ ಪ್ರಮಾಣ 12,000 ಕ್ಯುಸೆಕ್‌ಗಿಂತ ಹೆಚ್ಚಿತ್ತು ಎಂದೂ ಹೇಳಿದರು. ವಾದ-ಪ್ರತಿವಾದಗಳನ್ನು ಆಲಿಸಿದ ಸುಪ್ರೀಂ ಕೋರ್ಟ್, ಎರಡೂ ರಾಜ್ಯಗಳು ಸಲ್ಲಿಸಿರುವ ಅಂಕಿ-ಅಂಶಗಳ ವರದಿಗಳನ್ನು ಪರಿಶೀಲಿಸಿತು. ನೀರು ಬಿಡುಗಡೆ ನಿರ್ದೇಶನವನ್ನು ಕರ್ನಾಟಕ ಪಾಲಿಸಬೇಕು ಎಂದು ಸ್ಪಷ್ಟಪಡಿಸಿದ ಪೀಠ, ನೀರು ಹಂಚಿಕೆಯ ಮುಂದಿನ ಸ್ಥಿತಿಗತಿ ಪರಿಶೀಲಿಸಲು ವಿಚಾರಣೆಯನ್ನು ಒಂದು ವಾರ ಮುಂದೂಡಿತು.

### ನಾಳೆ ಸಿಎಂ ದೆಹಲಿಗೆ

**ಕಾವೇರಿ ನೀರು ಹಂಚಿಕೆ ಬಗ್ಗೆ ಸುಪ್ರೀಂ ಕೋರ್ಟ್ ಆದೇಶ ಹೊರಬಿದ್ದ ಬೆನ್ನಲ್ಲೇ ಸಿಎಂ ಡಿ.ಕೆ.ಶಿವಕುಮಾರ್ ಆ.19 ರಂದು ದೆಹಲಿಗೆ ಭೇಟಿ ನೀಡಲಿದ್ದಾರೆ. ರಾಜ್ಯದ ಹಿತಾಸಕ್ತಿ ರಕ್ಷಣೆಗಾಗಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಕಾನೂನು ತಜ್ಞರ ಜೊತೆ ಅವರು ವ್ಯಾಪಕ ಸಮಾಲೋಚನೆ ನಡೆಸಲಿದ್ದಾರೆ. ಅಲ್ಲದೆ ದಕ್ಷಿಣ ರಾಜ್ಯಗಳ ಮುಖ್ಯಮಂತ್ರಿಗಳ ಸಭೆಯಲ್ಲಿ ಅವರು ಪಾಲ್ಗೊಳ್ಳಲಿದ್ದಾರೆ.**

# ಉಚಿತ ಎಲೆಕ್ಟ್ರಿಕ್ ಸ್ಟೌ ಸುಳ್ಳು ಸಂದೇಶ: ಎಚ್ಚರಿಕೆ

**ನವದೆಹಲಿ, ಆ.17:** ಕೇಂದ್ರ ಸರ್ಕಾರದಿಂದ ಉಚಿತ ಎಲೆಕ್ಟ್ರಿಕ್ ಸ್ಟೌ ವಿತರಣೆ ಎಂಬುದು ನಕಲಿ ಸಂದೇಶವಾಗಿದ್ದು, ಸಾರ್ವಜನಿಕರು ಇದನ್ನು ನಂಬಿ ಮೋಸ ಹೋಗಬಾರದು ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಸ್ಪಷ್ಟಪಡಿಸಿದ್ದಾರೆ.

ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವಾಲಯದ (ಎಂಎನ್‌ಆರ್‌ಇ) ಹೆಸರಿನಲ್ಲಿ ಕೆಲವೊಂದು ಸಾಮಾಜಿಕ ಜಾಲತಾಣಗಳಲ್ಲಿ ನಕಲಿ ಸುದ್ದಿ, ಸಂದೇಶಗಳನ್ನು ಬಿತ್ತರಿಸಲಾಗುತ್ತಿದೆ. ಈ ಬಗ್ಗೆ ನಾಗರಿಕರು ಎಚ್ಚರಿಕೆ ವಹಿಸಬೇಕು ಎಂದು ಕರೆ ನೀಡಿದ್ದಾರೆ.

ಕೇಂದ್ರ ನವೀಕರಿಸಬಹುದಾದ ಇಲಾಖೆಯಿಂದ 'ಉಚಿತ ಎಲೆಕ್ಟ್ರಿಕ್ ಸ್ಟೌ ವಿತರಣೆ' ಯೋಜನೆಯನ್ನು ಪರಿಚಯಿಸಿಲ್ಲ. ನಾಗರಿಕರನ್ನು ದಾರಿ ತಪ್ಪಿಸುವ, ವಂಚಿಸುವ ಉದ್ದೇಶದಿಂದ ಕೆಲವರು MNRE ಹೆಸರಲ್ಲಿ ಹೀಗೆ ಸುಳ್ಳು ಸಂದೇಶಗಳನ್ನು ಹರಿಬಿಡುತ್ತಿದ್ದಾರೆ. ಇದೆಲ್ಲಾ ಫೇಕ್ ಆಗಿದೆ ಎಂದು ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವರೂ ಆಗಿರುವ ಪ್ರಲ್ಹಾದ ಜೋಶಿ ಅವರೇ



- **ಎಂಎನ್‌ಆರ್‌ಇ ಹೆಸರಿಲ್ಲಿ ನಕಲಿ ಸಂದೇಶ; ನಂಬದಿರಲು ಕೇಂದ್ರ ಸಚಿವ ಪ್ರಲ್ಹಾದ ಜೋಶೀ ಮನವಿ**
- **ಸಾಮಾಜಿಕ ಜಾಲತಾಣಗಳಲ್ಲಿನ ಫೇಕ್ ಸಂದೇಶಗಳ ಮೇಲೆ ಕ್ಲಿಕ್ ಮಾಡದೇ ಇರಲು ಕರೆ**

ಸ್ಪಷ್ಟಪಡಿಸಿದ್ದಾರೆ.

ನವೀಕರಿಸಬಹುದಾದ ಇಂಧನ ಸಚಿವಾಲಯದ ಹೆಸರಿನಲ್ಲಿ ನಕಲಿ ಸಂದೇಶಗಳು ಹರಿದಾಡುತ್ತಿರುವುದು ಗಮನಕ್ಕೆ ಬಂದಿದೆ. ನಾಗರಿಕರು ಇಂಥ ನಕಲಿ ಸಂದೇಶಗಳ ಬಗ್ಗೆ ಸದಾ ಜಾಗೃತರಾಗಿರಬೇಕು. ಸಚಿವಾಲಯದ ಅಧಿಕೃತ ವೆಬ್‌ಸೈಟ್ ಮತ್ತು ಪರಿಶೀಲಿತ ಸಾಮಾಜಿಕ ಜಾಲತಾಣಗಳ ಮೂಲಕ ಬರುವ ಅಧಿಕೃತ ಮಾಹಿತಿಯನ್ನಷ್ಟೇ ನಂಬಬೇಕು ಎಂದು ತಿಳಿಸಿದ್ದಾರೆ.

ಸಾಮಾಜಿಕ ಜಾಲತಾಣಗಳಲ್ಲಿನ ಯಾವುದೇ ಅನುಮಾನಾಸ್ಪದ ಲಿಂಕ್‌ಗಳನ್ನು ಕ್ಲಿಕ್ ಮಾಡಬಾರದು. ಪರಿಶೀಲಿಸದೇ ಯಾವುದೇ ಸಂದೇಶಗಳನ್ನು ಫಾರ್ವರ್ಡ್ ಮಾಡಬಾರದು ಹಾಗೂ ಬ್ಯಾಂಕಿಂಗ್, ಹಣಕಾಸು ಅಥವಾ ವೈಯಕ್ತಿಕ ಮಾಹಿತಿಯನ್ನು ಯಾರೊಂದಿಗೂ ಹಂಚಿಕೊಳ್ಳಲೂಬಾರದು ಎಂದು ಎಚ್ಚರಿಸಿದ್ದಾರೆ.

ಯಾವುದೇ ಸುದ್ದಿ, ಸಂದೇಶಗಳ ಬಗೆಗೆ ಅಧಿಕೃತ ವೆಬ್‌ಸೈಟ್ ಹಾಗೂ ಸುದ್ದಿ ಸಂಸ್ಥೆಗಳನ್ನಷ್ಟೇ ಅನುಸರಿಸಬೇಕು. ಸರ್ಕಾರದ ಯೋಜನೆಗಳಿಗೆ ಇಲಾಖಾ ಅಧಿಕೃತ ವೆಬ್ ಸೈಟ್, ಜಾಹೀರಾತು, ಮಾಧ್ಯಮ ಪ್ರಕಟಣೆಗಳನ್ನು ಮಾತ್ರ ನಂಬಬೇಕು. ನಕಲಿ ಸಂದೇಶಗಳಿಂದ ಜಾಗರೂಕರಾಗಿರಬೇಕು ಎಂದು ದೇಶದ ನಾಗರಿಕರನ್ನು ಜೋಶಿ ಎಚ್ಚರಿಸಿದ್ದಾರೆ.

# ರೈತರ ತಡೆಯಲು ಹರಿಯಾಣ-ದೆಹಲಿ ಗಡಿಯಲ್ಲಿ ಕಾಂಕ್ರೀಟ್ ಗೋಡೆ, ತಂತಿಬೇಲಿ

**ನವದೆಹಲಿ, ಆ. 17:** ಭಾರತ ಮತ್ತು ಅಮೆರಿಕ ನಡುವಿನ ವ್ಯಾಪಾರ ಒಪ್ಪಂದವನ್ನು ರದ್ದುಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಸಂಯುಕ್ತ ಕಿಸಾನ್ ಮೋರ್ಚಾ (ಡಲ್ಲೇವಾಲ್ ಬಣ) ಹಾಗೂ ಇತರ ಪ್ರಮುಖ ರೈತ ಸಂಘಟನೆಗಳು ದೆಹಲಿ ಪಾದಯಾತ್ರೆಗೆ (ದೆಹಲಿ ಚಲೋ) ಕರೆ ನೀಡಿರುವ ಹಿನ್ನೆಲೆಯಲ್ಲಿ, ದೆಹಲಿ ಮತ್ತು ಹರಿಯಾಣ ಗಡಿಭಾಗಗಳಲ್ಲಿ ಆಡಳಿತ ಮಂಡಳಿಯು ಬಿಗಿ ಭದ್ರತಾ ಕ್ರಮಗಳನ್ನು ಕೈಗೊಂಡಿದೆ. ರೈತರು ದೆಹಲಿ ಪ್ರವೇಶಿಸುವುದನ್ನು ತಡೆಯಲು ಹರಿಯಾಣ-ದೆಹಲಿ ಗಡಿಯ ಪ್ರಮುಖ ಮಾರ್ಗಗಳಲ್ಲಿ ಮತ್ತು ಶಂಭುಗಡಿ ಪ್ರದೇಶಗಳಲ್ಲಿ ಕಾಂಕ್ರೀಟ್ ತಡೆಗೋಡೆಗಳನ್ನು ನಿರ್ಮಿಸಲಾಗಿದ್ದು, ಮುಳ್ಳುತಂತಿ ಬೇಲಿಗಳನ್ನು ಅಳವಡಿಸಲಾಗಿದೆ. ಇದರೊಂದಿಗೆ ರಸ್ತೆಗಳ ಮೇಲೆ ದೊಡ್ಡಕಲ್ಲು ಹಾಗೂ ಬ್ಯಾರಿಕೇಡ್‌ಗಳನ್ನು ಇರಿಸಲಾಗಿದ್ದು, ವಾಹನ ಸಂಚಾರ ಸಂಪೂರ್ಣವಾಗಿ ಬಂದ್ ಆಗಿದೆ.

ಅಂತಾರಾಷ್ಟ್ರೀಯ ವ್ಯಾಪಾರ ಒಪ್ಪಂದಗಳಿಂದ ದೇಶೀಯ ರೈತರಿಗೆ ತೊಂದರೆಯಾಗುತ್ತಿದ್ದು, ಇದನ್ನು ತಕ್ಷಣವೇ ರದ್ದುಗೊಳಿಸಬೇಕು. ಎಲ್ಲಾ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆಯನ್ನು ಖಾತರಿಪಡಿಸುವ ಕಾನೂನು ಜಾರಿಗೆ ತರಬೇಕು. ರೈತರ ಕೃಷಿಸಾಲ ಮನ್ನಾ ಮಾಡಬೇಕು ಮತ್ತು ರೈತರಿಗೆ ಮಾಸಿಕ ಪಿಂಚಣಿ ಸೌಲಭ್ಯ ಒದಗಿಸಬೇಕು ಎಂಬುದು ರೈತರ ಪ್ರಮುಖ ಬೇಡಿಕೆಯಾಗಿದೆ. ಈ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ರೈತರು ದೆಹಲಿ ಚಲೋ ನಡೆಸಲು ಮುಂದಾಗಿದ್ದಾರೆ.

ಈ ನಡುವೆ ಗಡಿಯಲ್ಲಿ ಭಾರೀ ಸಂಖ್ಯೆಯ ಪೊಲೀಸರು ಮತ್ತು ಅರೆಸೈನಿಕ ಪಡೆಗಳನ್ನು ನಿಯೋಜಿಸಲಾಗಿದ್ದು, ಮುನ್ನೆಚ್ಚರಿಕಾ ಕ್ರಮವಾಗಿ ಸುತ್ತಮುತ್ತಲಿನ ಜಿಲ್ಲೆಗಳಲ್ಲಿ ಇಂಟರ್‌ನೆಟ್ ಸೇವೆ ಸ್ಥಗಿತಗೊಳಿಸಲಾಗಿದೆ ಹಾಗೂ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

## ಗೃಹ ಮಂಡಳಿ ಅಧ್ಯಕ್ಷರಿಗೆ ಸಂಪುಟ ದರ್ಜೆ ಸ್ಥಾನಮಾನ

ಬೆಂಗಳೂರು, ಆ.17: ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷ ಶ್ರೀನಿವಾಸ ಮಾನೆ ಅವರಿಗೆ ರಾಜ್ಯ ಸರ್ಕಾರ ಸಂಪುಟ ದರ್ಜೆಯ ಸಚಿವ ಸ್ಥಾನ ನೀಡಿದೆ. ಈ ಸ್ಥಾನಮಾನವು ತಕ್ಷಣದಿಂದಲೇ



ಜಾರಿಗೆ ಬರಲಿದ್ದು, ಸರ್ಕಾರದಿಂದ ಮುಂದಿನ ಆದೇಶ ಹೊರಬರುವವರೆಗೆ ಮುಂದುವರಿಯಲಿದೆ. ರಾಜ್ಯಪಾಲರ ಹೆಸರಿನಲ್ಲಿ ಹೊರಡಿಸಿರುವ ಅಧಿಕೃತ ಸರ್ಕಾರಿ ಆದೇಶದಲ್ಲಿ ಈ ನಿರ್ಧಾರವನ್ನು ಪ್ರಕಟಿಸಲಾಗಿದೆ. ಸಂಪುಟ ದರ್ಜೆ ಸಚಿವರಿಗೆ ಸರ್ಕಾರದಿಂದ ದೊರೆಯುವ ಎಲ್ಲ ಅಧಿಕೃತ ಸೌಲಭ್ಯಗಳು ಶ್ರೀನಿವಾಸ ಮಾನೆ ಅವರಿಗೂ ಅನ್ವಯವಾಗಲಿವೆ ಎಂದು ಆದೇಶದಲ್ಲಿ ಸ್ಪಷ್ಟಪಡಿಸಲಾಗಿದೆ. ಕೆಎಚ್‌ಬಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿರುವ ಮಾನೆ ಅವರಿಗೆ ಸಚಿವ ಸ್ಥಾನದ ಸೌಲಭ್ಯ ಕಲ್ಪಿಸುವ ಮೂಲಕ ಸರ್ಕಾರ ಆಡಳಿತಾತ್ಮಕವಾಗಿ ಮಹತ್ವದ ನಿರ್ಧಾರ ಕೈಗೊಂಡಿದೆ. ಈ ಸಂಬಂಧ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

# ಒಂದೇ ದಿನ ದಾಖಲೆ 35 ಲಕ್ಷ ರೂ. ಗಡಿಯಾರಗಳ ಮಾರಾಟ

**ಹಾಸನ, ಆ.17:** ಸ್ವಾತಂತ್ರ್ಯ ದಿನಾಚರಣೆಯ ದಿನದಂದು ದಾಖಲೆ ಪ್ರಮಾಣದಲ್ಲಿ ಹೆಚ್‌ಎಂಟಿ ಕೈಗಡಿಯಾರಗಳ ಮಾರಾಟವಾಗಿದ್ದು, ಒಂದೇ ದಿನ ಸುಮಾರು 35 ಲಕ್ಷ ರೂ.ಗಳಿಗೂ ಹೆಚ್ಚು ವಹಿವಾಟು ನಡೆದಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದರು.

ಹಾಸನ ಜಿಲ್ಲೆಯ ಹೊಳೆನರಸೀಪುರದಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯ ದಿನದ ಪ್ರಯುಕ್ತ ಹೆಚ್‌ಎಂಟಿ ಕಂಪನಿಯು ವಿಶೇಷ ಆವೃತ್ತಿಯ ಕೆಲ ಅಪರೂಪದ ಕೈಗಡಿಯಾರಗಳನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಿತ್ತು. ಅಂದು ವಾಚುಗಳ ಖರೀದಿಗೆ ಮುಗಿಬಿದ್ದ ಗ್ರಾಹಕರು ಸುಮಾರು ಎರಡುವರೆ ಕಿಲೋಮೀಟರ್‌ಗೂ ಹೆಚ್ಚು ಸಾಲಿನಲ್ಲಿ ನಿಂತು ಖರೀದಿ ಮಾಡಿದ್ದಾರೆ ಎಂದು ಹೇಳಿದರು. ಅಂದು ನಮ್ಮ ಕಡೆಯಿಂದ ಸಾವಿರಾರು ಕೈ ಗಡಿಯಾರಗಳು ಮಾರಾಟವಾಗಿದ್ದು, ಒಂದೇ



- **ಇಂಡಿಪೆಂಡೆನ್ಸ್ ಡೇ ಸೇಲ್**
- **ಸಂಸ್ಥೆ ಪುನಶ್ಚೇತನಗೊಳಿಸುವ ಉದ್ದೇಶಕ್ಕೆ ಮತ್ತಷ್ಟು ಬಲ: ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ**

35 ಲಕ್ಷ ರೂ. ವಹಿವಾಟು ನಡೆದಿರುವುದು ಕಂಪನಿಯನ್ನು ಪುನಶ್ಚೇತನಗೊಳಿಸುವ ಉದ್ದೇಶಕ್ಕೆ ಮತ್ತಷ್ಟು ಬಲ ನೀಡಿದೆ ಎಂದರು.

ಹೆಚ್‌ಎಂ.ಟಿ ಗಡಿಯಾರಗಳ ಬಗ್ಗೆ ಜನರಲ್ಲಿ ಇವತ್ತಿಗೂ ಅಭಿಮಾನ ಗೌರವ ಇದೆ. ಹಿಂದೆ ಹೆಚ್ ಎಂಟಿ ಗಡಿಯಾರ ಕಟ್ಟುವುದು ಎಂದರೆ ಹೆಮ್ಮೆ ಮತ್ತು ಪ್ರತಿಷ್ಠೆಯ ಸಂಗತಿಯಾಗಿತ್ತು. ಆ ವೈಭವವನ್ನು ಮರಳಿ ತರುವುದು ನಮ್ಮ ಉದ್ದೇಶವಾಗಿದೆ. ಅದಕ್ಕಾಗಿ ಗಂಭೀರ ಪ್ರಯತ್ನಗಳನ್ನು ಮಾಡುತ್ತಿದ್ದೇವೆ ಎಂದು ಹೆಚ್ ಡಿ ಕುಮಾರಸ್ವಾಮಿ ತಿಳಿಸಿದರು.

ಕಾರ್ಖಾನೆಗೆ ಮರುಜೀವ ನೀಡುವ ನಿಟ್ಟಿನಲ್ಲಿ ಎರಡು ವರ್ಷಗಳಿಂದ ನಿರಂತರ ಪ್ರಯತ್ನ ಮಾಡುತ್ತಿದ್ದೇವೆ. ಈ ಕುರಿತು ಯೋಜನಾ ಆಯೋಗದ ಸದಸ್ಯರಾದ ವಿ.ಕೆ. ಸಾರಸ್ವತ ಅವರ ಅಧ್ಯಕ್ಷತೆಯಲ್ಲಿ ಉನ್ನತ ಮಟದ ಸಮಿತಿಯನ್ನು ರಚಿಸಲಾಗಿತ್ತು. ಈಗಾಗಲೇ ಸಮಿತಿ ವರದಿಯನ್ನು ನೀಡಿ ಕೆಲವು ಮಹತ್ವದ ಶಿಫಾರಸ್ಸುಗಳನ್ನು ಮಾಡಿದೆ. ಅದರಂತೆಯೇ ಕಾರ್ಖಾನೆಗೆ ಮರುಜೀವ ನೀಡಲು ಈಗಾಗಲೇ ಕೇಂದ್ರದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರೊಂದಿಗೂ ಕೂಡ ಮಾತಕತೆ ನಡೆಸಿದ್ದೇನೆ ಎಂದು ಹೆಚ್.ಡಿ. ಕುಮಾರಸ್ವಾಮಿ ಮಾಹಿತಿ ನೀಡಿದರು.

# ದೆಹಲಿ ವಿಮಾನ ನಿಲ್ದಾಣದಲ್ಲಿ ದಾವೂದ್ ಆಪ್ತ ಸಹಾಯಕ ಅಖ್ತರ್ ಮರ್ಚೆಂಟ್ ಬಂಧನ

**ನವದೆಹಲಿ, ಆ.17:** ಭೂಗತ ಪಾತಕಿ ದಾವೂದ್ ಇಬ್ರಾಹಿಂ ಆಪ್ತ ಎನ್ನಲಾದ ಅಖ್ತರ್ ಮರ್ಚೆಂಟ್‌ನನ್ನು ದೆಹಲಿ ವಿಮಾನ ನಿಲ್ದಾಣದಲ್ಲಿ ಬಂಧಿಸಲಾಗಿದೆ.

2023ರಲ್ಲಿ ಮೀರಾ ರಸ್ತೆಯ ಕಾಶಿಮಿರಾ ಪ್ರದೇಶದ ಬೇಕರಿಯಲ್ಲಿ ನಡೆದ ಗುಂಡಿನ ದಾಳಿ ಮತ್ತು ಸುಲಿಗೆ ಪ್ರಕರಣಕ್ಕೆ ಸಂಬಂಧ ಈತನ ವಿರುದ್ಧ ಪ್ರಕರಣ ದಾಖಲಾಗಿತ್ತು. ಪೊಲೀಸರ ಪ್ರಕಾರ, ಆರೋಪಿ ಸುಮಾರು 3 ವರ್ಷಗಳಿಂದ ತಲೆಮರೆಸಿಕೊಂಡಿದ್ದು, ಇಂಟರ್‌ಪೋಲ್ ವಾಂಟೆಡ್ ಪಟ್ಟಿಯಲ್ಲಿದ್ದ. ಅಖ್ತರ್ ಮರ್ಚೆಂಟ್ ವಿದೇಶದಲ್ಲಿ ಅಡಗಿಕೊಂಡಿದ್ದ ಎಂದು ವರದಿಯಾಗಿತ್ತು.

ಮೀರಾ-ಭಯಂದರ್ ವಸೈ-ವಿರಾರ್ ಪೊಲೀಸ್ ಅಪರಾಧ ವಿಭಾಗಕ್ಕೆ ಇಂಟರ್‌ಪೋಲ್ ಮೂಲಕ ವಿದೇಶದಲ್ಲಿ ಆತನ ಇರುವಿಕೆಯ ಬಗ್ಗೆ ಮಾಹಿತಿ ಸಿಕ್ಕಿತು. ಇದರ ನಂತರ, ಅವನ ಚಟುವಟಿಕೆಗಳ ಮೇಲೆ ನಿಗಾ ಇಡಲಾಗಿತ್ತು. ವಿದೇಶದಿಂದ ಭಾರತಕ್ಕೆ ಹಿಂದಿರುಗಿದ ನಂತರ ದೆಹಲಿ ವಿಮಾನ ನಿಲ್ದಾಣದಲ್ಲಿ ಅವನನ್ನು ಬಂಧಿಸಲಾಯಿತು.

ಪೊಲೀಸ್ ತನಿಖೆಗಳ ಪ್ರಕಾರ, 2023ರಲ್ಲಿ ಕಾಶಿಮಿರಾ ಪ್ರದೇಶದ ಬೇಕರಿ ಮಾಲೀಕರಿಗೆ ಸುಲಿಗೆಗೆ ಬೆದರಿಕೆ ಹಾಕಲಾಗಿತ್ತು ಎಂದು ಆರೋಪಿಸಲಾಗಿದೆ. ಆತನ ಬೇಡಿಕೆಗಳನ್ನು ಈಡೇರಿಸದ ನಂತರ ಭಯದ ವಾತಾವರಣವನ್ನು ಸೃಷ್ಟಿಸಲು ಬೇಕರಿ ಮೇಲೆ ಗುಂಡು ಹಾರಿಸಿದ್ದ ಅಖ್ತರ್ ಮರ್ಚೆಂಟ್ ಮತ್ತು ಪಪ್ಪು ಪೇಜರ್ ನನ್ನು ಪ್ರಕರಣದ ಪ್ರಮುಖ ಸಂಚುಕೋರರು ಎಂದು ಆರೋಪಿಸಲಾಗಿದೆ. ಕಾಶಿಮಿರಾ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

# ರಾಹುಲ್‌ಗಾಂಧಿಗೆ ಬಿಗ್ ರಿಲೀಫ್: ಅಕ್ರಮ ಆಸ್ತಿ ಸಂಪಾದನೆ ಪ್ರಕರಣದ ವಿಚಾರಣೆಗೆ ಸುಪ್ರೀಂ ತಡೆ

**ನವದೆಹಲಿ, ಆ.17:** ಅಕ್ರಮ ಆಸ್ತಿ ಸಂಪಾದನೆ ಪ್ರಕರಣದಲ್ಲಿ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರಿಗೆ ಸುಪ್ರೀಂ ಕೋರ್ಟ್ ಸೋಮವಾರ ಬಿಗ್ ರಿಲೀಫ್ ಕೊಟ್ಟಿದೆ. ಈ ಪ್ರಕರಣದ ಸಂಬಂಧ ಸದ್ಯಕ್ಕೆ ಮುಂದಿನ ವಿಚಾರಣೆ ನಡೆಸದಂತೆ ಅಲಹಾಬಾದ್ ಹೈಕೋರ್ಟ್‌ಗೆ ಸೂಚಿಸಿದೆ.



ಅಲ್ಲದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಅಲಹಾಬಾದ್ ಹೈಕೋರ್ಟ್‌ಗೆ ಯಾವುದೇ ವರದಿ ಸಲ್ಲಿಸದಂತೆ ಸಿಬಿಐ ಮತ್ತು ಜಾರಿ ನಿರ್ದೇಶನಾಲಯಕ್ಕೆ ಸುಪ್ರೀಂ ಕೋರ್ಟ್ ಸೂಚಿಸಿದೆ.

ಕಾಂಗ್ರೆಸ್ ನಾಯಕನ ವಿರುದ್ಧದ ಅಕ್ರಮ ಆಸ್ತಿ ಆರೋಪಗಳ ಕುರಿತು ಸಿಬಿಐ ಮತ್ತು ಇಡಿಯಿಂದ ತನಿಖೆ ನಡೆಸುವಂತೆ ಕೋರಿ ಸಲ್ಲಿಸಲಾಗಿದ್ದ ಅರ್ಜಿಯ ವಿಚಾರಣೆಯನ್ನು ಹೈಕೋರ್ಟ್ ನಡೆಸುತ್ತಿತ್ತು. ಅಕ್ರಮ ಆಸ್ತಿ ಸಂಪಾದನೆ ಆರೋಪಗಳ ಪರಿಶೀಲನೆ ನಡೆಸುವಂತೆ ಸಿಬಿಐ ಮತ್ತು ಇಡಿಗೆ ನಿರ್ದೇಶಿಸಿದ್ದ ಅಲಹಾಬಾದ್ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಅವರು ಈ ಹಿಂದೆ ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದರು.

ಸಿಬಿಐ ನೀಡಿದ ಪ್ರತಿಕ್ರಿಯೆಯಿಂದ ಅಸಮಾಧಾನಗೊಂಡಿದ್ದ ಅಲಹಾಬಾದ್ ಹೈಕೋರ್ಟ್‌ನ ಲಖನೌ ಪೀಠವು ಜುಲೈ 20ರಂದು, ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧದ ಅಕ್ರಮ ಆಸ್ತಿ ಆರೋಪಗಳ ತನಿಖೆಯಲ್ಲಿ ನಡೆದಿರುವ ಪ್ರಗತಿಯ ಕುರಿತು ವಿವರವಾದ ವರದಿಯನ್ನು ಸಂಸ್ಥೆಯ ಹಿರಿಯ ಅಧಿಕಾರಿಯೊಬ್ಬರು ವೈಯಕ್ತಿಕವಾಗಿ ಸಲ್ಲಿಸುವಂತೆ ನಿರ್ದೇಶಿಸಿತ್ತು.

ಅಕ್ರಮ ಆಸ್ತಿ ಆರೋಪಗಳ ಕುರಿತು ತನಿಖೆ ನಡೆಸುವ ಸಂದರ್ಭದಲ್ಲಿ ಯಾವುದೇ ಅಕ್ರಮಕ್ಕೆ ಸಂಬಂಧಿಸಿದ ದಾಖಲೆಗಳು ಅಥವಾ ಮಾಹಿತಿ ಇಡಿ ಗಮನಕ್ಕೆ ಬಂದರೆ, ಕಾನೂನು ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲು ಸ್ವತಂತ್ರವಾಗಿರುತ್ತದೆ ಎಂದು ಹೈಕೋರ್ಟ್ ಹೇಳಿತ್ತು.

ಕರ್ನಾಟಕದ ನಿವಾಸಿ ಎಸ್. ವಿಘ್ನೇಶ್ ಶಿಶಿರ್ ಸಲ್ಲಿಸಿದ್ದ ಕ್ರಿಮಿನಲ್ ರಿಟ್ ಅರ್ಜಿಯ ವಿಚಾರಣೆ ಸುಮಾರು ಎರಡು ಗಂಟೆಗಳ ಕಾಲ ನಡೆದ ಇನ್-ಚೇಂಬರ್ ವಿಚಾರಣೆಯ ಬಳಿಕ ಈ ಆದೇಶ ಹೊರಬಿದ್ದಿತ್ತು. ಬಿಜೆಪಿ ಕಾರ್ಯಕರ್ತರಾಗಿರುವ ವಿಘ್ನೇಶ್ ಈ ಹಿಂದೆ ರಾಹುಲ್ ಗಾಂಧಿ ದ್ವಿಪೌರತ್ವ ಹೊಂದಿದ್ದಾರೆ ಎಂದು ಆರೋಪಿಸಿ ಅರ್ಜಿಗಳನ್ನು ಸಲ್ಲಿಸಿದ್ದರು.

ರಾಹುಲ್ ಗಾಂಧಿ ಅವರ ಆಸ್ತಿಗೆ ಸಂಬಂಧಿಸಿದಂತೆ ಅರ್ಜಿದಾರರು ಸಲ್ಲಿಸಿದ್ದ ದೂರಿನ ತನಿಖೆಯಲ್ಲಿ ನಡೆದಿರುವ ಪ್ರಗತಿಯ ಕುರಿತು ಸಾಕಷ್ಟು ವಿವರ ನೀಡಿಲ್ಲ ಮತ್ತು ಸಿಬಿಐ ಸಲ್ಲಿಸಿದ್ದ ಪ್ರಮಾಣಪತ್ರವು ತನ್ನ ಹಿಂದಿನ ಆದೇಶಕ್ಕೆ ಅನುಗುಣವಾಗಿಲ್ಲ ಎಂದು ಹೈಕೋರ್ಟ್ ಗಮನಿಸಿತ್ತು.

ಈ ಹಿನ್ನೆಲೆಯಲ್ಲಿ ಸಿಬಿಐನ ಭ್ರಷ್ಟಾಚಾರ ನಿಗ್ರಹ ವಿಭಾಗದ ನವದೆಹಲಿಯ ಕೇಂದ್ರ ಕಚೇರಿಯ ಜಂಟಿ ನಿರ್ದೇಶಕರು ಅಥವಾ ಸಂಬಂಧಿತ ವಲಯದ ಮುಖ್ಯಸ್ಥರು ವೈಯಕ್ತಿಕವಾಗಿ ಹೊಸ ಪ್ರಮಾಣಪತ್ರವನ್ನು ಸಲ್ಲಿಸುವಂತೆ ಪೀಠ ನಿರ್ದೇಶಿಸಿತ್ತು. ಪ್ರಕರಣವನ್ನು ಭಾಗಶಃ ವಿಚಾರಣೆಗೊಳಪಟ್ಟ ಪ್ರಕರಣವೆಂದು ಪರಿಗಣಿಸಿದ್ದ ಪೀಠವು ಮುಂದಿನ ವಿಚಾರಣೆಯನ್ನು ಆಗಸ್ಟ್ 20ಕ್ಕೆ ನಿಗದಿಪಡಿಸಿತ್ತು.

### ಬಹಿರಂಗ ಕೋರ್ಟ್‌ನಲ್ಲಿ ವಿಚಾರಣೆ ಇರಲಿಲ್ಲ

**ಹಿಂದಿನ ಆದೇಶಗಳಂತೆ ಪ್ರಕರಣದ ಸಂಪೂರ್ಣ ದಾಖಲೆಗಳನ್ನ ಸೀಲ್ ಕವರ್‌ನಲ್ಲಿ ಹಿರಿಯ ರಿಜಿಸ್ಟ್ರಾರ್ ಅವರ ಸುರಕ್ಷಿತ ವಶದಲ್ಲಿಯೇ ಮುಂದುವರಿಸಿ ಇರಿಸುವಂತೆ ಕೂಡ ಹೈಕೋರ್ಟ್ ನಿರ್ದೇಶಿಸಿತ್ತು. ಪ್ರಕರಣದ ಸೂಕ್ಷ್ಮ ಸ್ವರೂಪವನ್ನು ಪರಿಗಣಿಸಿ, ಹೈಕೋರ್ಟ್ ಪೀಠವು ಈ ಪ್ರಕರಣದ ವಿಚಾರಣೆಯನ್ನು ಬಹಿರಂಗ ನ್ಯಾಯಾಲಯದಲ್ಲಿ ನಡೆಸುತ್ತಿರಲಿಲ್ಲ.**

# ಸಚಿವ ನಾಗೇಂದ್ರ ರಾಜೀನಾಮೆಗೆ ಬಿಜೆಪಿ, ಜೆಡಿಎಸ್ ಬಿಗಿಪಟ್ಟು, ವಿಧಾನ ಸಭೆಯಲ್ಲಿ ಗದ್ದಲ

**ಬೆಂಗಳೂರು, ಆ.17:** ಯೋಜನೆ ಮತ್ತು ಸಾಂಖ್ಯಿಕ ಸಚಿವ ನಾಗೇಂದ್ರ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿ ಪ್ರತಿಪಕ್ಷಗಳು ವಿಧಾನಸಭೆಯಲ್ಲಿ ಘೋಷಣೆ ಕೂಗಿದ ಪರಿಣಾಮ ಗದ್ದಲ ಉಂಟಾಗಿ, ಸದನದ ಕಲಾಪವನ್ನು ಕೆಲಕಾಲ ಮುಂದೂಡಿದ ಪ್ರಸಂಗ ನಡೆಯಿತು.

ಬಿಜೆಪಿ ಶಾಸಕ ವಿ. ಸುನೀಲ್‌ಕುಮಾರ್ ಅವರು, ಭ್ರಷ್ಟಾಚಾರದ ಆರೋಪ ಹೊತ್ತಿರುವ ಸಚಿವರನ್ನು ಸಂಪುಟದಲ್ಲಿ ಇಟ್ಟುಕೊಂಡು ಪ್ರಶ್ನೋತ್ತರ ಕಲಾಪವನ್ನು ಹೇಗೆ ನಡೆಸಲಾಗುತ್ತದೆ ಎಂದು ಏರಿದ ಧ್ವನಿಯಲ್ಲಿ ಪ್ರಶ್ನಿಸಿದರು. ಮೊದಲು ಸಚಿವ ನಾಗೇಂದ್ರ ಅವರ ರಾಜೀನಾಮೆ ಪಡೆಯಬೇಕು ಎಂದು ಆಗ್ರಹಿಸಿದರು.

ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಸೇರಿದಂತೆ ಬಿಜೆಪಿಯ ಹಲವು ಶಾಸಕರು ಇದಕ್ಕೆ ದನಿಗೂಡಿಸಿದರು. ಜೆಡಿಎಸ್ ಶಾಸಕರೂ ಬೆಂಬಲ ವ್ಯಕ್ತಪಡಿಸಿದರು. ಈ ಹಂತದಲ್ಲಿ ಆಡಳಿತ ಪಕ್ಷದ ಕಡೆಯಿಂದ ತೀವ್ರ ಆಕ್ಷೇಪ ವ್ಯಕ್ತವಾಗಿ, ಪರಸ್ಪರ ಆರೋಪ-ಪ್ರತ್ಯಾರೋಪಗಳು ನಡೆದು ಸದನ ಗೊಂದಲಮಯವಾಯಿತು.

ಅಶೋಕ್ ಮಾತನಾಡಿ, ಇದೇ ಸದನದಲ್ಲಿ ಈ ಹಿಂದೆ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ ರೂ. ಅಕ್ರಮ ಹಣ ವರ್ಗಾವಣೆ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಆಗಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವರ ರಾಜೀನಾಮೆ ಪಡೆದಿದ್ದರು. ಅವರನ್ನು ಸಂಪುಟದಿಂದ ತೆಗೆದಿದ್ದು ಏಕೆ? ಮತ್ತೆ ಸಂಪುಟಕ್ಕೆ ಸೇರ್ಪಡೆ ಮಾಡಿಕೊಂಡಿರುವುದು ಏಕೆ? ಎಂಬುದನ್ನು ಸದನಕ್ಕೆ ತಿಳಿಸಬೇಕು. ಸಚಿವ ನಾಗೇಂದ್ರ ಅವರ ರಾಜೀನಾಮೆ ಪಡೆಯುವವರೆಗೂ ಸದನ ನಡೆಯಲು ಬಿಡುವುದಿಲ್ಲ ಎಂದು ಆಗ್ರಹಿಸಿದರು.

ಈ ಹಂತದಲ್ಲಿ ಸಭಾಧ್ಯಕ್ಷ ಜಿ.ಎಸ್. ಪಾಟೀಲ್ ಅವರು, ನೋಟಿಸ್ ನೀಡಿ ವಿಷಯ ಪ್ರಸ್ತಾಪಿಸಬೇಕು. ಏಕಾಏಕಿ ಈ ವಿಚಾರವನ್ನು ಪ್ರಸ್ತಾಪಿಸಿದರೆ ಹೇಗೆ. ನಿಯಮಾವಳಿಗಳ ಪ್ರಕಾರ ಸದನ ನಡೆಯಬೇಕಲ್ಲವೇ ಎಂದು ಪ್ರಶ್ನಿಸಿದರು. ಆದರೂ ಬಿಜೆಪಿ ಶಾಸಕರು ಸಭಾಧ್ಯಕ್ಷರ ಮನವಿಗೆ ಕಿವಿಗೊಡದೆ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಬಿಜೆಪಿ ಮತ್ತು ಜೆಡಿಎಸ್ ಶಾಸಕರು ತಮ್ಮ ಸ್ಥಾನಗಳಲ್ಲಿ

### ವಿಧಾನಸಭೆಯಲ್ಲಿ ಕೋಲಾಹಲ, ಮುಂದೂಡಿಕೆ



ಎದ್ದುನಿಂತು ಸಚಿವ ನಾಗೇಂದ್ರ ಅವರ ರಾಜೀನಾಮೆಗೆ ಪಟ್ಟು ಹಿಡಿದರು.

ಡಾ. ಸಿ.ಎನ್. ಅಶ್ವತ್ಥ ನಾರಾಯಣ ಮಾತನಾಡಿ, ನಾಗೇಂದ್ರ ಅವರನ್ನು ಸಂಪೂರ್ಣವಾಗಿ ಸಚಿವ ಸಂಪುಟದಿಂದ ವಜಾಗೊಳಿಸಬೇಕು. ಈ ಹಿಂದೆ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದಾಗ ಅವರ ರಾಜೀನಾಮೆ ಪಡೆದಿದ್ದರು. ಚಾರ್ಜ್‌ಶೀಟ್‌ನಲ್ಲಿ ನಾಗೇಂದ್ರ ಅವರನ್ನು ಮೊದಲನೇ ಆರೋಪಿಯಾಗಿ ಉಲ್ಲೇಖಿಸಲಾಗಿದೆ ಎಂದು ಹೇಳಿದರು.


ಈ ವೇಳೆ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಆಕ್ಷೇಪ ವ್ಯಕ್ತಪಡಿಸಿ ಮಾತನಾಡಲು ಮುಂದಾದರು. ಬಿಜೆಪಿ ಶಾಸಕರು ಘೋಷಣೆಗಳನ್ನು ಮತ್ತಷ್ಟು ತೀವ್ರಗೊಳಿಸಿ ಸಚಿವರನ್ನು ವಜಾಗೊಳಿಸಲೇಬೇಕು ಎಂದು ಒತ್ತಾಯಿಸಿದರು.

ಗದ್ದಲದ ನಡುವೆ ಮಾತನಾಡಿದ ಕೃಷ್ಣ ಬೈರೇಗೌಡ, ನಿಯಮಾವಳಿ ಉಲ್ಲೇಖಿಸಿ, ಯಾವುದೇ ಸಚಿವರ ವಿರುದ್ಧ ಸುಖಾಸುಮ್ಮನೆ ಆರೋಪ ಮಾಡಲು ಅವಕಾಶ ನೀಡಬಾರದು. ಈ ವಿಚಾರದಲ್ಲಿ ಸಭಾಧ್ಯಕ್ಷರು ಆದೇಶ ನೀಡಬೇಕು ಎಂದು ಒತ್ತಾಯಿಸಿದರು.

ಗೂಂಡಾ ವರ್ತನೆಗೆ ಅವಕಾಶ ನೀಡಬಾರದು. ಸದನದ ಮೇಲೆ ದಬ್ಬಾಳಿಕೆ ನಡೆಸಲು ಅವಕಾಶ ನೀಡದೆ ಕಡಿವಾಣ ಹಾಕಬೇಕು ಎಂದು ಅವರು ಆಗ್ರಹಿಸಿದರು.ಇದಕ್ಕೆ ಆಡಳಿತ ಪಕ್ಷದ ಹಲವು ಸದಸ್ಯರು ಬಿಜೆಪಿ ನಿಲುವನ್ನು ವಿರೋಧಿಸಿ ಎದ್ದು ನಿಂತು ಮಾತನಾಡಲು ಮುಂದಾದರು. ಗದ್ದಲ ಮತ್ತು ಗೊಂದಲದಿಂದಾಗಿ ಸದನದಲ್ಲಿ ಏನೂ ಕೇಳದ ಪರಿಸ್ಥಿತಿ ನಿರ್ಮಾಣವಾಯಿತು.

ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ ಪಾಟೀಲ್ ಮಾತನಾಡಿ, ಮಾತನಾಡಲು ನಿಮಗೆ ನೈತಿಕ ಹಕ್ಕಿಲ್ಲ. ಸದನ ನಡೆಸಲು ನಿಮಗೆ ಇಷ್ಟವಿಲ್ಲ ಎಂದು ಪ್ರತಿಪಕ್ಷದ ಸದಸ್ಯರನ್ನು ಛೇಡಿಸಿದರು. ಮತ್ತೆ ಅಶೋಕ್ ಮಾತನಾಡಿ, ಸಚಿವರು ರಾಜೀನಾಮೆ ನೀಡಿದ ಬಳಿಕವೇ ಈ ಕುರಿತು ಚರ್ಚೆ ನಡೆಸೋಣ ಎಂದು ಹೇಳಿದರು. ಸಭಾಧ್ಯಕ್ಷರ ಮನವಿಗೂ ಯಾರೂ ಕಿವಿಗೊಡದ ಹಿನ್ನೆಲೆಯಲ್ಲಿ ಸದನದ ಕಾರ್ಯಕಲಾಪವನ್ನು ಕೆಲಕಾಲ ಮುಂದೂಡಲಾಯಿತು.

## ನಿತ್ಯ ಪಂಚಾಂಗ 18.08.2026 ಮಂಗಳವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ಆಷಾಢ-ಶ್ರಾವಣ ಮಾಸ

ಶ್ರಾವಣ ಶುದ್ಧ, ಷಷ್ಠಿ, ಚಿತ್ತ ನಕ್ಷತ್ರ, ಮಂಗಳಗೌರೀ ವ್ರತ, ಕಲ್ಕಿ ಜಯಂತಿ, ಸಿರಿಯಾಳ/ನೀಲಾಂಬಿಕಾ ಷಷ್ಠಿ, ಸ್ಕಂದ ಪವಿತ್ರಾರೋಪಣ, ವಿದ್ಯಾಪೂರ್ಣತೀರ್ಥ ಆರಾಧನೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅನ್ಯಾಯ ತಡೆಯಲು ಸರ್ಕಾರ ಮಧ್ಯಪ್ರವೇಶಿಸಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ ನಾಗರಿಕ ಸಂಘಟನೆಗಳ ಮನವಿ

ಬೆಂಗಳೂರು, ಆ 17: ಸಿಎಂ ಡಿ ಕೆ ಶಿವಕುಮಾರ್ ಅವರನ್ನು ಬಹುಭಾಷ ನಟ ಪ್ರಕಾಶ್ ರಾಜ್ ನೇತೃತ್ವದಲ್ಲಿ 'ಎದ್ದೇಳು ಕರ್ನಾಟಕ' ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ವಿಧಾನಸೌಧದಲ್ಲಿ ಸೋಮವಾರ ಭೇಟಿ ಮಾಡಿ ಎಸ್‌ಐಆರ್ ಲೋಪದೋಷಗಳ ಕುರಿತು ಸಮಾಲೋಚನೆ ನಡೆಸಿದರು. "ಕರ್ನಾಟಕದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯಿಂದ ಅರ್ಹ ಮತದಾರರಿಗೆ ಅನ್ಯಾಯವಾಗುತ್ತಿದೆ. ಈ ಕುರಿತು ತುರ್ತು ಕ್ರಮ ಕೈಗೊಳ್ಳಬೇಕು" ಎಂದು ನಾಗರಿಕ ಸಂಘಟನೆಗಳು ಸಿಎಂ ಡಿ.ಕೆ.ಶಿವಕುಮಾರ್‌ಗೆ ಮನವಿ ಸಲ್ಲಿಸಿದವು.



ವಿಧಾನಸೌಧದಲ್ಲಿ ಸೋಮವಾರ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ನಟ ಪ್ರಕಾಶ್ ರಾಜ್ ನೇತೃತ್ವದಲ್ಲಿ ಎದ್ದೇಳು ಕರ್ನಾಟಕ' ಮತ್ತಿತರ ಸಂಘಟನೆಗಳ ಪ್ರತಿನಿಧಿಗಳು ಭೇಟಿಮಾಡಿ ಎಸ್ ಐ ಆರ್ ಲೋಪದೋಷದ ಬಗ್ಗೆ ಸಮಾಲೋಚನೆ ನಡೆಸಿ, ಮನವಿ ಪತ್ರ ಸಲ್ಲಿಸಿದರು.

ದೇಶದಲ್ಲೇ ಕರ್ನಾಟಕದಲ್ಲಿ ಅತಿ ಹೆಚ್ಚಿನ ಪ್ರಮಾಣದ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕಿತ್ತೊಗೆಯುವ ಪ್ರಕ್ರಿಯೆ ನಡೆಯುತ್ತಿದೆ.

ಸುಮಾರು 1.09 ಕೋಟಿ ಮತದಾರರು ಎಎಸ್‌ಡಿಡಿಓ ಪಟ್ಟಿಯಲ್ಲಿದ್ದು, ಬೆಂಗಳೂರಿನಲ್ಲಿ ಮತದಾರರ ಪಟ್ಟಿಯಿಂದ ಹೆಚ್ಚಿನ ಪ್ರಮಾಣದ ಹೆಸರುಗಳು ಕಣ್ಮರೆಯಾಗುವ ಸಾಧ್ಯತೆ ಇದೆ. ರಾಜ್ಯದ 3,000 ಬೂತ್‌ಗಳಲ್ಲಿ ಹೆಸರು ರದ್ದಾಗುವ ಪ್ರಮಾಣ ಶೇ.60ಕ್ಕಿಂತ ಹೆಚ್ಚಾಗಿದೆ" ಎಂದು ವಿವರಿಸಿದರು.

ಎಸ್ ಐಆರ್ ಪ್ರಕ್ರಿಯೆಯನ್ನು ನ್ಯಾಯ ಸಮ್ಮತವಾಗಿ ನಡೆಸಲು ಮುಖ್ಯಮಂತ್ರಿಗಳ ಮುಂದೆ ಹಲವು ಬೇಡಿಕೆಗಳನ್ನು ಇಟ್ಟ ಪ್ರತಿನಿಧಿಗಳು, ಎಸ್‌ಐಆರ್ ಪ್ರಕ್ರಿಯೆಯನ್ನು ಕನಿಷ್ಠ 3 ತಿಂಗಳು ವಿಸ್ತರಿಸಿ, ಪ್ರಕ್ರಿಯೆ ಪೂರ್ಣಗೊಳಿಸಲು ಒಂದು ವರ್ಷ ಕಾಲಾವಕಾಶ ನೀಡುವಂತೆ ಚುನಾವಣಾ ಆಯೋಗವನ್ನು ರಾಜ್ಯ ಸರ್ಕಾರ ಒತ್ತಾಯಿಸಬೇಕು ಎಂದರು.

ಸ್ಥಳಾಂತರ, ಗೈರು ಮತ್ತು ಇತರರು ವರ್ಗದಲ್ಲಿರುವವರನ್ನು ತಕ್ಷಣವೇ ಡಿಲೀಟ್ ಮಾಡದೆ, ಬಿಎಲ್‌ಓಗಳು ಮನೆಮನೆಗೆ ತೆರಳಿ ಪರಿಶೀಲನೆ ನಡೆಸಬೇಕು. ಸ್ಥಳಾಂತರಗೊಂಡ ಮತದಾರರಿಗೆ ಮತ ವರ್ಗಾವಣೆಗೆ ಅಗತ್ಯವಿರುವ ಫಾರಂ ಹಾಗೂ ಹೊಸ ಮತದಾರರಿಗೆ ನೋಂದಣಿಗೆ ಅವಕಾಶ ಒದಗಿಸಬೇಕು" ಎಂದು ಮನವಿ ಮಾಡಿದರು.

ಅರ್ಹ ಮತದಾರರನ್ನು ಮತಪಟ್ಟಿಯಲ್ಲಿ ಉಳಿಸಿಕೊಳ್ಳಲು ರಾಜ್ಯ ಸರ್ಕಾರವೇ ಮುಂದಾಗಬೇಕು. ಸರ್ಕಾರದ ಸಿಬ್ಬಂದಿ ಮನೆಮನೆಗೆ ತೆರಳಿ ಮಾಹಿತಿ ನೀಡಬೇಕು ಹಾಗೂ ಸಹಾಯವಾಣಿ ಕೇಂದ್ರಗಳನ್ನು ಸ್ಥಾಪಿಸಬೇಕು" ಎಂದು ಸಲಹೆ ನೀಡಲಾಗಿದೆ.

"ಚುನಾವಣಾ ಆಯೋಗ ಕ್ರಮ ಕೈಗೊಳ್ಳಲು ಒಪ್ಪದಿದ್ದರೆ ವಿಧಾನಸಭೆಯಲ್ಲಿ ಈ ಕುರಿತು ಚರ್ಚಿಸಿ, ಸರ್ಕಾರವೇ ನಿರ್ಣಯ ಕೈಗೊಂಡು ಕೇಂದ್ರ ಚುನಾವಣಾ ಆಯೋಗದ ಮೇಲೆ ಒತ್ತಡ ಹೇರಬೇಕು. ಅಗತ್ಯವಿದ್ದರೆ ಸುಪ್ರೀಂ ಕೋರ್ಟ್ನ ಮೊರೆ ಹೋಗುವ ಮೂಲಕ ರಾಜ್ಯದ ಹಿತ ಕಾಪಾಡಬೇಕು" ಎಂದು ನಾಗರಿಕ ಸಂಘಟನೆಗಳು ಮುಖ್ಯಮಂತ್ರಿ ಅವರಲ್ಲಿ ಮನವಿ ಮಾಡಿವೆ.

ಸಚಿವ ಪ್ರಿಯಾಂಕ್ ಖರ್ಗೆ, ಮಾಜಿ ಸಚಿವೆ ಬಿ ಟಿ ಲಲಿತಾ ನಾಯಕ್, ಸಿಎಂ ಆರ್ಥಿಕ ಸಲಹೆಗಾರ ಅತೀಕ್ ಅಹ್ಮದ್, ಎದ್ದೇಳು ಕರ್ನಾಟಕ ಸಂಘಟನೆಯ ತಾರಾ ರಾವ್, ನೂರ್ ಶ್ರೀಧರ್, ಕರ್ನಾಟಕ ಮುಸ್ಲಿಂ ಮುತ್ತಹಿದ ಮಹಾಜ್ ಸಂಘಟನೆಯ ಮೊಹಮ್ಮದ್ ಯೂಸುಫ್ ಕನ್ನಿ, ತಫೀಮುಲ್ಲ ಮಾರುಫ್, ನಮ್ಮ ಮತ ನಮ್ಮ ಹಕ್ಕು ವೇದಿಕೆ'ಯ ವಿನಯ್ ಶ್ರೀನಿವಾಸ್, ಐಶ್ವರ್ಯ, ಸುನಿಲ್ ಸಿರಸಂಗಿ, ನಾಗರಿಕ ಮತ ಕಾವಲು ಸಮಿತಿಯ ಕೆ.ಎಲ್.ಅಶೋಕ್, ಆಶೀರ್ವಾದ್ ಸಂಘಟನೆಯ ಫಾ. ಅರುಣ್ ಲೂಯಿಸ್, ಎಂಎಸಿ ಸಂಘಟನೆಯ ಸೈಯದ್ ತೌಸಿಫ್ ಮಸೂದ್, ಮೊಹಮ್ಮದ್ ಇಸ್ಮಾಯಿಲ್ ಮತ್ತಿತರರು ಇದ್ದರು.

## ಯೋಜನೆಗಳ ಅನುಷ್ಠಾನಕ್ಕೆ ಕಾಲಮಿತಿ ನಿಗದಿ ಅಧಿಕಾರ ಸ್ವೀಕರಿಸಿದ ಮೊದಲ ದಿನವೇ ಸಚಿವ ರಘುಮೂರ್ತಿ ಸ್ಪಷ್ಟ ಸೂಚನೆ



ಬೆಂಗಳೂರು, ಆ.17: ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಸಚಿವರಾಗಿ ಅಧಿಕಾರ ಸ್ವೀಕರಿಸಿದ ಮೊದಲ ದಿನವೇ ಟಿ. ರಘುಮೂರ್ತಿ ಅವರು ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಇಲಾಖೆಯ ಯೋಜನೆಗಳ ಅನುಷ್ಠಾನದಲ್ಲಿ ಯಾವುದೇ ರೀತಿಯ ವಿಳಂಬಕ್ಕೆ ಅವಕಾಶ ನೀಡಬಾರದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ವಿಧಾನಸೌಧದಲ್ಲಿರುವ ತಮ್ಮ ಕಚೇರಿಯಲ್ಲಿ ಅಧಿಕಾರಿಗಳ ಜೊತೆ ಪ್ರಗತಿ ಪರಿಶೀಲನ ಸಭೆನಡೆಸಿದ ಅವರು, ಇಲಾಖೆಯ ಕಾರ್ಯವೈಖರಿ ಹಾಗೂ ವಿವಿಧ ಯೋಜನೆಗಳ ಅನುಷ್ಠಾನದ ಸ್ಥಿತಿಗತಿ ಕುರಿತು ಸಚಿವರು ಅಧಿಕಾರಿಗಳಿಂದ ಸಮಗ್ರ ಮಾಹಿತಿ ಪಡೆದುಕೊಂಡರು.

ಸಭೆಯಲ್ಲಿ ಮಾತನಾಡಿದ ಸಚಿವ ರಘುಮೂರ್ತಿ, ಇಲಾಖೆಯಲ್ಲಿ ಈಗಾಗಲೇ ಕೈಗೊಂಡಿರುವ ಎಲ್ಲ ಯೋಜನೆಗಳ ಅನುಷ್ಠಾನದ ಸಮಗ್ರ ವರದಿಯನ್ನು ಸಲ್ಲಿಸುವಂತೆ ಅಧಿಕಾರಿ ಗಳಿಗೆ ಸೂಚನೆ ನೀಡಿದರು.

ಯಾವ ಯೋಜನೆಗಳು ಯಾವ ಹಂತದಲ್ಲಿದೆ, ಬಾಕಿ ಇರುವ ಕಾಮಗಾರಿಗಳು ಯಾವುವು ಹಾಗೂ ಅವುಗಳನ್ನು ಪೂರ್ಣಗೊಳಿಸಲು ಅಗತ್ಯವಿರುವ ಕ್ರಮಗಳೇನು ಎಂಬುದರ ಕುರಿತು ಸ್ಪಷ್ಟ ಮಾಹಿತಿ ನೀಡಬೇಕು ಎಂದು ನಿರ್ದೇಶನ ನೀಡಿದರು.

ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಯೋಜನೆಗಳು ನೇರವಾಗಿ ಸಮಾಜದ ದುರ್ಬಲ ವರ್ಗಗಳ ಅಭಿವೃದ್ಧಿಗೆ ಸಂಬಂಧಿಸಿರುವುದರಿಂದ ಅವುಗಳ ಅನುಷ್ಠಾನದಲ್ಲಿ ವಿಳಂಬವಾಗ ಬಾರದು ಎಂಬುದನ್ನು ಸಚಿವರು ಸಭೆಯಲ್ಲಿ ಸ್ಪಷ್ಟಪಡಿಸಿದರು.

ಬಾಕಿ ಇರುವ ಯೋಜನೆಗಳನ್ನು ಗುರುತಿಸಿ, ಅವುಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚಿಸಿದರು. ವಿಶೇಷವಾಗಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಸಂಬಂಧಿಸಿದ ಯೋಜನೆಗಳು ಶಿಕ್ಷಣ, ವಸತಿ, ಆರ್ಥಿಕ ಸಬಲೀಕರಣ, ಮೂಲ ಸೌಕರ್ಯ ಸೇರಿದಂತೆ ಹಲವು ಕ್ಷೇತ್ರಗಳನ್ನು ಒಳಗೊಂಡಿರುವುದರಿಂದ ಅವುಗಳ ಅನುಷ್ಠಾನದಲ್ಲಿ ಸಮನ್ವಯ ಮತ್ತು ವೇಗ ಅಗತ್ಯಎಂದು ಹೇಳಿದರು

ಕಾರ್ಯದರ್ಶಿ ಕನಕವಲ್ಲಿ, ವಾಲ್ಮೀಕಿ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಅಶೋಕ್ ದುಡಘಂಟಿ, ಇಲಾಖೆಯ ನಿರ್ದೇಶಕ ಅಶೋಕ್ ಸೇರಿದಂತೆ ಹಲವು ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

## ಖರ್ಗೆ ಭಾಷಣ ಮಾಡಿದ ಸ್ಥಳ ಶುದ್ಧೀಕರಣ ವಿಧಾನ ಪರಿಷತ್‌ನಲ್ಲಿ ಖಂಡನಾ ನಿರ್ಣಯ ಅಂಗೀಕಾರ

ಬೆಂಗಳೂರು, ಆ.17: ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಉತ್ತರಾಖಂಡದಲ್ಲಿ ಭಾಷಣ ಮಾಡಿದ ಸ್ಥಳವನ್ನು ಶುದ್ಧೀಕರಣ ಮಾಡಿದ ಪ್ರಕರಣ ಖಂಡಿಸಿ ವಿಧಾನ ಪರಿಷತ್ತಿನಲ್ಲಿ ಖಂಡನಾ ನಿರ್ಣಯ ಮಂಡನೆ ಮಾಡಿ ಅಂಗೀಕರಿಸಲಾಯಿತು. ಪರಿಷತ್ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯ ಜಕ್ಕಪ್ಪನವರ್ ಖಂಡನಾ ನಿರ್ಣಯ ಮಂಡನೆ ಮಾಡಿದರು. ನಿರ್ಣಯ ಮಂಡನೆ ವೇಳೆ ಬಿಜೆಪಿ ವಿರುದ್ಧ ಆರೋಪ ಮಾಡಿದರು. ಈ ವೇಳೆ ಸದನದಲ್ಲಿ ಗದ್ದಲ ಗಲಾಟೆಯೂ ಆಯ್ತು. ಸಚಿವ ಬಿ.ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಪ್ರತಿಪಕ್ಷಗಳು ಪ್ರತಿಭಟನೆ ಮಾಡುತ್ತಾ ಇದ್ದುದರಿಂದ ಧ್ವನಿಮತದ ಮೂಲಕ ಖಂಡನಾ ನಿರ್ಣಯ ಸದನದಲ್ಲಿ ಅಂಗೀಕಾರ ಆಯ್ತು.

## ಪರಿಷತ್ ಉಪಸಭಾಪತಿ ಹುದ್ದೆಗೆ ಉಮಾಶ್ರೀ ನಾಮಪತ್ರ, ಇಂದು ಚುನಾವಣೆ



ಬೆಂಗಳೂರು, ಆ.17: ವಿಧಾನ ಪರಿಷತ್ತಿನ ಉಪಸಭಾಪತಿ ಹುದ್ದೆಗೆ ಎಂಎಲ್‌ಸಿ ಉಮಾಶ್ರೀ ನಾಮಪತ್ರ ಸಲ್ಲಿಸಿದ್ದಾರೆ. ಮಂಗಳವಾರ ಹೊಸ ಉಪಸಭಾಪತಿಯ ಆಯ್ಕೆ ನಡೆಯಲಿದೆ. ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಸಚಿವ ಮತ್ತು ವಿಧಾನ ಪರಿಷತ್ ಸಭಾ ನಾಯಕ ಯತೀಂದ್ರ ಅವರ ಸಮ್ಮುಖದಲ್ಲಿ ಉಮಾಶ್ರೀ ಪರಿಷತ್ತಿನ ಕಾರ್ಯದರ್ಶಿ ಜ್ಯೋತಿ ಅವರಿಗೆ ನಾಮಪತ್ರ ಸಲ್ಲಿಸಿದರು.2021ರ ಚುನಾವಣೆಯಲ್ಲಿ ಚಿಕ್ಕಮಗಳೂರು ಕ್ಷೇತ್ರದಿಂದ ಆಯ್ಕೆಯಾಗಿದ್ದ ಬಿಜೆಪಿಯ ಕೆ ಪ್ರಾಣೇಶ್ ಅವರ ಆಯ್ಕೆಯನ್ನು ಕರ್ನಾಟಕ ಹೈಕೋರ್ಟ್ ಅಸಿಂಧುಗೊಳಿಸಿದ ಹಿನ್ನೆಲೆಯಲ್ಲಿ, ಅವರು ಉಪಸಭಾಪತಿ ಹುದ್ದೆ ಹಾಗೂ ವಿಧಾನ ಪರಿಷತ್ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದರಿಂದ ಈ ಹುದ್ದೆ ತೆರವಾಗಿತ್ತು. 2013ರಲ್ಲಿ ಉಮಾಶ್ರೀ ತೇರದಾಳ ವಿಧಾನಸಭಾ ಕ್ಷೇತ್ರದಿಂದ ಕಾಂಗ್ರೆಸ್ ಶಾಸಕಿಯಾಗಿ ಆಯ್ಕೆಯಾಗಿದ್ದರು. ಅವರು ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರ್ಕಾರದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರು ಹಾಗೂ ಹಿರಿಯ ನಾಗರಿಕರ ಸಬಲೀಕರಣ, ಹಾಗೂ ಕನ್ನಡ ಭಾಷೆ ಮತ್ತು ಸಂಸ್ಕೃತಿ ಇಲಾಖೆಯ ಸಚಿವೆಯಾಗಿ ಸೇವೆ ಸಲ್ಲಿಸಿದರು. ಕನ್ನಡ ಚಿತ್ರರಂಗದ ಪ್ರಮುಖ ಪೋಷಕ ನಟಿಯಾಗಿ ಗುರುತಿಸಿಕೊಂಡಿರುವ ಉಮಾಶ್ರೀ ಅವರಿಗೆ 2008ರ 'ಗುಲಾಬಿ ಟಾಕೀಸ್' ಚಿತ್ರದಲ್ಲಿನ ನಟನೆಗಾಗಿ ಅತ್ಯುತ್ತಮ ನಟಿ ವಿಭಾಗದಲ್ಲಿ ರಾಷ್ಟ್ರ ಪ್ರಶಸ್ತಿ ಪಡೆದಿದ್ದಾರೆ.

## ಉಪಸಭಾಧ್ಯಕ್ಷ ಹುದ್ದೆಗೆ ಶಾಸಕ ಮಂಕಾಳು ವೈದ್ಯ ನಾಮಪತ್ರ ಸಲ್ಲಿಕೆ



ಬೆಂಗಳೂರು, ಆ.17: ವಿಧಾನಸಭೆ ಉಪಸಭಾಧ್ಯಕ್ಷ (ಡೆಪ್ಯೂಟಿ ಸ್ಪೀಕರ್) ಹುದ್ದೆಗೆ ಭಟ್ಕಳ ಕ್ಷೇತ್ರದ ಶಾಸಕ ಮಂಕಾಳು ವೈದ್ಯ ಅವರು ಅಧಿಕೃತವಾಗಿ ನಾಮಪತ್ರ ಸಲ್ಲಿಸಿದ್ದಾರೆ. ಸಚಿವ ಸಂಪುಟ ಪುನಾರಚನೆ ಹಾಗೂ ವಿಸ್ತರಣೆಯ ಹಿನ್ನೆಲೆಯಲ್ಲಿ ಈ ಬೆಳವಣಿಗೆ ನಡೆದಿದ್ದು, ಪಕ್ಷದ ಆಂತರಿಕ ವಲಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದ ಸರ್ಕಾರದಲ್ಲಿ ಸಚಿವ ಸ್ಥಾನ ವಂಚಿತರಾಗಿದ್ದ ಮಂಕಾಳು ವೈದ್ಯ ಅವರ ಅಸಮಾಧಾನ ಶಮನಗೊಳಿಸಲು ಈ ಹುದ್ದೆ ನೀಡಲಾಗುತ್ತಿದೆ ಎನ್ನಲಾಗಿದೆ. ಪಕ್ಷದ ಹಿರಿಯ ನಾಯಕರ ಸಲಹೆಯಂತೆ ಅವರು ಈ ಜವಾಬ್ದಾರಿಯನ್ನು ವಹಿಸಿಕೊಳ್ಳಲು ಮುಂದಾಗಿದ್ದು, ಶಾಸಕಾಂಗ ಕಲಾಪಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲಿದ್ದಾರೆ. ವಿಧಾನಸೌಧದಲ್ಲಿ ವಿಧಾನಸಭೆ ಕಾರ್ಯದರ್ಶಿ ಅವರಿಗೆ ಮಂಕಾಳು ವೈದ್ಯ ಅವರು ತಮ್ಮ ನಾಮಪತ್ರದ ಪ್ರತಿಯನ್ನು ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ನಿಯಮಾನುಸಾರ ದಾಖಲೆಗಳನ್ನು ಸಲ್ಲಿಸಲಾಯಿತು.ನಾಮಪತ್ರ ಸಲ್ಲಿಕೆಯ ವೇಳೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಲಕ್ಷ್ಮಣ ಸವದಿ, ಎಚ್.ಸಿ. ಬಾಲಕೃಷ್ಣ, ಸಿಎಂ ರಾಜಕೀಯ ಕಾರ್ಯದರ್ಶಿ ಎ.ಎಸ್. ಪೊನ್ನಣ್ಣ ಹಾಗೂ ಶಾಸಕ ಶಿವರಾಮ್ ಹೆಬ್ಬಾರ್ ಸೇರಿದಂತೆ ಹಲವು ಪ್ರಮುಖ ನಾಯಕರು ಉಪಸ್ಥಿತರಿದ್ದು ಶುಭ ಹಾರೈಸಿದರು.

## ದೇಶಭಕ್ತಿ ವಿಚಾರದಲ್ಲಿ ಬಿಜೆಪಿ, ಆರ್‌ಎಸ್‌ಎಸ್‌ನಿಂದ ಪ್ರಮಾಣಪತ್ರದ ಅಗತ್ಯವಿಲ್ಲ: ಸಚಿವ ಪ್ರಿಯಾಂಕ್ ಖರ್ಗೆ



**ಬೆಂಗಳೂರು, ಆ.17:** ದೇಶಭಕ್ತಿಯ ವಿಚಾರದಲ್ಲಿ ಬಿಜೆಪಿ, ಆರ್‌ಎಸ್‌ಎಸ್ ಹಾಗೂ ಎಬಿವಿಪಿಯಿಂದ ಕಾಂಗ್ರೆಸ್‌ಗೆ ಪ್ರಮಾಣಪತ್ರದ ಅಗತ್ಯವಿಲ್ಲ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಯುವ ಮೋರ್ಚಾ, ಎಬಿವಿಪಿ ಅಥವಾ ಆರ್‌ಎಸ್‌ಎಸ್ ಆಗಿರಲಿ, ಇವರಿಂದ ನಾವು ದೇಶಭಕ್ತರು ಅಥವಾ ದೇಶದ್ರೋಹಿಗಳು ಎಂಬ ಪ್ರಮಾಣಪತ್ರ ಪಡೆಯುವ ಅಗತ್ಯವಿಲ್ಲ. ಸ್ವಾತಂತ್ರ್ಯ ಹೋರಾಟಕ್ಕೆ ಇವರ ಕೊಡುಗೆ ಏನೂ ಇಲ್ಲ. ಇವರ ರಾಜಕೀಯ ಮಾರ್ಗದರ್ಶಕರು 52 ವರ್ಷಗಳ ಕಾಲ ರಾಷ್ಟ್ರಧ್ವಜವನ್ನೇ ಹಾರಿಸಿರಲಿಲ್ಲ ಎಂದು ಆರೋಪಿಸಿದರು.

ಸ್ವಾತಂತ್ರ್ಯ ದಿನಾಚರಣೆಯಂದು ವಂದೇ ಮಾತರಂ ಗೀತೆಯ ಗಾಯನಕ್ಕೆ ಅಡ್ಡಿಪಡಿಸಿದ ಆರೋಪದ ಹಿನ್ನೆಲೆಯಲ್ಲಿ ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್ ದಾಖಲಾಗಿರುವ ಬೆನ್ನಲ್ಲೇ ಪ್ರಿಯಾಂಕ್ ಖರ್ಗೆ ಈ ಹೇಳಿಕೆ ನೀಡಿದ್ದಾರೆ. ಇದೇ ವೇಳೆ ವಿರೋಧ ಪಕ್ಷಗಳ ಆರೋಪಗಳನ್ನು ತಳ್ಳಿಹಾಕಿದ ಅವರು, ಸಂಘ ಪರಿವಾರ ರಾಷ್ಟ್ರೀಯ ಸಂಕೇತಗಳನ್ನು ರಾಜಕೀಯ ಉದ್ದೇಶಗಳಿಗೆ ಬಳಸಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿದರು.

ಯುಜಿ–ನೆಟ್ ಪರೀಕ್ಷೆ ಮುಂದೂಡಿಕೆ ಹಾಗೂ ಕೇಂದ್ರ ಶಿಕ್ಷಣ ಸಚಿವ ಪ್ರಹ್ಲಾದ್ ಜೋಶಿ ಅವರ ನಾಯಕತ್ವದ ಕುರಿತು ಮಾತನಾಡಿದ ಪ್ರಿಯಾಂಕ್ ಖರ್ಗೆ, ವಿದ್ಯಾರ್ಥಿಗಳ ಸಮಸ್ಯೆಗಳನ್ನು ಕೇಂದ್ರ ಸರ್ಕಾರ ಸರಿಯಾಗಿ ನಿರ್ವಹಿಸುತ್ತಿಲ್ಲ. ಧರ್ಮೇಂದ್ರ ಪ್ರಧಾನ್ ಅವರನ್ನು ಹಲವು ತಿಂಗಳುಗಳ ಕಾಲ ಹುದ್ದೆಯಿಂದ ಕೆಳಗಿಳಿಸದೆ ಕೇಂದ್ರ ಸರ್ಕಾರ ವಿಳಂಬ ಮಾಡಿತು. ದೇಶಾದ್ಯಂತ ಲಕ್ಷಾಂತರ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದ ಬಳಿಕ ಅನಿವಾರ್ಯವಾಗಿ ಅವರು ರಾಜೀನಾಮೆ ನೀಡಿದರು ಎಂದು ಆರೋಪಿಸಿದರು. ಶಿಕ್ಷಣ ಸಚಿವರ ಬದಲಾವಣೆಯ ಕುರಿತು ಮಾತನಾಡಿದ ಅವರು, ಒಬ್ಬರ ಬದಲು ಮತ್ತೊಬ್ಬರನ್ನು ನೇಮಿಸಲಾಗಿದೆ. ಆಗಲೇ ನಾನು ಹೇಳಿದ್ದೆ, ಇದು ಹೊಸ ಬಾಟಲಿಯಲ್ಲಿರುವ ಹಳೆಯ ಮದ್ಯ. ಏನೂ ಬದಲಾಗುವುದಿಲ್ಲ. ಪ್ರಹ್ಲಾದ್ ಜೋಶಿ ಅವರು ಧರ್ಮೇಂದ್ರ ಪ್ರಧಾನ್ ಅವರಷ್ಟೇ ಅಸಮರ್ಥರು ಎಂಬುದು ವಾಸ್ತವ. ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿನ ಅಕ್ರಮಗಳಿಗೂ ಆರ್‌ಎಸ್‌ಎಸ್ ಸಂಪರ್ಕವಿದೆ ಎಂದು ಪ್ರಿಯಾಂಕ್ ಖರ್ಗೆ ಆರೋಪಿಸಿದರು.

## ದೆಹಲಿ ಕನ್ನಡ ಶಾಲೆಯ ಅಭಿವೃದ್ಧಿಗೆ ನಾನು ಕೈಜೋಡಿಸುವೆ: ಅಭಿಜಿತ್ ಗೌಡ






ನವದೆಹಲಿ, ಆ.17: ಕರ್ನಾಟಕ ಸರಕಾರದ ಮುಖ್ಯಮಂತ್ರಿಗಳು ಶಿಕ್ಷಣ ವ್ಯವಸ್ಥೆಯ ಮೇಲೆ ಬಲವಾದ ನಂಬಿಕೆಯುಳ್ಳವರು. ಶಾಲಾ ಸಂರಚನೆ, ಮೂಲಭೂತ ಸೌಕರ್ಯಗಳ ಜೊತೆಗೆ ತಂತ್ರಜ್ಞಾನದ ಅಳವಡಿಕೆಯಿಂದ ಕಲಿಕಾ ಗುಣಮಟ್ಟವನ್ನು ಉನ್ನತೀಕರಿಸಿ ಪ್ರಬುದ್ಧ ನಾಗರಿಕ ಸಮಾಜ ನಿರ್ಮಾಣದ ಧ್ಯೇಯವನ್ನು ಹೊಂದಿದವರು. ರಾಷ್ಟ್ರ ರಾಜಧಾನಿಯಲ್ಲಿ ಸುಮಾರು 65 ವರ್ಷಗಳ ಇತಿಹಾಸವಿರುವ ಕನ್ನಡ ಭಾಷೆಯನ್ನು ಕನ್ನಡಿಗರಿಗೆ ಕನ್ನಡೇತರರಿಗೆ ಕಲಿಸುವ ಕನ್ನಡದ ಏಕೈಕ ಶಿಕ್ಷಣ ಸಂಸ್ಥೆ ದೆಹಲಿ ಕನ್ನಡ ಶಾಲೆಯ ಅಭಿವೃದ್ಧಿಯ ಬಗ್ಗೆ ಮುಖ್ಯಮಂತ್ರಿಗಳ ಗಮನಕ್ಕೆ ತರುತ್ತೇನೆ. ಕನ್ನಡಕ್ಕಾಗಿ ನಿಮ್ಮೊಂದಿಗೆ ನಾನೂ ಕೈಜೋಡಿಸುವೆ ಎಂದು ಮುಖ್ಯಮಂತ್ರಿ ಗಳ ವಿಶೇಷ ಕರ್ತವ್ಯ ಅಧಿಕಾರಿ ಅಭಿಜಿತ್ ಗೌಡ ಹೇಳಿದರು.

ಅವರು ಸೋಮವಾರ ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಗೆ ಭೇಟಿನೀಡಿ ಮಾತನಾಡಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಉಪಾಧ್ಯಕ್ಷೆ ವೀಣಾ ಜಗದೀಶ್ ಮತ್ತು ಗೌರವ ಖಜಾಂಚಿ ಹಾಗೂ ಪ್ರಭಾರ ಗೌರವ ಕಾರ್ಯದರ್ಶಿ ಕಾಶಿನಾಥ ಬಿರಾದರ್ ಅವರು ಶ್ರೀಯುತರನ್ನು ಸ್ವಾಗತಿಸಿ ಸಂಸ್ಥೆಯ ಅಭಿವೃದ್ಧಿ ಕಾರ್ಯ ಹಾಗೂ ಶಾಲಾ ಶೈಕ್ಷಣಿಕ ಚಟುವಟಿಕೆ, ಸಾಧನೆಯ ಕುರಿತಾಗಿ ಪ್ರಸ್ತಾಪಿಸಿದರು.

ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯ ಆಡಳಿತ ಸಮಿತಿ ಸದಸ್ಯರಾದ ಗಿರೀಶ್ ಎಸ್., ಡಾ. ಅಶೋಕ್ ಗೋನಾಳ್, ಮೋಹನ್ ಕುಮಾರ್ ಬಿ. ಎನ್., ಶಾಲಾ ಪ್ರಾಂಶುಪಾಲ ಪ್ರಶಾಂತ್ ಕುಮಾರ್, ಶಿಕ್ಷಕರು, ಪೋಷಕರು ಹಾಜರಿದ್ದರು.

## ನೀಟ್ ರದ್ದುಪಡಿಸಲು ರಾಜ್ಯಕ್ಕೆ ಸಂವಿಧಾನಾತ್ಮಕ ಹಕ್ಕಿದೆ, ಅಧಿವೇಶನದಲ್ಲಿ ಮಸೂದೆ ಜಾರಿಗೊಳಿಸಲಿ: ಡಾ.ಶರಣಪ್ಪ ಕೊಟಗಿ



**ಧಾರವಾಡ, ಆ.17:** ಸಂವಿಧಾನದ 7ನೇ ಅನುಸೂಚಿಯ ಸಮವರ್ತಿ ಪಟ್ಟಿಯ ಪ್ರವೇಶ 25ರಡಿ ಶಿಕ್ಷಣ ಕೇಂದ್ರ ಮತ್ತು ರಾಜ್ಯಗಳೆರಡಕ್ಕೂ ಶಾಸನ ರೂಪಿಸುವ ಅಧಿಕಾರವಿರುವ ವಿಷಯವಾಗಿದೆ. ಆದರೆ, ರಾಷ್ಟ್ರೀಯ ವೈದ್ಯಕೀಯ ಆಯೋಗ ಕಾಯಿದೆ 2019ರ ಸೆಕ್ಷನ್ 14ರ ಮೂಲಕ ಏಕರೂಪದ ನೀಟ್ ಪರೀಕ್ಷೆ ಕಡ್ಡಾಯಗೊಳಿಸಿರುವುದು, ವೈದ್ಯಕೀಯ ಶಿಕ್ಷಣಕ್ಕೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವಲ್ಲಿ ರಾಜ್ಯಗಳಿಗಿದ್ದ ನಿರ್ಣಾಯಕ ಅಧಿಕಾರವನ್ನು ಕರಗಿಸುವ ಹುನ್ನಾರ ಕೇಂದ್ರದ್ದಾಗಿದೆ ಎಂದು ಅಖಿಲ ಭಾರತ ಖಾಸಗಿ ಹೋಮಿಯೋಪತಿ ವೈದ್ಯಕೀಯ ಕಾಲೇಜು ಮಂಡಳಿಯ ರಾಷ್ಟ್ರೀಯ ಮಾಜಿ ಉಪಾಧ್ಯಕ್ಷರು ಮತ್ತು ಕರ್ನಾಟಕ ರಾಜ್ಯ ಖಾಸಗಿ ಹೋಮಿಯೋಪತಿ ವೈದ್ಯಕೀಯ ಮಂಡಳಿಯ ಮಾಜಿ ರಾಜ್ಯಾಧ್ಯಕ್ಷರಾದ ಡಾ. ಶರಣಪ್ಪ ಕೊಟಗಿ ರಾಜ್ಯ ಸರಕಾರಕ್ಕೆ ಆಗ್ರಹಿಸಿ ಕೇಂದ್ರದ ವಿರುದ್ಧ ಹರಿಹಾಯ್ದರು.

ವೈದ್ಯಕೀಯ ಶಿಕ್ಷಣ ಪ್ರವೇಶಕ್ಕಾಗಿ ದೇಶಾದ್ಯಂತ ಕಡ್ಡಾಯಗೊಳಿಸಿರುವ ನೀಟ್ – ರಾಷ್ಟ್ರೀಯ ಅರ್ಹತಾ ಮತ್ತು ದೇಶ ಪರೀಕ್ಷೆ ರದ್ದುಪಡಿಸುವ ನಿರ್ಣಯ ವನ್ನು ಕರ್ನಾಟಕ ವಿಧಾನಮಂಡಲ ಅಧಿವೇಶನದಲ್ಲಿ ಅಂಗೀಕರಿಸಬೇಕೆಂದು ಕರ್ನಾಟಕ ರಾಜ್ಯ ಖಾಸಗಿ ಹೋಮಿಯೋಪತಿ ವೈದ್ಯಕೀಯ ಕಾಲೇಜು ಮಂಡಳಿಯ ಮಾಜಿ ರಾಜ್ಯಾಧ್ಯಕ್ಷ ಶರಣಪ್ಪ ಕೋಟಗಿ ಮುಖ್ಯಮಂತ್ರಿ ಡಿ ಕೆ ಶಿವಕುಮಾರ ಸರಕಾರಕ್ಕೆ ಆಗ್ರಹಿಸಿದ್ದಾರೆ. ಮತ್ತು ಕೇಂದ್ರದ ನೀಟ ಪರೀಕ್ಷಾ ವಿರುದ್ಧ ಎಲ್ಲರೂ ಒಗ್ಗಟ್ಟಾಗಿ ಹೋರಾಟ ತೀವ್ರಗೊಳಿಸಲು ಕರೆ ನೀಡಿದರು.

ತಮಿಳುನಾಡು ರಾಜ್ಯ ಈಗಾಗಲೇ ವಿಧಾನಸಭೆ ಈಗಾಗಲೇ ವೈದ್ಯಕೀಯ ಪದವಿ ಕೋರ್ಸ್‌ಗಳಿಗೆ ಪ್ರವೇಶ ವಿಧೇಯಕ–2021 ಅಂಗೀಕರಿಸಿ ನೀಟ್‌ನಿಂದ ರಾಜ್ಯಕ್ಕೆ ವಿನಾಯಿತಿ ಪಡೆದು +2 ಅಂಕಗಳ ಆಧಾರದ ಮೇಲೆ ವೈದ್ಯಕೀಯ ಈ ಪ್ರವೇಶ ನೀಡುವ ಶಾಸನಾತ್ಮಕ ಮಾರ್ಗವನ್ನು 5 ಅನುಸರಿಸಿದೆ. ಇದಕ್ಕೆ ರಾಷ್ಟ್ರ ಪತಿಯ ಅಂಕಿತ 3 ದೊರೆಯದಿದ್ದರೂ ಸಂವಿಧಾನಬದ್ಧ ಅಧಿಕಾರ ಮತ್ತು ಸಾಮಾಜಿಕ ನ್ಯಾಯದ ನಿಲುವನ್ನು ಪ್ರತಿಪಾದಿಸಿದ ಮಹತ್ವದ ಒಕ್ಕೂಟ ವ್ಯವಸ್ಥೆಯ ಮಾದರಿಯಾಗಿದೆ. ಶಿಕ್ಷಣ ಸಮವರ್ತಿ ಪಟ್ಟಿಯ ವಿಷಯವಾಗಿರುವುದರಿಂದ ಕರ್ನಾಟಕವೂ ಸಂವಿಧಾನದ ಅನುಚ್ಛೇದ 254(2)ರ ಮಾರ್ಗವನ್ನು ಅನುಸರಿಸ ಬೇಕೆಂದು ಡಾ. ಕೊಟಗಿ ಹೇಳಿದರು.

ನೀಟ್ ರದ್ದುಪಡಿಸಿ ವೈದ್ಯಕೀಯ ಪ್ರವೇಶದ ಅಧಿಕಾರವನ್ನು ರಾಜ್ಯಗಳಿಗೆ ಮರಳಿ ನೀಡಬೇಕೆಂದು ಕೇಂದ್ರ ಸರಕಾರಕ್ಕೆ ಒತ್ತಾಯ ಮಾಡುತ್ತೇವೆ ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು, ಶಿಕ್ಷಣ ತಜ್ಞರು, ವೈದ್ಯಕೀಯ ಶಿಕ್ಷಣ ಪರಿಣತರೊಂದಿಗೆ ಸಾರ್ವಜನಿಕ ಸಮಾಲೋಚನೆ ಮಾಡಬೇಕು. ನೀಟ್ ವಿರುದ್ಧ ನಿಲುವು ಹೊಂದಿರುವ ಇತರ ರಾಜ್ಯಗಳೊಂದಿಗೆ ಸಮನ್ವಯ ಸಾಧಿಸಬೇಕು. ಕರ್ನಾಟಕದ ವೈದ್ಯಕೀಯ ಶಿಕ್ಷಣ ಸಂಸ್ಥೆಗಳಿಗೆ ದ್ವಿತೀಯ ಪಿಯುಸಿ ಅಥವಾ+2 ಅಂಕಗಳ ಆಧಾರದ ಮೇಲೆ ಪ್ರವೇಶ ನೀಡುವಂತೆ ರಾಜ್ಯ ನೀತಿ ಸರಕಾರ ರೂಪಿಸಬೇಕು, ತಮಿಳುನಾಡು ಮಾದರಿಯಲ್ಲಿ ಪ್ರತ್ಯೇಕ ವಿಧೇಯಕ ರೂಪಿಸಿ, ರಾಷ್ಟ್ರಪತಿಯ ಅಂಕಿತಕ್ಕಾಗಿ ಕಳುಹಿಸಬೇಕು ಎಂದು ಕರ್ನಾಟಕ ರಾಜ್ಯ ಖಾಸಗಿ ಹೋಮಿಯೋಪಥಿ ವೈದ್ಯಕೀಯ ಮಂಡಳಿಯ ಮಾಜಿ ರಾಜ್ಯಾಧ್ಯಕ್ಷ ಶರಣಪ್ಪ ಕೊಟಗಿ ರಾಜ್ಯ ಸರ್ಕಾರಕ್ಕೆ ಆಗ್ರಹಿಸಿದರು.

ನೀಟ್ ಪರೀಕ್ಷೆ ಶಾಲಾ ಮಹತ್ವ ಕುಗ್ಗಿಸಿ, ವಿದ್ಯಾರ್ಥಿಯ ಎರಡು ವರ್ಷಗಳ ನಿರಂತರ ಕಲಿಕೆ ಮತ್ತು ಪರಿಶ್ರಮವನ್ನು ದಿನದ ಬಹು ಆಯ್ಕೆ ಪರೀಕ್ಷೆಗೆ ಮೊಟಕುಗೊಳಿಸಿದೆ. ದುಬಾರಿ ತರಬೇತಿ ಪಡೆಯಬಲ್ಲ ನಗರ ಪ್ರದೇಶದ ಮತ್ತು ಆರ್ಥಿಕವಾಗಿ ಸಬಲ ಕುಟುಂಬಗಳ ವಿದ್ಯಾರ್ಥಿಗಳಿಗೆ ಇದು ಹೆಚ್ಚಿನ 2 ಅನುಕೂಲ ನೀಡಿದರೆ, ಸರಕಾರಿ ಶಾಲೆ, ಗ್ರಾಮೀಣ ಪ್ರದೇಶ, ಕನ್ನಡ ಮಾಧ್ಯಮ ಹಾಗೂ ಹಿಂದುಳಿದ * ಸಮುದಾಯಗಳ ವಿದ್ಯಾರ್ಥಿಗಳಿಗೆ ಅಸಮಾನ ಸ್ಪರ್ಧೆಯನ್ನು ಸೃಷ್ಟಿಸಿದೆ ಎಂದು ನೀಟ್ ಪರೀಕ್ಷೆಯ ಪರಿಣಾಮವನ್ನು ಡಾ. ಕೊಟಗಿ ತಿಳಿಸಿದರು.

ದ್ವಿತೀಯ ಪಿಯುಸಿ ಅಥವಾ 12 ಪರೀಕ್ಷೆಯೇ ವಿದ್ಯಾರ್ಥಿಯ ಎರಡು ವರ್ಷಗಳ ವಿಷಯ ಜ್ಞಾನ, ನಿರಂತರ ಪರಿಶ್ರಮ ಮತ್ತು ಕಲಿಕಾ ಸಾಧನೆಯನ್ನು ಅಳೆಯುವ ಕಾನೂನುಬದ್ಧ ಅರ್ಹತಾ ಪರೀಕ್ಷೆ ಯಾಗಿದೆ. ಆದ್ದರಿಂದ ಕರ್ನಾಟಕದ ವೈದ್ಯಕೀಯ ಕಾಲೇಜುಗಳಿಗೆ ದ್ವಿತೀಯ ಪಿಯುಸಿಯ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ ವಿಷಯಗಳ ಅಂಕಗಳ ಆಧಾರದ ಮೇಲೆ ಸಂವಿಧಾನಬದ್ಧ ಮೀಸಲು ಮತ್ತು ಸಾಮಾಜಿಕ ನ್ಯಾಯದ ನಿಯಮಗಳನ್ನು ಪಾಲಿಸಿ ಪ್ರವೇಶ ನೀಡಬೇಕು.

ಸರ್ಕಾರ ನಡೆಯುತ್ತಿರುವ ಅಧಿವೇಶನದಲ್ಲಿ ರಾಜ್ಯದ ವಿದ್ಯಾರ್ಥಿಗಳ ಹಿತ ಕಾಪಾಡುವಲ್ಲಿ ಹಿಂಜರಿಯಬಾರದು ಕರ್ನಾಟಕ ರಾಜ್ಯ ಖಾಸಗಿ ಹೋಮಿಯೋಪಥಿ ವೈದ್ಯಕೀಯ ಕಾಲೇಜು ಮಂಡಳಿಯ ಮಾಜಿ ರಾಜ್ಯಾಧ್ಯಕ್ಷ ಶರಣಪ್ಪ ಕೋಟಗಿ ಹೇಳಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಕೂಡ್ಲಿಗಿ ತಾಲೂಕನ್ನು ಬರಪೀಡಿತ ಎಂದು ಘೋಷಿಸಲು ಕ್ರಮ

### ವಿಬಿ ಜಿ ರಾಮ್ ಜಿ ಯೋಜನೆಯಡಿ ವಿಜಯನಗರ ಜಿಲ್ಲೆಯಲ್ಲಿ 38,126 ಕೂಲಿ ಕಾರ್ಮಿಕರಿಗೆ ಉದ್ಯೋಗ: ಡಿಸಿಎಂ

**ಬೆಂಗಳೂರು,ಆ.17:** ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲೂಕಿನಲ್ಲಿ ಮಳೆಯ ಕೊರತೆ ಉಂಟಾಗಿದ್ದು, ಈ ತಾಲೂಕನ್ನು ಬರಪೀಡಿತ ತಾಲೂಕೆಂದು ಘೋಷಿಸಲು ಕ್ರಮ ವಹಿಸಲಾಗುತ್ತಿದೆ ಎಂದು ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ.ಪರಮೇಶ್ವರ ವಿಧಾನಸಭೆಗಿಂದು ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಎನ್.ಟಿ. ಶ್ರೀನಿವಾಸ್ ಅವರ ಪ್ರಶ್ನೆಗೆ ಉಪಮುಖ್ಯಮಂತ್ರಿ ಉತ್ತರಿಸಿದರು.

ಕೇಂದ್ರ ಸರ್ಕಾರದ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯವು ರೂಪಿಸಿರುವ 'ಬರ ನಿರ್ವಹಣಾ ಕೈಪಿಡಿ 2020' ರಲ್ಲಿ ನೀಡಿರುವ ಮಾರ್ಗಸೂಚಿಗಳಂತೆ ಬರ ಮೌಲ್ಯಮಾಪನ ಮತ್ತು ಘೋಷಣೆಗೆ ವಸ್ತುನಿಷ್ಠ, ಪಾರದರ್ಶಕ ಮತ್ತು ಸಾಕ್ಷ್ಯ ಆಧಾರಿತ ವಿಧಾನವನ್ನು ಅನುಸರಿಸಿ ಕಡ್ಡಾಯ ಸೂಚಕಗಳಾದ ಮಳೆ ಕೊರತೆ ಅಥವಾ ಒಣಹವೆ, ಬಿತ್ತನೆ ಪ್ರಗತಿ, ಉಪಗ್ರಹ ಆಧಾರಿತ ರಿಮೋಟ್ ಸೆನ್ಸಿಂಗ್-ಆಧಾರಿತ ಸಸ್ಯವರ್ಗದ



ಸೂಚ್ಯಂಕಗಳು, ಮಣ್ಣಿನ ತೇವಾಂಶ ಸೂಚ್ಯಂಕಗಳು ಮತ್ತು ಜಲವಿಜ್ಞಾನದ ಸೂಚಕಗಳ ಅಧ್ಯಯನ ನಡೆಸಿ ಮೊಬೈಲ್ ಆಪ್ ಬಳಸಿ ಸ್ಥಳ ಪರಿಶೀಲನೆ ಮಾಡುವ ಕಾರ್ಯ ಪ್ರಗತಿಯಲ್ಲಿದ್ದು, ನಿಯಮಾನುಸಾರ ಬರಪೀಡಿತ ತಾಲೂಕೆಂದು ಘೋಷಿಸಲು ಕ್ರಮ ವಹಿಸಲಾಗುತ್ತಿದೆ ಎಂದರು.

ತೀವ್ರ ಮಳೆ ಅಭಾವದಿಂದಾಗಿ ರೈತಾಪಿ ವರ್ಗದ ಹಾಗೂ ಕೂಲಿ ಕಾರ್ಮಿಕರು ತಮ್ಮ ಮಕ್ಕಳ ಶಿಕ್ಷಣವನ್ನು ಅರ್ಧಕ್ಕೆ ಮೊಟಕುಗೊಳಿಸಿ ದೂರದ ನಗರಗಳಿಗೆ ಉದ್ಯೋಗ ಅರಸಿ ಗುಳೆ ಹೋಗುತ್ತಿರುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ವಿಬಿ ಜಿ ರಾಮ್ ಜಿ ಯೋಜನೆಯಡಿಯಲ್ಲಿ ಬರ ಪರಿಹಾರ ಸಾಮುದಾಯಿಕ ಕಾಮಗಾರಿಗಳನ್ನು ಕೈಗೆತ್ತಿ ಕೊಳ್ಳುವುದಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಈ ಕಾಮಗಾರಿಗಳು ಮುಖ್ಯವಾಗಿ ಜಲ ಸಂರಕ್ಷಣೆ, ಅಂತರ್ಜಲ ಮರುಪೂರಣ ಮತ್ತು ಮಣ್ಣಿನ ತೇವಾಂಶ ಹೆಚ್ಚಳದ ಮೇಲೆ ಗಮನಹರಿಸುತ್ತವೆ. ಇವುಗಳಲ್ಲಿ ಕೆರೆ ಮತ್ತು ತೂಬುಗಳ ಹೂಳೆತ್ತುವುದು, ಕೃಷಿ ಹೊಂಡಗಳ ನಿರ್ಮಾಣ, ಚೆಕ್‌ಡ್ಯಾಂ, ನಾಲಾ ಬಂದ್, ಇಂಗು ಗುಂಡಿಗಳು, ಕುಡಿಯುವ ನೀರಿನ ಮೂಲಗಳ ಬಳಿ ಮರುಪೂರಣ ಗುಂಡಿಗಳು/ಶಾಫ್ಟ್‌ಗಳು, ಬಂಡ್ ನಿರ್ಮಾಣ, ಕಂಪಾರ್ಟ್‌ಮೆಂಟ್ ಬಂಡಿಂಗ್, ಎತ್ತರದ ಪ್ರದೇಶಗಳಲ್ಲಿ ಕಂಟೂರ್ ಟ್ರೆಂಚಿಂಗ್ ಮತ್ತು ಬರ ನಿರೋಧಕತೆಯನ್ನು ಸುಧಾರಿಸುವ ಇತರ ನೈಸರ್ಗಿಕ ಸಂಪನ್ಮೂಲ ನಿರ್ವಹಣಾ ಕಾಮಗಾರಿಗಳನ್ನು ಕೈಗೊಳ್ಳುವುದರ ಮೂಲಕ ರೈತಾಪಿ ವರ್ಗದ ಹಾಗೂ ಕೂಲಿಕಾರ್ಮಿಕರು ಗುಳೆ ಹೋಗುವುದನ್ನು ತಡೆಗಟ್ಟಲು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಕ್ರಮ ವಹಿಸುತ್ತಿದ್ದಾರೆ ಎಂದು ಮಾಹಿತಿ ನೀಡಿದರು.

ವಿಜಯನಗರ ಜಿಲ್ಲೆಯಲ್ಲಿ 2026, ಆಗಸ್ಟ್ 13ರ ವರೆಗೆ ಒಟ್ಟು 38,126 ಕೂಲಿ ಕಾರ್ಮಿಕರಿಗೆ ಕೆಲಸವನ್ನು ನೀಡಲಾಗಿದ್ದು, ಕೂಡ್ಲಿಗಿ ತಾಲ್ಲೂಕಿನಲ್ಲಿ 6,555 ಕೂಲಿ ಕಾರ್ಮಿಕರಿಗೆ ಕೆಲಸ ನೀಡಲಾಗಿದೆ. ಪ್ರಸ್ತುತ ಕೂಡ್ಲಿಗಿ ತಾಲ್ಲೂಕಿನಲ್ಲಿ 29 ಕಾಮಗಾರಿಗಳು ನಡೆಯುತ್ತಿದ್ದು, 21,943 ಮಾನವ ದಿನಗಳನ್ನು ಸೃಜನೆ ಮಾಡಲಾಗಿದೆ ಎಂದು ತಿಳಿಸಿದರು.




ಕೋಲಾರ ಮತ್ತು ಚಿಕ್ಕಬಳ್ಳಾಪುರ ಶಾಸಕರು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ವಿಧಾನಸೌಧದ ಸಿಎಂ ಕಚೇರಿಯಲ್ಲಿ ಸೋಮವಾರ ಭೇಟಿ ಮಾಡಿ ಎತ್ತಿನಹೊಳೆ ನೀರು ಪೂರೈಕೆ ಯೋಜನೆ ಸೇರಿದಂತೆ ಅನೇಕ ವಿಚಾರಗಳ ಬಗ್ಗೆ ಸಮಾಲೋಚನೆ ನಡೆಸಿದರು.ಸಿಎಂ ರಾಜಕೀಯ ಕಾರ್ಯದರ್ಶಿ ಪೊನ್ನಣ್ಣ, ಮಾಜಿ ಸಚಿವ ಡಾ ಎಂ ಸಿ ಸುಧಾಕರ್, ನಂಜೇಗೌಡ, ನಾರಾಯಣಸ್ವಾಮಿ, ಕೊತ್ತನೂರು ಮಂಜುನಾಥ್, ಪ್ರದೀಪ್ ಈಶ್ವರ್, ಸುಬ್ಬಾರೆಡ್ಡಿ, ಪುಟ್ಟಸ್ವಾಮಿಗೌಡ, ಕೋಲಾರ ಎಂಎಲ್ಸಿ ಅನಿಲ್ ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

## ಶಾಲಾ ಮಕ್ಕಳಿಗೆ ನೀಡುತ್ತಿರುವ ಮೊಟ್ಟೆ ದರ ಏರಿಕೆ: ಹಣಕಾಸು ಇಲಾಖೆ ಜತೆ ಚರ್ಚಿಸಿ ತೀರ್ಮಾನ

**ಬೆಂಗಳೂರು, ಆ.17:**ಶಾಲಾ ಮಕ್ಕಳಿಗೆ ಕೊಡುತ್ತಿರುವ ಮೊಟ್ಟೆ ದರ ಏರಿಕೆ ಬಗ್ಗೆ ಶೀಘ್ರವೇ ಹಣಕಾಸು ಇಲಾಖೆ ಜೊತೆ ಚರ್ಚೆ ಮಾಡಿ ತೀರ್ಮಾನ ಮಾಡುವುದಾಗಿ ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದರು.

ವಿಧಾನ ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯ ರಾಮೋಜಿಗೌಡ ಪ್ರಶ್ನೆಗೆ ಉತ್ತರಿಸಿದ ಅವರು, ಇದಕ್ಕೆ ಸಚಿವ ಮಧು ಬಂಗಾರಪ್ಪ ಉತ್ತರ ನೀಡಿ, ರಾಷ್ಟ್ರಮಟ್ಟದ ದರವನ್ನು ರಾಜ್ಯದಲ್ಲಿ ನಾವು ಫಿಕ್ಸ್ ಮಾಡುತ್ತೇವೆ. ವಿದ್ಯಾರ್ಥಿಗಳ ಹಾಜರಾತಿ ಕಡಿಮೆ ಇರೋ ಕಡೆ ಮೊಟ್ಟೆ ಮ್ಯಾನೇಜ್ ಮಾಡುತ್ತಿದ್ದಾರೆ. 100% ಹಾಜರಾತಿ ಇರೋ ಕಡೆ ಮೊಟ್ಟೆ ದರ ಸಮಸ್ಯೆ ಆಗುತ್ತಿದೆ. ರಾಷ್ಟ್ರೀಯ ಮಟ್ಟದಲ್ಲಿ ಈಗ 7 ರೂ. ದರ ಆಗಿದೆ. ಮೊಟ್ಟೆ ದರ ಏರಿಕೆ ಮಾಡುವ ಬಗ್ಗೆ ಹಣಕಾಸು ಇಲಾಖೆ ಜೊತೆ ಮಾತನಾಡಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸರ್ಕಾರ ಸರ್ಕಾರಿ ಶಾಲಾ ಮಕ್ಕಳಿಗೆ ಮೊಟ್ಟೆ ಕೊಡುತ್ತಿದೆ. ಈಗ ಸರ್ಕಾರ 6 ರೂಪಾಯಿ ಕೊಡುತ್ತಿದೆ. ಈಗ ಮಾರುಕಟ್ಟೆಯಲ್ಲಿ ಮೊಟ್ಟೆ ಬೆಲೆ ಜಾಸ್ತಿ ಆಗಿದೆ. ಒಂದು ವರ್ಷದಿಂದ 8 ರೂ. ಮೇಲೆ ದರ ಇದೆ. ಮಂತ್ರಿಗಳು 6 ರೂ. ಕೊಡುತ್ತೇವೆ ಅಂತಾರೆ. 6 ರೂ.ನಲ್ಲಿ 5 ರೂ. ಮಾತ್ರ ಶಾಲೆಗೆ ಹೋಗುತ್ತಿದೆ. ಮೊಟ್ಟೆ ದರ ಜಾಸ್ತಿ ಮಾಡಬೇಕು. ಮಾರುಕಟ್ಟೆ ದರ ಸರ್ಕಾರ ಕೊಡಬೇಕು. ಅಥವಾ ಮೊಟ್ಟೆ ವಿತರಣೆ ಏಜೆನ್ಸಿ ಕೊಡಿ ಎಂದು ರಾಮೋಜಿಗೌಡ ಒತ್ತಾಯ ಮಾಡಿದ್ದರು.

# ಆ.28ರ ಒಳಗೆ ಸರ್ಕಾರಿ ಶಾಲಾ ಮಕ್ಕಳಿಗೆ ಶೂ, ಸಾಕ್ಸ್ ವಿತರಣೆ: ಶಿಕ್ಷಣ ಸಚಿವ ಮಧು ಬಂಗಾರಪ್ಪ

**ಬೆಂಗಳೂರು,ಆ17:** ಆಗಸ್ಟ್ 28ರ ಒಳಗೆ ಬಾಕಿಯಿರುವ ಸರ್ಕಾರಿ ಶಾಲಾ ಮಕ್ಕಳಿಗೆ ಬೂಟು, ಕಾಲು ಚೀಲ ವಿತರಣೆ ಮಾಡಲಾಗುವುದು ಎಂದು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಮೇಲ್ಮನೆಯಲ್ಲಿ ಭರವಸೆ ನೀಡಿದ್ದಾರೆ.

ಪ್ರಶೋತ್ತರ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯೆ ಬಲ್ಕಿಸ್ ಬಾನು ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಶಾಲೆಗೆ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಬರುವಂತೆ ಅಕರ್ಷಿಸಲು ಸರ್ಕಾರ ಶೂ, ಸಾಕ್ಸ್ ಕೊಡುತ್ತಿದ್ದೇವೆ ಎಂದು ಹೇಳಿದರು.

ಇವರೆಗೂ ಶೇ 100% ಶೂ, ಸಾಕ್ಸ್ ವಿತರಣೆ ಆಗಿಲ್ಲ. 16 ಲಕ್ಷ ವಿದ್ಯಾರ್ಥಿಗಳಿಗೆ ಇನ್ನು ಶೂ, ಸಾಕ್ಸ್ ಕೊಟ್ಟಿಲ್ಲ. ಟೆಂಡರ್ ಪಡೆದಿರುವವರು ಶೂ ಸಾಕ್ಸ್ ಕೊಟ್ಟಿಲ್ಲ.ಶಾಲೆಗಳು ಜೂನ್‌ನಲ್ಲಿ ಪ್ರಾರಂಭ ಆಗಿದೆ. ಇನ್ನು 100% ವಿತರಣೆ ಆಗಿಲ್ಲ. ಇದರ



ಬಗ್ಗೆ ಕ್ರಮ ಆಗಬೇಕು. ಟೆಂಡರ್ ದಾರನ ಮೇಲೆ ಕ್ರಮ ಆಗಬೇಕು. ಇಂಡೆಂಟ್ ಕೊಡದ ಅಧಿಕಾರಿಗಳ ವಿರುದ್ಧ ಕ್ರಮ ಆಗಬೇಕು ಅಂತ ಒತ್ತಾಯ ಮಾಡಿದ ಬಲ್ಕೀಸ್ ಬಾನು ಒತ್ತಾಯಿಸಿದರು.

ಇದಕ್ಕೆ ಸಚಿವ ಮಧು ಬಂಗಾರಪ್ಪ ಉತ್ತರ ನೀಡಿ, ಹಿಂದಿನ ಸರ್ಕಾರಗಳಲ್ಲಿ ಜನವರಿ ತಿಂಗಳು ಬಂದರೂ ಶೂ, ಸಾಕ್ಸ್ ಕೊಡುತ್ತಿರಲಿಲ್ಲ, ಜೊತೆಗೆ ಗುಣಮಟ್ಟದ ಶೂ, ಸಾಕ್ಸ್ ಕೊಡುತ್ತಿರಲಿಲ್ಲ. ನಮ್ಮ ಸರ್ಕಾರ ಬಂದ ಮೇಲೆ ಗುಣಮಟ್ಟಕ್ಕೆ ಆದ್ಯತೆ ನೀಡಲಾಗಿದೆ.. ಈ ವರ್ಷ ರಾಜ್ಯ ಮಟ್ಟದ ಟೆಂಡರ್ ಕೊಡಲಾಗಿದೆ. ಟೆಂಡರ್ ಅವರು ತಡ ಮಾಡಿರೋದಕ್ಕೆ ಅವರಿಗೆ ದಂಡ ಹಾಕಿದ್ದೇವೆ ಎಂದು ತಿಳಿಸಿದರು.

ರಾಜ್ಯ ಮಟ್ಟದಲ್ಲಿ ಇದನ್ನು ಮಾಡಿರುವುದರಿಂದ ಸ್ವಲ್ಪ ಸಮಯ ಆಗಿದೆ. ಶಾಲಾ ಹಂತದಲ್ಲಿ ಬೂಟಿನ ಅಳತೆ ನೀಡುವುದು ತಡವಾದಾಗ ಸಮಸ್ಯೆ ಆಗುತ್ತದೆ. ಇದೇ 28ರ ಒಳಗೆ ರಾಜ್ಯಾದ್ಯಂತ ಎಲ್ಲಾ ಶಾಲೆಗೂ ಬಾಕಿ ಶೂ ಸಾಕ್ಸ್ ವಿತರಿಸುತ್ತೇವೆ. ಮುಂದಿನ ವರ್ಷದಿಂದ ಸಮಸ್ಯೆ ಇಲ್ಲದಂತೆ ಶೂ, ಸಾಕ್ಸ್ ಕೊಡ್ತೀವಿ. 104 ಕೋಟಿ ಹಣ ಬಾಕಿ ಇದೆ. ಆದಷ್ಟು ಬೇಗ ಶೂ, ಸಾಕ್ಸ್ ವಿತರಣೆ ಮಾಡ್ತೀವಿ. ಶೂ, ಸಾಕ್ ವಿತರಣೆಗೆ ನೋಡಲ್ ಅಧಿಕಾರಿ ನೇಮಿಸಿ ಸಮಸ್ಯೆ ಬಗೆಹರಿಸಲಾಗುವುದು ಎಂದು ಉತ್ತರ ನೀಡಿದರು.

# ಖಾಸಗಿ ವಸತಿ ನಿಲಯಗಳಲ್ಲೂ ಆಹಾರ ಗುಣಮಟ್ಟ ಪರಿಶೀಲನೆ

## ಲೋಪ ಕಂಡುಬಂದಲ್ಲಿ ಕಠಿಣ ಕ್ರಮ: ಯು.ಟಿ. ಖಾದರ್

**ಬೆಂಗಳೂರು, ಆ.17:** ಪಿಜಿ ಹಾಗೂ ಹಾಸ್ಟೆಲ್‌ಗಳಲ್ಲಿ ಕಳಪೆ ಆಹಾರ ಪೂರೈಸುವುದು ಕಂಡುಬಂದರೆ ಯಾವುದೇ ಕ್ಷಮೆ ಇರುವುದಿಲ್ಲ. ಖಾಸಗಿ ಹಾಸ್ಟೆಲ್‌ಗಳಲ್ಲೂ ಆಹಾರ ಸುರಕ್ಷತಾ ತಪಾಸಣೆ ನಡೆಸಲಾಗುವುದು ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ಎಚ್ಚರಿಕೆ ನೀಡಿದ್ದಾರೆ.

ಹೋಟೆಲ್‌ಗಳ ಮೇಲೆ ದಾಳಿ ನಡೆಸಿ ಕರ್ತವ್ಯ ಪ್ರಜ್ಞೆ ಮೆರೆದ ಆಹಾರ ಸುರಕ್ಷತಾ ಅಧಿಕಾರಿಗಳನ್ನು ಆರೋಗ್ಯ ಸೌಧದಲ್ಲಿ ಸನ್ಮಾನಿಸಲಾಯಿತು. ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ಪಿಜಿಗಳಲ್ಲಿ ಸ್ವಚ್ಛತೆ ಹಾಗೂ ಗುಣಮಟ್ಟದ ಆಹಾರಕ್ಕೆ ಆದ್ಯತೆ ನೀಡಬೇಕು. ಯುವಕರು ಮತ್ತು ವಿದ್ಯಾರ್ಥಿಗಳ ಪರಿಸ್ಥಿತಿಯ ಲಾಭ ಪಡೆದು ಹಣ ಮಾಡಬಾರದು ಎಂದು ಪಿಜಿ ಮಾಲೀಕರಿಗೆ ಸೂಚಿಸಿದರು.

ಹೋಟೆಲ್‌ಗಳಲ್ಲಿ ಆಹಾರ ತಯಾರಿಸುವ ಸ್ಥಳ ಹಾಗೂ ಕಚ್ಚಾ ವಸ್ತುಗಳು ಎಲ್ಲಿಂದ ಪೂರೈಕೆ ಯಾಗುತ್ತವೆ ಎಂಬುದರ ಕುರಿತು ತಪಾಸಣೆ ನಡೆಸಲಾಗಿದೆ. ರಾಜ್ಯದಲ್ಲಿ 30 ತಂಡಗಳನ್ನು ರಚಿಸಿ 60ಕ್ಕೂ ಹೆಚ್ಚು ತ್ರೀ-ಸ್ಟಾರ್, ಫೈವ್-ಸ್ಟಾರ್ ಹೋಟೆಲ್‌ಗಳು, ಎಂಟು ವೇರ್‌ಹೌಸ್‌ಗಳು ಹಾಗೂ ನಾಲ್ಕು ಅಂತಾರಾಷ್ಟ್ರೀಯ ರೆಸ್ಟೋರೆಂಟ್‌ಗಳಲ್ಲಿ ತಪಾಸಣೆ ನಡೆಸಲಾಗಿದೆ. 30 ಆಹಾರ ಉದ್ಯಮಿಗಳಿಗೆ ನೋಟಿಸ್ ನೀಡಲಾಗಿದ್ದು, ವಿಚಾರಣೆ ನಡೆಯುತ್ತಿದೆ ಎಂದು ಸಚಿವರು ತಿಳಿಸಿದರು.

**5 ಲಕ್ಷದವರೆಗೆ ದಂಡ:** ಕಳಪೆ ಆಹಾರ ಪೂರೈಸುತ್ತಿರುವುದು ಪತ್ತೆಯಾದ ಹೋಟೆಲ್‌ಗಳ ವಿರುದ್ಧ ನೋಟಿಸ್ ನೀಡುವುದರ ಜತೆಗೆ 5 ಲಕ್ಷ ರೂ.ವರೆಗೆ ದಂಡ ವಿಧಿಸಲಾಗುವುದು. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಯಾವುದೇ ಕ್ಷಮೆ ಇರುವುದಿಲ್ಲ ಎಂದು ಖಾದರ್ ಹೇಳಿದರು. ಪಿಜಿ ಹಾಗೂ ಖಾಸಗಿ ಹಾಸ್ಟೆಲ್‌ಗಳ ಜತೆಗೆ ಬಸ್ ನಿಲ್ದಾಣಗಳಲ್ಲಿನ ಹೋಟೆಲ್‌ಗಳು, ಮದುವೆ ಮನೆಗಳು ಹಾಗೂ ರೈಲ್ವೆ ಕ್ಯಾಂಟೀನ್‌ಗಳಲ್ಲೂ ತಪಾಸಣೆ ನಡೆಸಲಾಗುವುದು. ವಿಮಾನಗಳಲ್ಲಿ ಪ್ರಯಾಣಿಕರಿಗೆ ನೀಡುವ ಆಹಾರದ ಗುಣಮಟ್ಟವನ್ನೂ ಪರಿಶೀಲಿಸಲಾಗುವುದು. ಇದಕ್ಕಾಗಿ ರಾಷ್ಟ್ರಮಟ್ಟದ ತಂಡ ರಚಿಸುವ ಚಿಂತನೆ ಇದೆ. ವಿದೇಶಿ ಕಂಪನಿಗಳ ಚಾಕೊಲೇಟ್‌ಗಳಲ್ಲಿ ಸಕ್ಕರೆ ಪ್ರಮಾಣ ಸೇರಿದಂತೆ ಗುಣಮಟ್ಟದಲ್ಲಿ ವ್ಯತ್ಯಾಸ ಕಂಡುಬರುತ್ತಿದೆ. ಕೇಂದ್ರ ಆಹಾರ ಸುರಕ್ಷತಾ ಕಾಯ್ದೆಯಲ್ಲಿ ಅಗತ್ಯ ಬದಲಾವಣೆ ಮಾಡುವಂತೆ ಕೇಂದ್ರ ಆಹಾರ ಸಚಿವರಿಗೆ ಮಾಹಿತಿ ನೀಡಲಾಗುವುದು. ಇತರ ದೇಶಗಳಲ್ಲಿ ಲಭ್ಯವಿರುವ ಗುಣಮಟ್ಟದ ಉತ್ಪನ್ನಗಳೇ ಭಾರತದಲ್ಲೂ ಲಭ್ಯವಾಗಬೇಕು. ಈ ಕುರಿತು ಅಂತಾರಾಷ್ಟ್ರೀಯ ಆಲ್ ಇಂಡಿಯಾ ಫುಡ್ ಸೇಫ್ಟಿ ಕಾನ್ಕ್ಲೇವ್ ಆಯೋಜಿಸಲಾಗುವುದು ಎಂದು ಸಚಿವರು ತಿಳಿಸಿದರು.

### ಗುಟ್ಕಾ ನಿಷೇಧ ಆದೇಶ ಹಿಂಪಡೆಯುವ ಪ್ರಶ್ನೆಯೇ ಇಲ್ಲ



ರಾಜ್ಯದಲ್ಲಿ ಗುಟ್ಕಾ ನಿಷೇಧಕ್ಕೆ ಸಂಬಂಧಿಸಿದಂತೆ ಸರ್ಕಾರ ಹೊರಡಿಸಿರುವ ಆದೇಶವನ್ನು ಹಿಂಪಡೆಯುವ ಪ್ರಶ್ನೆಯೇ ಇಲ್ಲ ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ಸ್ಪಷ್ಟಪಡಿಸಿದ್ದಾರೆ. ಆರೋಗ್ಯಸೌಧದಲ್ಲಿ ಮಾತನಾಡಿದ ಅವರು, ಗುಟ್ಕಾ ನಿಷೇಧದಿಂದ ಅಡಿಕೆ ಬೆಳೆಗಾರರ ಮೇಲೆ ಯಾವುದೇ ಪ್ರತಿಕೂಲ ಪರಿಣಾಮ ಬೀರುವುದಿಲ್ಲ. ಗುಟ್ಕಾ ನಿಷೇಧದ ಮುಂದಿನ ಕ್ರಮಗಳ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಲಾಗುವುದು. ನಿಷೇಧದ ನಡುವೆಯೂ ಗುಟ್ಕಾವನ್ನು ಬೇರೆ ರೂಪದಲ್ಲಿ ಮಾರುಕಟ್ಟೆಗೆ ತರುವ ಪ್ರಯತ್ನಗಳ ಮೇಲೆ ನಿಗಾ ಇರಿಸಲಾಗುವುದು ಎಂದರು.

### ಹೋಟೆಲ್, ಮೆಡಿಕಲ್ ಶಾಪ್‌ಗಳ ಮುಂದೆ ಕ್ಯೂಆರ್ ಕೋಡ್

ಹೋಟೆಲ್‌ಗಳು ಹಾಗೂ ಮೆಡಿಕಲ್ ಶಾಪ್‌ಗಳಲ್ಲಿ ಸಾರ್ವಜನಿಕರು ತಮ್ಮ ಸಮಸ್ಯೆ ಮತ್ತು ದೂರುಗಳನ್ನು ಸುಲಭವಾಗಿ ದಾಖಲಿಸಲು ಪ್ರತಿ ಹೋಟೆಲ್ ಹಾಗೂ ಮೆಡಿಕಲ್ ಶಾಪ್ ಮುಂದೆ ಕ್ಯೂಆರ್ ಕೋಡ್ ಅಳವಡಿಸಲು ನಿರ್ಧರಿಸಲಾಗಿದೆ. ಮುಂದಿನ ದಿನಗಳಲ್ಲಿ ಹೋಟೆಲ್‌ಗಳಿಗೆ ಸಂಬಂಧಿಸಿದ ದೂರುಗಳಿಗಾಗಿ ಟೋಲ್‌ಫ್ರೀ ಸಂಖ್ಯೆಯನ್ನೂ ಬಿಡುಗಡೆ ಮಾಡಲಾಗುವುದು. ಆಹಾರ ಸುರಕ್ಷತೆ ಮತ್ತು ಔಷಧ ನಿಯಂತ್ರಣ ಇಲಾಖೆ ವತಿಯಿಂದ ಕ್ಯೂಆರ್ ಕೋಡ್ ಬಿಡುಗಡೆ ಮಾಡಲಾಗಿದೆ. ಪಿಜಿಗಳಲ್ಲಿ ಅಡುಗೆ ಹಾಗೂ ಸ್ವಚ್ಛತೆಗೆ ಸಂಬಂಧಿಸಿದಂತೆ ಪ್ರತ್ಯೇಕ ಮಾರ್ಗಸೂಚಿಗಳನ್ನು ರೂಪಿಸಲಾಗುವುದು. ಹೋಟೆಲ್‌ಗಳ ಅಡುಗೆ ಕೋಣೆಗಳಲ್ಲಿ ಸಿಸಿಟಿವಿ ಕಡ್ಡಾಯಗೊಳಿಸುವ ಬಗ್ಗೆಯೂ ಸೂಚಿಸಲಾಗುವುದು ಎಂದು ಯು.ಟಿ. ಖಾದರ್ ಹೇಳಿದರು.

### ಮಹರ್ಷಿ ವಾಲ್ಮೀಕಿ ನಿಗಮ ಹಗರಣ

# ಪ್ರಮುಖ ಆರೋಪಿ ಕಾಕಿ ಶ್ರೀನಿವಾಸ್ ರಾವ್‌ಗೆ ಸುಪ್ರೀಂ ಕೋರ್ಟ್ ಜಾಮೀನು

**ನವದೆಹಲಿ, ಆ.17:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣದ ಎರಡನೇ ಆರೋಪಿ ಕಾಕಿ ಶ್ರೀನಿವಾಸ್ ರಾವ್ ಅವರಿಗೆ ಸುಪ್ರೀಂ ಕೋರ್ಟ್ ಜಾಮೀನು ಮಂಜೂರು ಮಾಡಿದೆ.



ನಿಗಮಕ್ಕೆ ಸೇರಿದ 89 ಕೋಟಿಗೂ ಅಧಿಕ ಹಣವನ್ನು ನಕಲಿ ದಾಖಲೆಗಳು ಹಾಗೂ ಕಾಲ್ಪನಿಕ ಬ್ಯಾಂಕ್ ಖಾತೆಗಳ ಮೂಲಕ ಅಕ್ರಮವಾಗಿ ವರ್ಗಾವಣೆ ಮಾಡಿ ದುರುಪಯೋಗಪಡಿಸಿಕೊಂಡ ಆರೋಪ ಅವರ ಮೇಲಿದೆ. ಈ ಪ್ರಕರಣದಲ್ಲಿ ಕರ್ನಾಟಕದ ಮಾಜಿ ಸಚಿವ ಬಿ. ನಾಗೇಂದ್ರ ಅವರ ಹೆಸರೂ ಪ್ರಮುಖವಾಗಿ ಕೇಳಿಬಂದಿತ್ತು.

ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿ ಮನೋಜ್ ಮಿಶ್ರಾ ಮತ್ತು ನ್ಯಾಯಮೂರ್ತಿ ಬಿಷ್ಣೋಯಿ ಅವರನ್ನೊಳಗೊಂಡ ಪೀಠವು ಅರ್ಜಿಯ ವಿಚಾರಣೆ ನಡೆಸಿ ಜಾಮೀನು ಮಂಜೂರು ಮಾಡಿದೆ. ಕಾಕಿ ಶ್ರೀನಿವಾಸ್ ರಾವ್ ಪರ ಹಿರಿಯ ವಕೀಲೆ ಮಾಧವಿ ದಿವಾನ್ ವಾದ ಮಂಡಿಸಿದರು.

ನಿಗಮದ ಹಣವನ್ನು ನಕಲಿ ದಾಖಲೆಗಳ ಮೂಲಕ ವಿವಿಧ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಿ ಬಳಿಕ ಹಣವನ್ನು ಹಿಂಪಡೆಯಲಾಗಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಈ ಪ್ರಕರಣ ರಾಜ್ಯದಲ್ಲಿ ಭಾರಿ ರಾಜಕೀಯ ವಿವಾದಕ್ಕೆ ಕಾರಣವಾಗಿತ್ತು.

### ಐಎಸ್‌ಐ ಬೆಂಬಲಿತ ಉಗ್ರ ಜಾಲದ ವಿರುದ್ಧ ಕಾರ್ಯಾಚರಣೆ

# ಕರ್ನಾಟಕದಲ್ಲಿ ಮೂವರು ವಶಕ್ಕೆ

■ ದೇಶದ 14 ರಾಜ್ಯಗಳಲ್ಲಿ 253 ಮಂದಿ ಬಂಧನ

ನವದೆಹಲಿ, ಆ.17: ಸ್ವಾತಂತ್ರ್ಯ ದಿನಾಚರಣೆಯ ಮುನ್ನ ದೇಶದಲ್ಲಿ ವಿಧ್ವಂಸಕ ಕೃತ್ಯಗಳಿಗೆ ಸಂಚು ರೂಪಿಸಿದ್ದ ಆರೋಪದ ಹಿನ್ನೆಲೆಯಲ್ಲಿ ಪಾಕಿಸ್ತಾನ ಮೂಲದ, ಐಎಸ್‌ಐ ಬೆಂಬಲಿತ ಶಹಜಾದ್ ಭಟ್ಟಿ ನೆಟ್‌ವರ್ಕ್ ವಿರುದ್ಧ ಭದ್ರತಾ ಸಂಸ್ಥೆಗಳು ಬಹುರಾಜ್ಯ ಕಾರ್ಯಾಚರಣೆ ನಡೆಸಿದೆ.

ಕಾರ್ಯಚರಣೆಯಲ್ಲಿ ಕರ್ನಾಟಕದಲ್ಲಿ ಮೂವರು ಸೇರಿದಂತೆ 14 ರಾಜ್ಯಗಳಲ್ಲಿ ಒಟ್ಟು 253 ಮಂದಿಯನ್ನು ವಶಕ್ಕೆ ಪಡೆದಿವೆ. ಈ ಕಾರ್ಯಾಚರಣೆಯಲ್ಲಿ ಕರ್ನಾಟಕ ಮತ್ತು ದೆಹಲಿಯಲ್ಲಿ ಹೊಸ ಎಫ್‌ಐಆರ್‌ಗಳನ್ನೂ ದಾಖಲಿಸಲಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ.

ಆಗಸ್ಟ್ 12ರಂದು ರಾಜ್ಯ ಪೊಲೀಸ್ ಪಡೆಗಳೊಂದಿಗೆ ರಿಯಲ್‌ಟೈಮ್ ಗುಪ್ತಚರ ಮಾಹಿತಿ ಹಂಚಿಕೆ ವ್ಯವಸ್ಥೆ ಬಳಸಿ ಸಂಯೋಜಿತ ಕಾರ್ಯಾಚರಣೆ ನಡೆಸಲಾಯಿತು. ಉತ್ತರ ಪ್ರದೇಶದಲ್ಲಿ 62, ಹರಿಯಾಣದಲ್ಲಿ 52, ದೆಹಲಿಯಲ್ಲಿ 51, ಪಂಜಾಬ್‌ನಲ್ಲಿ 44, ರಾಜಸ್ಥಾನದಲ್ಲಿ 15, ಮಹಾರಾಷ್ಟ್ರದಲ್ಲಿ 8, ಉತ್ತರಾಖಂಡದಲ್ಲಿ 5, ಕರ್ನಾಟಕ, ಗುಜರಾತ್ ಮತ್ತು ಬಿಹಾರದಲ್ಲಿ ತಲಾ 3 ಹಾಗೂ ತೆಲಂಗಾಣ, ಹಿಮಾಚಲ ಪ್ರದೇಶ, ಜಮ್ಮು-ಕಾಶ್ಮೀರ ಮತ್ತು ಕೇರಳದಲ್ಲಿ ತಲಾ ಇಬ್ಬರನ್ನು ವಶಕ್ಕೆ ಪಡೆಯಲಾಗಿದೆ.

ಗೃಹ ಸಚಿವಾಲಯದ ಪ್ರಕಾರ, ಶಹಜಾದ್ ಭಟ್ಟಿ ನೆಟ್‌ವರ್ಕ್ ಗ್ರೆನೇಡ್, ಐಇಡಿ ಮತ್ತು ಪೆಟ್ರೋಲ್ ಬಾಂಬ್ ದಾಳಿಗಳು ಹಾಗೂ ಗುರಿಯಾಗಿಸಿಕೊಂಡ ಹತ್ಯೆಗಳಿಗೆ ಸಂಬಂಧಿಸಿದ ಪಾಕಿಸ್ತಾನ ಮೂಲದ ಜಾಲವಾಗಿದೆ. ಪೊಲೀಸ್, ರಕ್ಷಣಾ ಮತ್ತು ಧಾರ್ಮಿಕ ಸ್ಥಳಗಳ ಮಾಹಿತಿ ಕಲೆ ಹಾಕಲು ಹಾಗೂ ಗೂಢಚರ್ಯೆಗಾಗಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲು ಈ ಜಾಲ ಸ್ಥಳೀಯ ಸಹಚರರಿಗೆ ಹಣ ನೀಡುತ್ತಿತ್ತು ಎಂದು ಆರೋಪಿಸಲಾಗಿದೆ.

ಕಾರ್ಯಾಚರಣೆಯಲ್ಲಿ ಐಇಡಿಗಳು, ಪಾಕಿಸ್ತಾನ ಆರ್ಡಿನೆನ್ಸ್ ಫ್ಯಾಕ್ಟರಿ ಗುರುತು ಹೊಂದಿರುವ ಗ್ರೆನೇಡ್‌ಗಳು, ಪಿಸ್ತೂಲ್‌ಗಳು, ಜೀವಂತ ಗುಂಡುಗಳು ಹಾಗೂ ಗೂಢಚರ್ಯೆಗೆ ಬಳಸುತ್ತಿದ್ದ ಸಿಸಿಟಿವಿ ಕ್ಯಾಮೆರಾಗಳನ್ನು ವಶಪಡಿಸಿಕೊಳ್ಳಲಾಗಿದೆ. ಶಹಜಾದ್ ಭಟ್ಟಿ ನೆಟ್‌ವರ್ಕ್ ವಿರುದ್ಧ ದೇಶಾದ್ಯಂತ 80ಕ್ಕೂ ಹೆಚ್ಚು ಎಫ್‌ಐಆರ್‌ಗಳು ಹಾಗೂ 200ಕ್ಕೂ ಹೆಚ್ಚು ಬಂಧನಗಳು ದಾಖಲಾಗಿದ್ದು, ವಿವಿಧ ಕಾಯ್ದೆಗಳಡಿ ಪ್ರಕರಣಗಳನ್ನು ದಾಖಲಿಸಲಾಗಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು, ಸ್ವಾತಂತ್ರ್ಯ ದಿನಾಚರಣೆಯ ಮುನ್ನ ಎಸ್‌ಬಿಐಎನ್‌ನ ವಿಧ್ವಂಸಕ ಯೋಜನೆಗಳನ್ನು ವಿಫಲಗೊಳಿಸಲಾಗಿದ್ದು, ದೇಶದ 14 ರಾಜ್ಯಗಳಲ್ಲಿ ಸಂಯೋಜಿತ ಕಾರ್ಯಾಚರಣೆ ಮೂಲಕ ಜಾಲವನ್ನು ಭೇದಿಸಲಾಗಿದೆ ಎಂದು ತಿಳಿಸಿದ್ದಾರೆ. ಗಡಿಪಾರು ಭಯೋತ್ಪಾದನೆ ವಿರುದ್ಧ ಸರ್ಕಾರದ ಶೂನ್ಯ ಸಹಿಷ್ಣುತೆ ನೀತಿಯಡಿ ಇಂತಹ ಕಾರ್ಯಾಚರಣೆಗಳು ಮುಂದುವರಿಯಲಿವೆ ಎಂದು ಭದ್ರತಾ ಸಂಸ್ಥೆಗಳು ಪುನರುಚ್ಚರಿಸಿವೆ.

# ಸಿಐಡಿಯಿಂದ ಕ್ಲೀನ್‌ಚಿಟ್ ಸಿಕ್ಕ ನಂತರವೇ ಸಚಿವ ಸಂಪುಟಕ್ಕೆ ನಾಗೇಂದ್ರ ಸೇರ್ಪಡೆ

ಬೆಂಗಳೂರು, ಆ.17: ಯೋಜನೆ ಮತ್ತು ಸಾಂಖ್ಯಿಕ ಸಚಿವ ನಾಗೇಂದ್ರ ಅವರಿಗೆ ಸಿಐಡಿ ತನಿಖೆಯಲ್ಲಿ ಕ್ಲೀನ್‌ಚಿಟ್ ಸಿಕ್ಕಿರುವ ಹಿನ್ನೆಲೆಯಲ್ಲಿ ಅವರನ್ನು ಮತ್ತೆ ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳಲಾಗಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಸಮರ್ಥಿಸಿಕೊಂಡಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಆರೋಪಗಳು ಕೇಳಿಬಂದ ಸಂದರ್ಭದಲ್ಲಿ ಸರ್ಕಾರಕ್ಕೆ ಮುಜುಗರವಾಗಬಾರದು ಎಂಬ ಕಾರಣಕ್ಕೆ ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಬಳಿಕ ನಡೆದ ಸಿಐಡಿ ತನಿಖೆಯಲ್ಲಿ ನಾಗೇಂದ್ರ ಅವರ ಪಾತ್ರವಿಲ್ಲ ಎಂಬುದು ತಿಳಿದುಬಂದಿದೆ ಎಂದು ಹೇಳಿದರು.

ನಾಗೇಂದ್ರ ಅವರ ಬಗ್ಗೆ ಮಾತನಾಡುವ ನೈತಿಕತೆ ಬಿಜೆಪಿಯವರಿಗೆ ಇಲ್ಲ. ಈ ಹಿಂದೆ ಬಿಜೆಪಿ ನಾಯಕರು ವಿಧಾನಸೌಧವನ್ನು ವ್ಯಾಪಾರಸೌಧವನ್ನಾಗಿ ಮಾಡಿಕೊಂಡಿದ್ದರು ಎಂದು ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದರು. ಯಾವುದೇ ನ್ಯಾಯಾಲಯ ನಾಗೇಂದ್ರ ಅವರನ್ನು ಅಪರಾಧಿ ಎಂದು ತೀರ್ಪು ನೀಡಿಲ್ಲ. ಹೀಗಿರುವಾಗ ಅವರ ವಿರುದ್ಧ ಬಿಜೆಪಿ ಆರೋಪ ಮಾಡುವುದು ಸರಿಯಲ್ಲ ಎಂದು ತಿರುಗೇಟು ನೀಡಿದರು.

ರಾಜ್ಯಕ್ಕೆ ಕೇಂದ್ರ ಸರ್ಕಾರ ನೀಡಬೇಕಾದ ಪಾಲಿನ ಹಣ ನೀಡದಿರುವುದು ಸೇರಿದಂತೆ ಹಲವು ಸಮಸ್ಯೆಗಳ ಕುರಿತು ಬಿಜೆಪಿಯವರಿಗೆ ಚರ್ಚಿಸಲು ಮನಸ್ಸಿಲ್ಲ. ಈ ವಿಚಾರಗಳನ್ನು ಮುಚ್ಚಿಡಲು ಬಿಜೆಪಿ ಅನಗತ್ಯ ವಿವಾದಗಳನ್ನು ಹುಟ್ಟುಹಾಕುತ್ತಿದೆ ಎಂದು ಆರೋಪಿಸಿದರು. ವಂದೇ ಮಾತರಂ ಗೀತ ಗಾಯನದ ವೇಳೆ ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ ಅವರಿಂದ ಅವಮಾನವಾಗಿದೆ ಎಂಬ ಬಿಜೆಪಿ ಆರೋಪಕ್ಕೂ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದರು.

ಬಿಜೆಪಿಯವರಿಂದ ಕಾಂಗ್ರೆಸ್‌ಗೆ ದೇಶಪ್ರೇಮದ ಪಾಠ ಕಲಿಯುವ ಅಗತ್ಯವಿಲ್ಲ. ಆರ್‌ಎಸ್‌ಎಸ್ ಕಚೇರಿಯ ಮೇಲೆ 52 ವರ್ಷಗಳ ಕಾಲ ರಾಷ್ಟ್ರಧ್ವಜ ಹಾರಿಸದವರು ನಮಗೆ ನೀತಿ ಪಾಠ ಮಾಡುತ್ತಿದ್ದಾರೆ. ರಾಷ್ಟ್ರಗೀತೆ ಮೊಳಗುತ್ತಿದ್ದ ಸಂದರ್ಭದಲ್ಲಿ ಬಿಜೆಪಿ ಸಂಸದೆ ಬಾನ್ಸುರಿ ಸ್ವರಾಜ್ ಅವರು ಯಾವ ರೀತಿ ಹೊರನಡೆದಿದ್ದರು ಎಂಬುದನ್ನೂ ನಾವು ನೋಡಿದ್ದೇವೆ ಎಂದು ಹೇಳಿದರು.

ರಾಜ್ಯ ಸಚಿವ ಸಂಪುಟದಲ್ಲಿ ಮಹಿಳಾ ಪ್ರಾತಿನಿಧ್ಯ ಇಲ್ಲ ಎಂಬ ವಿಚಾರದ ಬಗ್ಗೆ ಬಿಜೆಪಿಯವರು ಚಿಂತಿಸುವ ಅಗತ್ಯವಿಲ್ಲ. ಕೇಂದ್ರದಲ್ಲಿ ನಡೆಯುತ್ತಿರುವ ಸಂಪುಟ ಪುನರ್‌ರಚನೆಯ ಬಗ್ಗೆ ಬಿಜೆಪಿ ಮೊದಲು ಗಮನಹರಿಸಲಿ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.

ಮುಖ್ಯಮಂತ್ರಿ ಅವರು ಯಾವುದೇ ಸಮುದಾಯಕ್ಕೆ ಅನ್ಯಾಯವಾಗದಂತೆ ಎಚ್ಚರಿಕೆ ವಹಿಸುತ್ತಿದ್ದಾರೆ. ಎಲ್ಲರಿಗೂ ಸೂಕ್ತ ಪ್ರಾತಿನಿಧ್ಯ ನೀಡುವ ವಿಚಾರದಲ್ಲಿ ಸರ್ಕಾರ ಗಮನ ಹರಿಸಲಿದೆ ಎಂದರು.

# ಕೈಗಾರಿಕಾ ತಯಾರಿಕಾ ನಗರವಾಗಿ ತುಮಕೂರು ಅಭಿವೃದ್ಧಿ: ಸಚಿವ ಎಂ.ಬಿ. ಪಾಟೀಲ್

**ಬೆಂಗಳೂರು, ಆ.17:** ಬೆಂಗಳೂರಿನ ನಂತರದ ಕೈಗಾರಿಕಾ ತಯಾರಿಕೆಯ ನಗರವನ್ನಾಗಿ ತುಮಕೂರನ್ನು ಅಭಿವೃದ್ಧಿಪಡಿಸಲು ರಾಜ್ಯ ಸರಕಾರ ಸಮರೋಪಾದಿಯಲ್ಲಿ ಕೆಲಸ ಮಾಡುತ್ತಿದೆ. ಇದಕ್ಕಾಗಿ 1,736 ಎಕರೆಯನ್ನು ಮೀಸಲಿಟ್ಟಿದ್ದು, ಇದರಿಂದ 7 ಸಾವಿರ ಕೋಟಿ ರೂಪಾಯಿ ಹೂಡಿಕೆ ಹರಿದು ಬರಲಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ್ ಹೇಳಿದ್ದಾರೆ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮತ್ತು ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ನೇತೃತ್ವದಲ್ಲಿ ಸೋಮವಾರ ನಡೆದ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಮತ್ತು ಅನುಷ್ಠಾನ ಮಂಡಳಿಯ 3ನೇ ಮೇಲುಸ್ತುವಾರಿ ಪ್ರಾಧಿಕಾರದ ಸಭೆಯಲ್ಲಿ ಅವರು ವರ್ಚುಯಲ್ ಆಗಿ ಪಾಲ್ಗೊಂಡು ಮಾತನಾಡಿದರು.

ಬೆಂಗಳೂರು-ಚೆನ್ನೈ ಕೈಗಾರಿಕಾ ಕಾರಿಡಾರ್ ನ ತುಮಕೂರು ನೋಡ್ ನಲ್ಲಿ ಈಗಾಗಲೇ

**7 ಸಾವಿರ ಕೋಟಿ ಹೂಡಿಕೆ**

**88 ಸಾವಿರ ಉದ್ಯೋಗ**

**1736 ಎಕರೆ ಭೂಮಿ ಮೀಸಲು**

ಶೇ.30ರಷ್ಟು ಭೌತಿಕ ಪ್ರಗತಿ ಮತ್ತು ಶೇ.20ರಷ್ಟು ಆರ್ಥಿಕ ಪ್ರಗತಿ ಸಾಧಿಸಲಾಗಿದೆ. ಇಲ್ಲಿ 300 ಎಕರೆ ಭೂಮಿಯನ್ನು ಜಪಾನ್ ಟೌನ್‌ಶಿಪ್‌ಗೆ ಮತ್ತು 200 ಎಕರೆಯನ್ನು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಮಂಜೂರು ಮಾಡಲಾಗಿದೆ. ತುಮಕೂರು ನೋಡ್ ಅಭಿವೃದ್ಧಿಯಿಂದ 88 ಸಾವಿರಕ್ಕೂ ಹೆಚ್ಚು ಉದ್ಯೋಗ ಸೃಷ್ಟಿ ಆಗಲಿದೆ ಎಂದು ಅವರು ತಿಳಿಸಿದ್ದಾರೆ.



ಇಲ್ಲಿ ಜಿಂದಾಲ್ ಅಲ್ಯೂಮಿನಿಯಂ ಪ್ರಧಾನ ಹೂಡಿಕೆದಾರ ಕಂಪನಿಯಾಗಿದ್ದು, ಅದಕ್ಕೆ 151 ಎಕರೆ ಭೂಮಿ ಕೊಡಲಾಗಿದೆ. 41 ಎಕರೆಯನ್ನು ಸಾಂಸ್ಥಿಕ ಬಳಕೆಗೆ ಮೀಸಲಿಡಲಾಗಿದೆ. ಭೂಸ್ವಾಧೀನ ಸುಗಮವಾಗಿ ನಡೆಯುತ್ತಿದ್ದು, 2027ರಲ್ಲಿ ಯೋಜನೆಯನ್ನು ಮುಗಿಸಲಾಗುವುದು. ಈ ನೋಡ್‌ನಲ್ಲಿ ಆಹಾರ ಮತ್ತು ಪಾನೀಯ, ಜವಳಿ ಮತ್ತು ಉಡುಪು, ಎಲೆಕ್ಟ್ರಾನಿಕ್ಸ್, ರಾಸಾಯನಿಕ, ಜನರಲ್ ಎಂಜಿನಿಯರಿಂಗ್ ಮತ್ತು ಲಾಜಿಸ್ಟಿಕ್ಸ್ ವಲಯಗಳಿಗೆ ಆದ್ಯತೆ ಕೊಡಲಾಗುವುದು ಎಂದು ಅವರು ವಿವರಿಸಿದ್ದಾರೆ.

ಇದೇ ರೀತಿಯಲ್ಲಿ ಕಲಬುರಗಿಗೆ ಮಂಜೂರಾಗಿರುವ ಪಿಎಂ ಮಿತ್ರ ಕೈಗಾರಿಕಾ ಪಾರ್ಕ್ ಮತ್ತು 'ಭವ್ಯ' ಯೋಜನೆಯಡಿ ರಾಜ್ಯಕ್ಕೆ ಮಂಜೂರಾಗಿರುವ ಯೋಜನೆಗಳನ್ನು ಕೂಡ ಮುಗಿಸಲಾಗುವುದು. ಇದಕ್ಕೆ ರಾಜ್ಯದಿಂದ ಕೇಂದ್ರಕ್ಕೆ ಎಲ್ಲಾ ರೀತಿಯ ಅಗತ್ಯ ಸಹಕಾರ ಕೊಡಲಾಗುತ್ತದೆ ಎಂದು ಅವರು ಭರವಸೆ ನೀಡಿದ್ದಾರೆ.

ಸಭೆಯಲ್ಲಿ ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್, ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಕೈಗಾರಿಕಾ ಸಚಿವರು ಭಾಗವಹಿಸಿದ್ದರು. ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಮುಖ್ಯಮಂತ್ರಿಯವರ ಕಾರ್ಯದರ್ಶಿ ನಕುಲ್, ಕೆಐಎಡಿಬಿ ಸಿಇಒ ಗೋವಿಂದರೆಡ್ಡಿ ಇತರರು ಇದ್ದರು.

### 13 ರಾಜ್ಯ, 11 ಕೈಗಾರಿಕಾ ಕಾರಿಡಾರ್



ಕೇಂದ್ರ ಸರಕಾರದ ಈ ಯೋಜನೆಯ ಅಡಿಯಲ್ಲಿ 13 ರಾಜ್ಯಗಳಲ್ಲಿ 11 ಕೈಗಾರಿಕಾ ಕಾರಿಡಾರ್ ಮತ್ತು 20 ಸ್ಮಾರ್ಟ್‌ಸಿಟಿ ಅಭಿವೃದ್ಧಿಪಡಿಸಲಾಗುತ್ತಿದೆ. ಈ ಪೈಕಿ 4 ಸ್ಮಾರ್ಟ್‌ಸಿಟಿ ಯೋಜನೆಗಳು ಮುಗಿದಿದ್ದು, ಉಳಿದ 16 ಅಭಿವೃದ್ಧಿಯ ನಾನಾ ಹಂತಗಳಲ್ಲಿವೆ ಎನ್ನುವುದನ್ನು ಇಲ್ಲಿ ಸ್ಮರಿಸಬಹುದು. ಈ ಉಪಕ್ರಮದ ವ್ಯಾಪ್ತಿಯಲ್ಲೇ ಬೆಂಗಳೂರು-ಚೆನ್ನೈ, ಬೆಂಗಳೂರು-ಹೈದರಾಬಾದ್ ಮತ್ತು ಬೆಂಗಳೂರು-ಮುಂಬೈ ಕೈಗಾರಿಕಾ ಕಾರಿಡಾರ್ ಗಳನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ. 50,759 ಕೋಟಿ ರೂಪಾಯಿ ವೆಚ್ಚದ ಈ ಯೋಜನೆ 5.35 ಲಕ್ಷ ಕೋಟಿ ರೂಪಾಯಿ ಹೂಡಿಕೆಯ ಸಾಮರ್ಥ್ಯ ಹೊಂದಿದ್ದು 14 ಲಕ್ಷ ಉದ್ಯೋಗಗಳನ್ನು ಸೃಷ್ಟಿಸುವ ಗುರಿ ಹೊಂದಿದೆ. ಒಟ್ಟು 49,120 ಎಕರೆಯಲ್ಲಿ ಅನುಷ್ಠಾನಕ್ಕೆ ಬರಲಿರುವ ಈ ಮಹತ್ವಾಕಾಂಕ್ಷಿ ಯೋಜನೆಯಲ್ಲಿ 'ಭವ್ಯ' ಉಪಕ್ರಮದ ಮೂಲಕ 100 ಕೈಗಾರಿಕಾ ಪಾರ್ಕ್‌ಗಳು ಅಸ್ತಿತ್ವಕ್ಕೆ ಬರಲಿವೆ ಎಂದು ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

# ಬಿಜೆಪಿಗೆ ಹೊಸ ರಾಷ್ಟ್ರೀಯ ತಂಡ: ನಬೀನ್ ನೇತೃತ್ವದಲ್ಲಿ 65 ಹುದ್ದೆಗಳಿಗೆ ನೇಮಕ

**ನವದೆಹಲಿ, ಆ.17:** ಭಾರತೀಯ ಜನತಾ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರು ಪಕ್ಷದ ನೂತನ ರಾಷ್ಟ್ರೀಯ ಪದಾಧಿಕಾರಿಗಳ ತಂಡವನ್ನು ಪ್ರಕಟಿಸಿದ್ದಾರೆ. ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ರಾಷ್ಟ್ರೀಯ ಉಪಾಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು ಸೇರಿದಂತೆ ಒಟ್ಟು 65 ಪ್ರಮುಖ ಹುದ್ದೆಗಳಿಗೆ ನೇಮಕಾತಿ ಮಾಡಲಾಗಿದೆ. ಹೊಸ ನೇಮಕಾತಿಗಳು ತಕ್ಷಣದಿಂದಲೇ ಜಾರಿಗೆ ಬರಲಿವೆ.

ನೂತನ ತಂಡದಲ್ಲಿ 13 ರಾಷ್ಟ್ರೀಯ ಉಪಾಧ್ಯಕ್ಷರು, 8 ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳು ಹಾಗೂ 16 ರಾಷ್ಟ್ರೀಯ ಕಾರ್ಯದರ್ಶಿಗಳು ಸೇರಿದ್ದಾರೆ. ಮಾಜಿ ರಾಜಸ್ಥಾನ ಮುಖ್ಯಮಂತ್ರಿ ವಸುಂಧರಾ ರಾಜೇ ಸಿಂಧಿಯಾ, ಉತ್ತರಾಖಂಡದ ಮಾಜಿ ಮುಖ್ಯಮಂತ್ರಿ ತೀರಥ್ ಸಿಂಗ್ ರಾವತ್, ಹಿರಿಯ ನಾಯಕ ರಾಮ್ ಮಾಧವ್, ಒಡಿಶಾದ ಬೈಜಯಂತ್ ಜಯ್ ಪಾಂಡಾ ಸೇರಿದಂತೆ ಪ್ರಮುಖ ನಾಯಕರಿಗೆ ರಾಷ್ಟ್ರೀಯ ಉಪಾಧ್ಯಕ್ಷರ ಜವಾಬ್ದಾರಿ ನೀಡಲಾಗಿದೆ.

ಕೇಂದ್ರದ ಮಾಜಿ ಸಚಿವೆ ಸ್ಮೃತಿ ಇರಾನಿ, ತ್ರಿಪುರಾದ ಮಾಜಿ ಮುಖ್ಯಮಂತ್ರಿ ಬಿಪ್ಲಬ್ ಕುಮಾರ್ ದೇಬ್ ಸೇರಿದಂತೆ ಎಂಟು



ಮಂದಿಯನ್ನು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳನ್ನಾಗಿ ನೇಮಕ ಮಾಡಲಾಗಿದೆ. ಬಿ.ಎಲ್. ಸಂತೋಷ್ ಅವರು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಸ್ಥಾನದಲ್ಲಿ ಮುಂದುವರಿದಿದ್ದಾರೆ. ಪಿಯೂಷ್ ಗೋಯಲ್ ಅವರಿಗೆ ರಾಷ್ಟ್ರೀಯ ಖಜಾಂಚಿ ಜವಾಬ್ದಾರಿ ನೀಡಲಾಗಿದೆ.

### ವಿವಿಧ ಮೋರ್ಚಾಗಳಿಗೂ ನೇಮಕ

ಪಕ್ಷದ ವಿವಿಧ ಮೋರ್ಚಾಗಳಿಗೂ ಹೊಸ ಅಧ್ಯಕ್ಷರನ್ನು ನೇಮಕ ಮಾಡಲಾಗಿದೆ. ಡಾ. ಹೇಮಾಂಗ್ ಜೋಶಿ ಅವರಿಗೆ ಯುವ ಮೋರ್ಚಾ, ರೂಪ್ ಕುಮಾರಿ ಚೌಧರಿ ಅವರಿಗೆ ಮಹಿಳಾ ಮೋರ್ಚಾ, ಅಮರಪಾಲ್ ಮೌರ್ಯ ಅವರಿಗೆ ಒಬಿಸಿ ಮೋರ್ಚಾ, ಬನ್ಸಿಲಾಲ್ ಗುರ್ಜರ್ ಅವರಿಗೆ ಕಿಸಾನ್ ಮೋರ್ಚಾ, ಶಿವೇಶ್ ಕುಮಾರ್ ರಾಮ್ ಅವರಿಗೆ ಎಸ್‌ಸಿ ಮೋರ್ಚಾ, ಡಾ. ಮನ್ನಾಲಾಲ್ ರಾವತ್ ಅವರಿಗೆ ಎಸ್‌ಟಿ ಮೋರ್ಚಾ ಹಾಗೂ ಕುಂವರ್ ಬಾಸಿತ್ ಅಲಿ ಅವರಿಗೆ ಅಲ್ಪಸಂಖ್ಯಾತ ಮೋರ್ಚಾ ಅಧ್ಯಕ್ಷರ ಜವಾಬ್ದಾರಿ ನೀಡಲಾಗಿದೆ.

ಮಾಧ್ಯಮ ವಿಭಾಗದಲ್ಲಿ ಅನಿಲ್ ಬಲುನಿ ಅವರನ್ನು ರಾಷ್ಟ್ರೀಯ ಮಾಧ್ಯಮ ಸಂಯೋಜಕರನ್ನಾಗಿ, ಕೇಂದ್ರ ಕಚೇರಿ ಉಸ್ತುವಾರಿಯಾಗಿ ತರುಣ್ ಚುಗ್ ಹಾಗೂ ಸಾಮಾಜಿಕ ಮಾಧ್ಯಮ ಸಂಯೋಜಕರಾಗಿ ದೀಪಕ್ ಅವರನ್ನು ನೇಮಕ ಮಾಡಲಾಗಿದೆ.

### ಕರ್ನಾಟಕಕ್ಕೆ ಪ್ರಮುಖ ಸ್ಥಾನಮಾನ

ಕರ್ನಾಟಕದ ಇಬ್ಬರು ನಾಯಕರಿಗೆ ರಾಷ್ಟ್ರೀಯ ಸಂಘಟನೆಯಲ್ಲಿ ಮಹತ್ವದ ಜವಾಬ್ದಾರಿ ನೀಡಲಾಗಿದೆ. ರಾಜ್ಯಸಭಾ ಸದಸ್ಯ ಪ್ರೊ. ಎಂ. ನಾಗರಾಜ್ ಅವರಿಗೆ ರಾಷ್ಟ್ರೀಯ ಉಪಾಧ್ಯಕ್ಷ ಹುದ್ದೆ ನೀಡಿದರೆ ಬಿ.ಎಲ್. ಸಂತೋಷ್ ಅವರನ್ನು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಮುಂದುವರಿಸಲಾಗಿದೆ.

# ರಾಜೀನಾಮೆ ಅಂಗೀಕರಿಸುವಂತೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಿಗೆ ಪೂನಾವಾಲಾ ಮನವಿ

**ನವದೆಹಲಿ, ಆ. 17:** ಬಿಜೆಪಿ ರಾಷ್ಟ್ರೀಯ ವಕ್ತಾರ ಶೆಹಜಾದ್ ಪೂನಾವಾಲಾ ಅವರು ಪಕ್ಷದ ಪ್ರಾಥಮಿಕ ಸದಸ್ಯತ್ವ ಹಾಗೂ ತಮ್ಮ ಸ್ಥಾನಕ್ಕೆ ಮತ್ತೊಮ್ಮೆ ರಾಜೀನಾಮೆ ನೀಡಿದ್ದಾರೆ. ತಮ್ಮ ರಾಜೀನಾಮೆಯನ್ನು ತಕ್ಷಣವೇ ಅಂಗೀಕರಿಸುವಂತೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರನ್ನು ಕೋರಿದ್ದಾರೆ.

ಈ ಹಿಂದೆ ಜುಲೈ 30ರಂದು ಅವರು ಮೊದಲ ಬಾರಿಗೆ ರಾಜೀನಾಮೆ ಸಲ್ಲಿಸಿದ್ದರು. ಆದರೆ, ಪಕ್ಷದ ನಾಯಕತ್ವವು ಅವರ ನಿರ್ಧಾರವನ್ನು ಮರುಪರಿಶೀಲಿಸುವಂತೆ ಮನವಿ ಮಾಡಿ, ರಾಜೀನಾಮೆಯನ್ನು ಸ್ವೀಕರಿಸಲು ನಿರಾಕರಿಸಿತ್ತು. ಇದೀಗ ಪೂನಾವಾಲಾ ಪಕ್ಷದಿಂದ ಹೊರನಡೆಯುವ ತಮ್ಮ ನಿರ್ಧಾರವನ್ನು ಮತ್ತೊಮ್ಮೆ ಸ್ಪಷ್ಟಪಡಿಸಿದ್ದಾರೆ. ತೀವ್ರವಾದ ತುರ್ತು ಆರ್ಥಿಕ ಮತ್ತು ವೈಯಕ್ತಿಕ ಕಾರಣಗಳಿಂದಾಗಿ ತಾವು ರಾಜಕೀಯದಿಂದ ಹೊರಬಂದು ಖಾಸಗಿ ವಲಯಕ್ಕೆ ಮರಳುತ್ತಿರುವುದಾಗಿ ಅವರು ತಿಳಿಸಿದ್ದಾರೆ.

ಈ ಸಂಬಂಧ ಸಾಮಾಜಿಕ ಜಾಲತಾಣದಲ್ಲಿ ಶೆಹಜಾದ್ ಪೂನಾವಾಲಾ ಹೇಳಿಕೆ ಹಾಕಿದ್ದು, ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ನಿತಿನ್ ನಬಿನ್ ಸೇರಿದ್ದಂತೆ ಹಲವರನ್ನು ಟ್ಯಾಗ್ ಮಾಡಿದ್ದಾರೆ. ಅತ್ಯಂತ ನಮ್ರತೆ, ಪ್ರೀತಿ ಮತ್ತು ಕೃತಜ್ಞತೆಯಿಂದ ನಾನು



ಬಿಜೆಪಿ ಹಾಗೂ ನಿತಿನ್ ನಬೀನ್ ಅವರಿಗೆ ಮತ್ತೊಮ್ಮೆ ನನ್ನ ರಾಜೀನಾಮೆ ಪತ್ರವನ್ನು ಸಲ್ಲಿಸಿದ್ದು, ಅದನ್ನು ಸ್ವೀಕರಿಸಬೇಕಾಗಿ ವಿನಂತಿಸಿದ್ದೇನೆ. ನನಗೆ ದೊರೆತ ಮಾರ್ಗದರ್ಶನ, ಪ್ರೀತಿ, ಗೌರವ ಮತ್ತು ವೇದಿಕೆಗೆ ನಾನು ಎಂದೆಂದಿಗೂ ಋಣಿ ಎಂದು ಬರೆದುಕೊಂಡಿದ್ದಾರೆ.

ನನ್ನ ಜುಲೈ 30ರ ಪತ್ರದ ಮುಂದುವರಿದ ಭಾಗವಾಗಿ ಇದನ್ನು ಪರಿಗಣಿಸಿ. ಜುಲೈನಲ್ಲಿ ಆರ್ಥಿಕ ಮತ್ತು ವೈಯಕ್ತಿಕ ಕಾರಣಗಳಿಂದಾಗಿ ನಾನು ರಾಜೀನಾಮೆ ನೀಡಿದ್ದಾಗ, ಪಕ್ಷವು ಅದನ್ನು ತಕ್ಷಣ ಸ್ವೀಕರಿಸದೇ ಮರುಪರಿಶೀಲಿಸಲು ಕೋರಿದ್ದು ನನಗೆ ಅತ್ಯಂತ ಭಾವುಕ ಕ್ಷಣವಾಗಿತ್ತು. ಆದರೆ ಸುದೀರ್ಘ ಚಿಂತನೆಯ ನಂತರ, ರಾಷ್ಟ್ರೀಯ ವಕ್ತಾರ ಹುದ್ದೆ ಮತ್ತು ಸಕ್ರಿಯ ಸದಸ್ಯತ್ವದಿಂದ ಬಿಡುಗಡೆ ಹೊಂದುವ ನನ್ನ ಅಂತಿಮ ನಿರ್ಧಾರಕ್ಕೆ ಬಂದಿದ್ದೇನೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಬಿಜೆಪಿ ನಾಯಕರ ಮಾರ್ಗದರ್ಶನ, ಪ್ರೀತಿ, ಗೌರವ ಮತ್ತು ವೇದಿಕೆಗೆ ಚಿರಋಣಿಯಾಗಿದ್ದಾರೆ. ನಿರ್ದಿಷ್ಟವಾಗಿ ಪ್ರಧಾನಿ ನರೇಂದ್ರ ಮೋದಿ, ನಿತಿನ್ ನಬೀನ್, ಅಮಿತ್ ಶಾ, ಬಿಎಲ್ ಸಂತೋಷ್, ಜೆಪಿ ನಡ್ಡಾ, ರಾಜನಾಥಸಿಂಗ್, ನಿತಿನ್ ಗಡ್ಕರಿ ಮತ್ತು ನಮ್ಮ ಎಲ್ಲಾ ಹಿರಿಯ ನಾಯಕರು ಮತ್ತು ಸಂಘ ಪರಿವಾರ ನನ್ನನ್ನು ನಂಬಿದ್ದಕ್ಕಾಗಿ ಧನ್ಯವಾದ ಎಂದು ತಿಳಿಸಿದ್ದಾರೆ.

ನನ್ನ ಆರ್ಥಿಕ ಹಾಗೂ ವೈಯಕ್ತಿಕ ಪರಿಸ್ಥಿತಿಗಳಿಂದಾಗಿ ನಾನು ಖಾಸಗಿ ವಲಯಕ್ಕೆ ಮರಳುತ್ತಿದ್ದೇನೆ. ಆದರೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೂರದೃಷ್ಟಿ ಮತ್ತು ಬಿಜೆಪಿಯ ಕಾರ್ಯಗಳಿಗೆ ನನ್ನ ಬೆಂಬಲ ಯಾವ ರೂಪದಲ್ಲಾದರೂ ಮುಂದುವರಿಯಲಿದೆ. ನಾನು ವ್ಯವಸ್ಥೆಯನ್ನು ತೊರೆಯುತ್ತಿದ್ದೇನೆ ಹೊರತು ವ್ಯಕ್ತಿ ಅಥವಾ ವಿಚಾರವನ್ನಲ್ಲ. ಭಾರತದಲ್ಲಾಗಲೀ ಅಥವಾ ಬೇರೆ ಯಾವುದೇ ಪಕ್ಷದಲ್ಲಾಗಲೀ ನನ್ನಂತಹ ಒಬ್ಬ ಯುವ, ಪಸ್ಮಾಂದ ಮುಸ್ಲಿಂ ಹಾಗೂ ರಾಜಕೀಯ ಹಿನ್ನೆಲೆಯಿಲ್ಲದ ವ್ಯಕ್ತಿಗೆ ಇಂತಹ ಅವಕಾಶ ಸಿಗಲು ಸಾಧ್ಯವಿರಲಿಲ್ಲ ಎಂದು ಹೇಳಿದ್ದಾರೆ.

# ಜಮ್ಮು-ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ಕೊಡಿ: ಸಿಎಂ

**ಶ್ರೀನಗರ, ಆ. 17:** ಮಾತು ಸೋತ ಭಾರತಕ್ಕೆ ವಿದ್ಯಾರ್ಥಿಗಳು ಹಾಗೂ ಯುವಜನರು ಮತ್ತೆ ಧ್ವನಿಯಾಗಿದ್ದಾರೆ. ಅಂತೆಯೇ, ಜಮ್ಮು ಮತ್ತು ಕಾಶ್ಮೀರದಿಂದ ಕಸಿದುಕೊಂಡಿರುವ ಸಾಂವಿಧಾನಿಕ ಹಕ್ಕುಗಳು ಹಾಗೂ ರಾಜ್ಯದ ಸ್ಥಾನಮಾನವನ್ನು ಕೇಂದ್ರ ಸರ್ಕಾರ ಮರಳಿ ನೀಡಬೇಕು. ಭಾರತದ ಒಕ್ಕೂಟ ವ್ಯವಸ್ಥೆಯನ್ನು ಎತ್ತಿಹಿಡಿಯಲು ಇದು ಅತ್ಯಗತ್ಯ ಎಂದು ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಆಗ್ರಹಿಸಿದ್ದಾರೆ.

ಸ್ವಾತಂತ್ರ್ಯ ದಿನಾಚರಣೆ ನಿಮಿತ್ತ ಶ್ರೀನಗರದ ಬಕ್ಷಿ ಕ್ರೀಡಾಂಗಣದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಈ ಹಿಂದೆ ಮುಗಿದುಹೋದ ಅಧ್ಯಾಯ ಎನ್ನಲಾಗಿದ್ದ ವಿಶೇಷ ಸ್ಥಾನಮಾನದ ವಿಷಯಕ್ಕೆ ಮತ್ತೆ ಜೀವ ತುಂಬಿದ್ದಾರೆ. 2019ರಲ್ಲಿ 370ನೇ ವಿಧಿಯನ್ನು ರದ್ದುಪಡಿಸಿ ನಮ್ಮ ಪರಿಸ್ಥಿತಿಯನ್ನು ಬದಲಿಸದೇ ಇದ್ದಿದ್ದರೆ, ಇಂದು ಪಾಕ್ ಆಕ್ರಮಿತ ಕಾಶ್ಮೀರದ (ಪಿಒಕೆ) ಜನರೇ ಜಮ್ಮು-ಕಾಶ್ಮೀರದೊಂದಿಗೆ ಮರಳಿ ಒಂದಾಗಲು ಪ್ರತಿಭಟನೆ ನಡೆಸುತ್ತಿದ್ದರು ಎಂದು ಅವರು ಪ್ರತಿಪಾದಿಸಿದರು.

10 ವರ್ಷಗಳ ಹಿಂದೆ ನ್ಯಾಷನಲ್ ಕಾನ್ಫರೆನ್ಸ್ ನಾಯಕರು ಭಾರತದೊಂದಿಗೆ ಸೇರ್ಪಡೆಗೊಳ್ಳಲು ತೆಗೆದುಕೊಂಡ ನಿರ್ಧಾರ ಸಂಪೂರ್ಣ ಸರಿಯಾಗಿತ್ತು. 1947ರಲ್ಲಿ ಪಾಕಿಸ್ತಾನ ಬೆಂಬಲಿತ ದಾಳಿಕೋರರನ್ನು ತಡೆಯಲು ಹೋರಾಡಿದ ಶೇಖ್ ಮುಹಮ್ಮದ್ ಅಬ್ದುಲ್ಲಾ ಹಾಗೂ ಪ್ರಾಣತೆತ್ತ ಮಾಸ್ಟರ್ ಅಬ್ದುಲ್ ಅಜೀಜ್ ಅವರ ತ್ಯಾಗ ಸ್ಮರಣೀಯ. ಗಡಿಯಾಚೆಗಿನ ಇಂದಿನ ಶೋಚನೀಯ ಪರಿಸ್ಥಿತಿ ನೋಡಿದಾಗ ನಮ್ಮ ಹಿರಿಯರ ನಿರ್ಧಾರದ ಮಹತ್ವ ಅರಿವಾಗುತ್ತದೆ. ಭವಿಷ್ಯದಲ್ಲಿ ಪಿಒಕೆ ಜನತೆ ಬಂದು ಪ್ರತಿನಿಧಿಸುತ್ತಾರೆಂಬ ಭರವಸೆಯಿಂದಲೇ ವಿಧಾನಸಭೆಯಲ್ಲಿ ಅವರಿಗಾಗಿ ಸ್ಥಾನಗಳನ್ನು ಮೀಸಲಿಡಲಾಗಿದೆ. ನಮ್ಮ ಸಾಂವಿಧಾನಿಕ ಹಕ್ಕುಗಳನ್ನು ಹಿಂದಿರುಗಿಸುವುದು ಆ ಹುತಾತ್ಮರಿಗೆ ನೀಡುವ ನಿಜವಾದ ಗೌರವ ಎಂದರು.

ಕೇಂದ್ರದ ಆಡಳಿತ ವೈಖರಿಯನ್ನು ಟೀಕಿಸಿದ ಅವರು, ಅಧಿಕಾರ ಕೇಂದ್ರೀಕರಣದಿಂದ



ರಾಜ್ಯಗಳ ಸ್ವಾಯತ್ತತೆಗೆ ಧಕ್ಕೆಯಾಗುತ್ತಿದೆ ಎಂದರು. ನೀಟ್ ಮತ್ತು ಜೆಇಇ ಪರೀಕ್ಷೆಗಳನ್ನು ಉಲ್ಲೇಖಿಸಿ, ರಾಷ್ಟ್ರೀಯ ಸಂಸ್ಥೆಗಳಿಗೆ ಕೇಂದ್ರ ಮಟ್ಟದ ಪರೀಕ್ಷೆಗಳಿರುವುದು ಸರಿ. ಆದರೆ, ರಾಜ್ಯದ ಶಿಕ್ಷಣ ಸಂಸ್ಥೆಗಳ ಪ್ರವೇಶಾತಿ ನಡೆಸುವ ಹಕ್ಕು ಆಯಾ ರಾಜ್ಯಗಳಿಗೇ ಇರಬೇಕು. ರಾಜ್ಯಗಳ ಅಧಿಕಾರವನ್ನು ಕಸಿದುಕೊಂಡಾಗ, ಅದರ ಪರಿಣಾಮವಾಗಿ ಯುವಜನರು ಮತ್ತು ವಿದ್ಯಾರ್ಥಿಗಳು ಬೀದಿಗಿಳಿದು ಹೋರಾಡುವಂತಾಗುತ್ತದೆ? ಎಂದು ದೆಹಲಿ ಹಾಗೂ ಜಮ್ಮು-ಕಾಶ್ಮೀರದ ಇತ್ತೀಚಿನ ವಿದ್ಯಾರ್ಥಿ ಪ್ರತಿಭಟನೆಗಳನ್ನು ಪ್ರಸ್ತಾಪಿಸಿದರು.

2019ರ ಆಗಸ್ಟ್ 5ರಂದು ಕೇಂದ್ರ ಸರ್ಕಾರವು ಜಮ್ಮು ಮತ್ತು ಕಾಶ್ಮೀರಕ್ಕೆ ನೀಡಲಾಗಿದ್ದ ಸಂವಿಧಾನದ 370ನೇ ವಿಧಿ ಹಾಗೂ 35ಎ ವಿಧಿಯನ್ನು ರದ್ದುಪಡಿಸುವ ಮೂಲಕ ದಶಕಗಳಿಂದ ರಾಜ್ಯಕ್ಕಿದ್ದ ವಿಶೇಷ ಸ್ಥಾನಮಾನ?ವನ್ನು ಹಿಂಪಡೆದಿತ್ತು. ಅಲ್ಲದೆ, ಜಮ್ಮು-ಕಾಶ್ಮೀರ ಪುನರ್ವಿಂಗಡಣಾ ಕಾಯ್ದೆಯಡಿ ಪೂರ್ಣ ಪ್ರಮಾಣದ ರಾಜ್ಯವನ್ನು ವಿಭಜಿಸಿ, ಜಮ್ಮು-ಕಾಶ್ಮೀರ ಹಾಗೂ ಲಡಾಖ್ ಎಂಬ ಎರಡು ಪ್ರತ್ಯೇಕ ಕೇಂದ್ರಾಡಳಿತ ಪ್ರದೇಶಗಳನ್ನಾಗಿ ರಚಿಸಲಾಗಿತ್ತು. ಅಂದಿನಿಂದಲೂ ಕಾಶ್ಮೀರದ ನ್ಯಾಷನಲ್ ಕಾನ್ಫರೆನ್ಸ್ (ಎನ್ಸಿ), ಪಿಡಿಪಿ ಸೇರಿದಂತೆ ವಿವಿಧ ಪ್ರಾದೇಶಿಕ ರಾಜಕೀಯ ಪಕ್ಷಗಳು ಕಳೆದುಕೊಂಡ ರಾಜ್ಯದ ಸ್ಥಾನಮಾನ ಹಾಗೂ ಹಕ್ಕುಗಳನ್ನು ಮರಳಿ ನೀಡುವಂತೆ ಕೇಂದ್ರವನ್ನು ನಿರಂತರವಾಗಿ ಒತ್ತಾಯಿಸುತ್ತಲೇ ಬಂದಿವೆ.



ನವದೆಹಲಿಯಲ್ಲಿ ಸೋಮವಾರ ರಕ್ಷಣಾ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಹಾಗೂ ಮಹಾನಿರ್ದೇಶಕ ಎ.ಅನ್ಬರಸು ಸಮ್ಮುಖದಲ್ಲಿ ರಕ್ಷಣಾ ಸಚಿವಾಲಯವು 'ಜನರಲ್ ಅಟಾಮಿಕ್ಸ್ ಏರೋನಾಟಿಕಲ್ ಸಿಸ್ಟಮ್ಸ್' ಜೊತೆ ಒಪ್ಪಂದಕ್ಕೆ ಸಹಿಹಾಕಿದೆ.

# ಶಾಸಕರಾಗಿ ಪ್ರಶಾಂತ್ ಕಿಶೋರ್ ಪ್ರಮಾಣವಚನ

**ಪಟನಾ ಆ. 17:** ಬಿಹಾರ ವಿಧಾನಸಭೆಯಲ್ಲಿ ಸೋಮವಾರ ಜನಸುರಾಜ್ ಪಕ್ಷದ ಮುಖ್ಯಸ್ಥ ಪ್ರಶಾಂತ್ ಕಿಶೋರ್ ಬಂಕಿಪುರ ಶಾಸಕರಾಗಿ ಸ್ಪೀಕರ್ ಪ್ರೇಮ್‌ಕುಮಾರ್ ಸಮ್ಮುಖದಲ್ಲಿ ಪ್ರಮಾಣವಚನ ಸ್ವೀಕರಿಸಿದ್ದಾರೆ.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿರುವ ಪ್ರಶಾಂತ್ ಕಿಶೋರ್, ಸಮಾಜ ಮತ್ತು ರಾಜ್ಯದ ಉನ್ನತಿಗಾಗಿ ತಮ್ಮ ಜೀವನದ ಅಮೂಲ್ಯ ವರ್ಷಗಳನ್ನು ಮುಡಿಪಾಗಿಟ್ಟ ನೂರಾರು ಶಾಸಕರ ಹಾದಿಯಲ್ಲಿ ಕಾರ್ಯನಿರ್ವಹಿಸುವುದು ತಮಗೆ ದೊಡ್ಡ ಜವಾಬ್ದಾರಿಯಾಗಿದೆ ಎಂದು ಹೇಳಿದ್ದಾರೆ.

ಕೃಷ್ಣ ಸಿನ್ಹಾ, ಕರ್ಪೂರಿ ಠಾಕೂರ್, ಅನುಗ್ರಹ ನಾರಾಯಣ ಸಿನ್ಹಾ, ನಿತೀಶ್ ಕುಮಾರ್, ಲಾಲು ಪ್ರಸಾದ್ ಯಾದವ್, ಕೇದಾರ್ ಪಾಂಡೆ, ರಾಮ್ ವಿಲಾಸ್ ಪಾಸ್ವಾನ್ ಮತ್ತು ಸುಶೀಲ್ ಕುಮಾರ್ ಮೋದಿ ಅವರಂತಹ ಜನರು ಸೇವೆ ಸಲ್ಲಿಸಿದ ಸದನದ ಸದಸ್ಯರಾಗಿರುವುದು ನನಗೆ ಹೆಮ್ಮೆಯ ವಿಷಯ ಎಂದಿದ್ದಾರೆ.

ಆಗಸ್ಟ್ 03ರಂದು ಪ್ರಕಟಗೊಂಡ ಬಿಹಾರದ ಪ್ರತಿಷ್ಠಿತ ಬಂಕಿಪುರ ವಿಧಾನಸಭಾ ಕ್ಷೇತ್ರದ



ಉಪಚುನಾವಣೆಯಲ್ಲಿ ಪ್ರಶಾಂತ್ ಕಿಶೋರ್, ಐತಿಹಾಸಿಕವಾಗಿ ಚುನಾವಣಾ ಚೊಚ್ಚಲ ಪ್ರವೇಶದಲ್ಲೇ ಗೆಲ್ಲುವ ಮೂಲಕ, ಕಳೆದ 30 ವರ್ಷಗಳಿಂದ ಕ್ಷೇತ್ರವನ್ನು ಹಿಡಿತದಲ್ಲಿಟ್ಟುಕೊಂಡಿದ್ದ ಬಿಜೆಪಿ ದೊಡ್ಡ ಹೊಡೆತ ನೀಡಿದ್ದರು.

64,151 ಮತಗಳನ್ನು ಗಳಿಸಿ ಬಿಜೆಪಿಯ ನೀರಜ್ ಕುಮಾರ್ ಅವರನ್ನು 19,324 ಮತಗಳ ಅಂತರದಿಂದ ಸೋಲಿಸಿದರು. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ರಾಜ್ಯಸಭೆಗೆ ಆಯ್ಕೆಯಾದ ಹಿನ್ನೆಲೆ ಆ ಸ್ಥಾನಕ್ಕೆ ನಡೆದ ಚುನಾವಣೆ ನಡೆದಿತ್ತು.

# ಹೋಟೆಲ್‌ಗೆ ಬೆಂಕಿ: 7 ಪ್ರಯಾಣಿಕರ ಸಜೀವ ದಹನ

**ಕೋಲ್ಕತ್ತಾ, ಆ. 17:** ಪಶ್ಚಿಮ ಬಂಗಾಳದ ಬಿರ್ಭೂಮ್ ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರ ತಾರಾಪೀಠದಲ್ಲಿ ಸೋಮವಾರ ಮುಂಜಾನೆ ಖಾಸಗಿ ಹೋಟೆಲ್ ಒಂದರಲ್ಲಿ ಸಂಭವಿಸಿದ ಭೀಕರ ಅಗ್ನಿ ಅನಾಹುತದಲ್ಲಿ ಕನಿಷ್ಠ 7 ಯಾತ್ರಾರ್ಥಿಗಳು ಸಜೀವ ದಹನಗೊಂಡಿದ್ದು, ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ತಾರಾಪೀಠದ ಪೊಲೀಸ್ ಠಾಣೆ ಸಮೀಪವಿರುವ ನಾಲ್ಕು ಅಂತಸ್ತಿನ ಹೋಟೆಲ್ ವಿದೇಶಿನಿ ಕಟ್ಟಡದಲ್ಲಿ ಈ ದುರಂತ ಸಂಭವಿಸಿದೆ. ಹೋಟೆಲ್ನ ನೆಲಮಹಡಿಯ ರಿಸೆಪ್ಷನ್ ಭಾಗದಲ್ಲಿ ಕಾಣಿಸಿಕೊಂಡ ಬೆಂಕಿ, ಕಟ್ಟಡದಲ್ಲಿದ್ದ ಫೈಬರ್ ಪ್ಯಾನೆಲ್ ಹಾಗೂ ಫಾಲ್ಸ್ ಸೀಲಿಂಗ್ಗಳ ಕಾರಣದಿಂದ ಕ್ಷಣಾರ್ಧದಲ್ಲಿ ಮೇಲಿನ ಮಹಡಿಗಳಿಗೆ ವೇಗವಾಗಿ ಹರಡಿದೆ. ಆ ಸಮಯದಲ್ಲಿ ಬಹುತೇಕ ಪ್ರವಾಸಿಗರು ಮತ್ತು ಭಕ್ತರು ಗಾಢ ನಿದ್ರೆಯಲ್ಲಿದ್ದರು. ದಟ್ಟ ಹೊಗೆ ಇಡೀ ಕಟ್ಟಡವನ್ನು ಆವರಿಸಿಕೊಂಡಿದ್ದರಿಂದ ಉಸಿರಾಟದ ತೊಂದರೆ ಅನುಭವಿಸಿ ಹಾಗೂ ತಪ್ಪಿಸಿಕೊಳ್ಳಲು ಮಾರ್ಗ ಸಿಗದೆ ದಿಗಿಲುಗೊಂಡು 7 ಮಂದಿ ಜೀವಂತ ದಹನಗೊಂಡಿದ್ದಾರೆ. ಕೆಲವರು ಬಾಲ್ಕನಿಯಿಂದ ಕೆಳಗೆ ಜಿಗಿದು ರಕ್ಷಿಸಿಕೊಂಡಿದ್ದಾರೆ.

ಅಗ್ನಿಶಾಮಕ ಸಿಬ್ಬಂದಿ ಹಾಗೂ ಸ್ಥಳೀಯ ಪೊಲೀಸರು ಸ್ಥಳಕ್ಕೆ ಧಾವಿಸಿ ಬೆಂಕಿಯನ್ನು ಹತೋಟಿಗೆ ತಂದರು. ಗಾಯಾಳುಗಳನ್ನು ತಕ್ಷಣವೇ ರಾಂಪುರ್‌ಹಾಟ್ ಸರ್ಕಾರಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಕೆಲವರ ಸ್ಥಿತಿ ಚಿಂತಾಜನಕವಾಗಿದೆ. ಪ್ರಾಥಮಿಕ ತನಿಖೆಯ ಪ್ರಕಾರ, ಶಾರ್ಟ್ ಸರ್ಕ್ಯೂಟ್ ಈ ಅಗ್ನಿ ದುರಂತಕ್ಕೆ ಕಾರಣವಾಗಿರಬಹುದು ಎಂದು ಶಂಕಿಸಲಾಗಿದೆ. ಶ್ರಾವಣ ಮಾಸದ ಕೊನೆಯ ಸೋಮವಾರವಾಗಿದ್ದರಿಂದ ತಾರಾಪೀಠದ




ಕಾಳಿ ದೇವಸ್ಥಾನಕ್ಕೆ ಪೂಜೆ ಸಲ್ಲಿಸಲು ಅಪಾರ ಸಂಖ್ಯೆಯ ಭಕ್ತರು ಆಗಮಿಸಿದ್ದು, ಹೋಟೆಲ್ ಭರ್ತಿಯಾಗಿತ್ತು. ಹೋಟೆಲ್ನಲ್ಲಿ ಸೂಕ್ತ ಅಗ್ನಿಶಾಮಕ ಸುರಕ್ಷತಾ ವ್ಯವಸ್ಥೆಗಳಿರಲಿಲ್ಲ ಎಂಬ ಆರೋಪವೂ ಕೇಳಿಬಂದಿದ್ದು, ಪೊಲೀಸರು ಕಟ್ಟಡವನ್ನು ಸೀಲ್ ಮಾಡಿ ತನಿಖೆ ಮುಂದುವರಿಸಿದ್ದಾರೆ.

ಜೂನ್ ತಿಂಗಳಲ್ಲಿ ನವದೆಹಲಿಯ ಫ್ಲೋರಿಶ್ ಸ್ಟೇ ಹೋಟೆಲ್‌ನಲ್ಲಿ ಇದೇ ರೀತಿ ಭೀಕರ ಅಗ್ನಿ ದುರಂತ ಸಂಭವಿಸಿದೆ. ಈ ಅವಘಡದಲ್ಲಿ 12 ವಿದೇಶಿಗರು ಸೇರಿದಂತೆ 21 ಮಂದಿ ಸಾವನ್ನಪ್ಪಿದ್ದಾರೆ. 40ಕ್ಕೂ ಹೆಚ್ಚು ಜನರಿಗೆ ಗಾಯವಾಗಿದೆ. 5 ಅಂತಸ್ತಿನ ಹೋಟೆಲ್ ಕಟ್ಟಡದಲ್ಲಿ ಮುಂಜಾನೆ 8:50ರ ಸುಮಾರಿಗೆ ಬೆಂಕಿ ಕಾಣಿಸಿಕೊಂಡಿತ್ತು. ಹೋಟೆಲ್‌ನಲ್ಲಿ ತುರ್ತು ನಿರ್ಗಮನ ದಾರಿ ಇರಲಿಲ್ಲ ಮತ್ತು ಒಂದೇ ಬಾಗಿಲಿದ್ದ ಕಾರಣ ಹೊಗೆ ಆವರಿಸಿ ಹಲವರು ಉಸಿರುಗಟ್ಟಿ ಅಸುನೀಗಿದ್ದರು. ಪ್ರಾಣ ಉಳಿಸಿಕೊಳ್ಳಲು ಕೆಲವರು ಕಟ್ಟಡದಿಂದ ಕೆಳಗೆ ಜಿಗಿದಿದ್ದರು.

ಜೂನ್ ತಿಂಗಳಲ್ಲೇ ಉತ್ತರ ಪ್ರದೇಶದ ಲಕ್ನೋದಲ್ಲಿ 3ಆ ಆರ್ಟ್ ಗೇಮಿಂಗ್ ಸ್ಟುಡಿಯೋ ಹಾಗೂ ತರಬೇತಿ ಸಂಸ್ಥೆ ಹೊಂದಿದ್ದ ವಾಣಿಜ್ಯ ಕಟ್ಟಡದಲ್ಲಿ ಭೀಕರ ಅಗ್ನಿ ದುರಂತ ಸಂಭವಿಸಿತ್ತು. ಈ ಘಟನೆಯಲ್ಲಿ 15 ಯುವಕರು/ವಿದ್ಯಾರ್ಥಿಗಳು ಸಜೀವ ದಹನಗೊಂಡು ಸಾವನ್ನಪ್ಪಿದ್ದರು ಹಾಗೂ 12ಕ್ಕೂ ಹೆಚ್ಚು ಜನರು ಗಂಭೀರವಾಗಿ ಗಾಯಗೊಂಡಿದ್ದರು.

ವಸತಿ ಉದ್ದೇಶದ ಪ್ಲಾಟ್‌ನಲ್ಲಿ ಅನಧಿಕೃತವಾಗಿ ವಾಣಿಜ್ಯ ಕಟ್ಟಡ ನಿರ್ಮಿಸಲಾಗಿತ್ತು. ತುರ್ತು ನಿರ್ಗಮನ ಮಾರ್ಗ ಹಾಗೂ ಫೈರ್ ಎನ್‌ಒಸಿ ಇರಲಿಲ್ಲ. ದಟ್ಟ ಹೊಗೆಯಿಂದಾಗಿ ಹೊರಬರಲಾಗದೆ ಹಲವರು ಒಳಗಡೆ ಸಿಲುಕಿ ಮೃತಪಟ್ಟರೆ, ಕೆಲವರು ಛಾವಣಿ ಹಾಗೂ ಕಿಟಕಿಗಳಿಂದ ಕೆಳಗೆ ಜಿಗಿದು ಪ್ರಾಣ ರಕ್ಷಿಸಿಕೊಂಡಿದ್ದರು. ಈಗ ಪಶ್ಚಿಮ ಬಂಗಾಳದ ಅಗ್ನಿ ದುರಂತದಲ್ಲೂ ಇದೇ ರೀತಿಯ ನಿರ್ಲಕ್ಷ್ಯ ಕಂಡುಬರುತ್ತಿದೆ.

## ಸಯಾನ್‌ನ ಗೋಕುಲದಲ್ಲಿ ಸ್ವಾತಂತ್ರ್ಯೋತ್ಸವ ಸಂಭ್ರಮಿಸಿದ ಬಿಎಸ್‌ಕೆಬಿಎ

# ಡಾ.ವೈ.ವಿ.ಮಧುಸೂದನ್ ರಾವ್‌ಗೆ ಗೋಕುಲ ಕಲಾಶ್ರೀ ಪ್ರಶಸ್ತಿ ಪ್ರದಾನ

**ಮುಂಬಯಿ, ಆ.17:** ಬಿಎಸ್‌ಕೆಬಿ ಅಸೋಸಿಯೇಶನ್ ಸಯಾನ್‌ನಲ್ಲಿನ ತನ್ನ ಗೋಕುಲದಲ್ಲಿ ರಾಷ್ಟ್ರದ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮಿಸಿತು. ಪ್ರಾತಃಕಾಲ ಬಿಎಸ್‌ಕೆಬಿಎ ಅಧ್ಯಕ್ಷ ಡಾ| ಸುರೇಶ್ ಎಸ್. ರಾವ್ ಅವರು ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ, ಸಂಘದ ಸದಸ್ಯರನ್ನೊಳಗೊಂಡು ಧ್ವಜಾರೋಹಣಗೈದು ನೆರೆದ ಸರ್ವರಿಗೂ ಸ್ವಾತಂತ್ರ್ಯ ದಿನದ ಶುಭಾಶಯಗಳನ್ನು ಕೋರಿದರು.

ಬಳಿಕ ಡಾ| ಸುರೇಶ್ ಎಸ್.ರಾವ್ ಅವರ ಅಧ್ಯಕ್ಷತೆಯಲ್ಲಿ ಜರಗಿದ ಸಭಾ ಕಾರ್ಯಕ್ರಮದಲ್ಲಿ ಉಪಾಧ್ಯಕ್ಷರಾದ ವೈ.ಮೋಹನ್‌ರಾಜ್ ಮತ್ತು ಚಿತ್ರಾ ಎ.ಮೇಲ್ಮನೆ, ಗೌರವ ಕಾರ್ಯದರ್ಶಿ ಎ.ಪಿ.ಕೆ ಪೋತಿ, ಕೋಶಾಧಿಕಾರಿ ಗಣೇಶ್ ಭಟ್, ಗೌರವ ಜೊತೆ ಕಾರ್ಯದರ್ಶಿಗಳಾದ ಪಿ.ವಿನೋದಿನಿ ರಾಜೇಶ್‌ರಾವ್ ಮತ್ತು ಪ್ರಶಾಂತ್ ಆರ್.ಹೆರ್ಲೆ, ಗೋಕುಲ ಕಲಾವೃಂದ ಅಧ್ಯಕ್ಷೆ ಶೈಲಿನಿ ಎ.ರಾವ್ ಉಪಸ್ಥಿತರಿದ್ದರು.

ಧಾರ್ಮಿಕ ಶ್ರದ್ಧೆ ಹಾಗೂ ಸಾಮಾಜಿಕ ಜವಾಬ್ದಾರಿಗಳು ಒಂದಾಗಿದ್ದಾಗ ಮಾತ್ರ ನೈಜ ಸಮಾಜಮುಖಿ ಸೇವೆ ಸಿದ್ಧಿಸುತ್ತದೆ. ಧರ್ಮ ಎಂದರೆ ಕೇವಲ ಪೂಜೆ-ಪುನಸ್ಕಾರಗಳಷ್ಟೇ ಅಲ್ಲ, ದೀನ-ದಲಿತರ ಸೇವೆ ಮತ್ತು ಸಮಾಜದ ಏಳಿಗೆಗೆ ಕೈಜೋಡಿಸುವುದೇ ನಿಜವಾದ ಶ್ರೇಷ್ಠ ಕರ್ತವ್ಯವಾಗಿದೆ. ಇಂತಹ ಧರ್ಮನಿಷ್ಠೆ ರಾಷ್ಟ್ರಪ್ರೇಮದಲ್ಲೂ ಮೆರೆದಾಗ ಮನುಕುಲದ ಬದುಕು ಹಸನಾಗುವುದು. ಜೊತೆಗೆ ಭಕ್ತಾದಿಗಳಲ್ಲಿ ಆಧ್ಯಾತ್ಮಿಕ ಶಾಂತಿ



ಮತ್ತು ನೈತಿಕ ಮೌಲ್ಯಗಳನ್ನು ಜಾಗೃತಗೊಂಡತೆ ನಮ್ಮ ಸಾಮಾಜಿಕ ಕಾಳಜಿ ಜವಾಬ್ದಾರಿತವಾಗಿ ಅವಶ್ಯಕರಿಗೆ ನೆರವಿನ ಹಸ್ತ ಚಾಚಿ ಪ್ರೀತಿ-ಸೌಹಾರ್ದತೆಗಳನ್ನು ಬಿತ್ತುತ್ತದೆ. ಈ ಮೂಲಕ ಧರ್ಮೋದ್ಧಾರ ಜೊತೆಗೆ ರಾಷ್ಟ್ರೋದ್ಧಾರ ಸಾಧ್ಯವಾಗುವುದು. ಆದ್ದರಿಂದ ಮಾನವೀಯ ಮೌಲ್ಯಗಳೊಂದಿಗೆ ಸಮೃದ್ಧ ಹಾಗೂ ಸಾಮರಸ್ಯದ ನವ ಸಮಾಜವನ್ನು ನಿರ್ಮಿಸೋಣ ಎಂದು ಡಾ| ಸುರೇಶ್ ಎಸ್. ರಾವ್ ತಿಳಿಸಿದರು.

ದಿ| ಬೈಲೂರು ಬಾಲಚಂದ್ರ ರಾವ್ ಅವರು ಗೋಕುಲದಲ್ಲಿ ಸ್ಥಾಪಿಸಿದ ಗೋಕುಲ ಕಲಾಶ್ರೀ ಪ್ರಶಸ್ತಿ-2026ನ್ನು, ಪ್ರತಿಭಾನ್ವಿತ ಸಾಹಿತಿ, ನಟ, ನಿರ್ದೇಶಕ, ಯಕ್ಷಗಾನ ಕಲಾವಿದ ಡಾ| ವೈ.ವಿ.ಮಧುಸೂದನ್‌ರಾವ್ ಅವರಿಗೆ ಪ್ರದಾನಿಸಿ ಗೌರವಿಸಿ ಅಭಿನಂದಿಸಿದರು.

ಬಾಲಚಂದ್ರರಾವ್ ಅವರ ಪತ್ನಿ ಪ್ರಭಾವತಿ ರಾವ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದು, ಶೈಲಿನಿ ರಾವ್ ಪ್ರಶಸ್ತಿಯ ಬಗ್ಗೆ ಮಾತನಾಡಿದರು. ಪ್ರಶಾಂತ್ ಹೆರ್ಲೆ ಕಾರ್ಯಕ್ರಮ ನಿರೂಪಿಸಿದರು. ಐ.ಕೆ ಪ್ರೇಮಾ ಎಸ್.ರಾವ್ ಸನ್ಮಾನ ಪತ್ರ ವಾಚಿಸಿದರು. ಎ.ಪಿ.ಕೆ ಪೋತಿ, ಧನ್ಯವದಿಸಿದರು.

# ಅಶೋಕಧಾಮ ದೇಗುಲದಲ್ಲಿ ಕಾಲ್ತುಳಿತ: 7 ಸಾವು

**ಪಟನಾ, ಆ. 17:** ಬಿಹಾರದ ಲಖಿಸರಾಯ್ನಲ್ಲಿರುವ ಅಶೋಕಧಾಮ ದೇವಾಲಯದಲ್ಲಿ ಸೋಮವಾರ ಬೆಳಿಗ್ಗೆ ಸಂಭವಿಸಿದ ಕಾಲ್ತುಳಿತದಲ್ಲಿ ಕನಿಷ್ಠ ಏಳು ಮಂದಿ ಸಾವನ್ನಪ್ಪಿದ್ದಾರೆ. ಹಲವಾರು ಮಂದಿ ಗಾಯಗೊಂಡಿದ್ದಾರೆ.

ಗಾಯಾಳುಗಳನ್ನು ಆಸ್ಪತ್ರೆಗೆ ಕಳುಹಿಸಲಾಗಿದೆ. ಶ್ರಾವಣ ಮಾಸದ ಮೂರನೇ ಸೋಮವಾರದಂದು ಶಿವ ದೇವಾಲಯದಲ್ಲಿ ಪೂಜೆಗೆ ಹೆಚ್ಚಿನ ಸಂಖ್ಯೆಯ ಭಕ್ತರು ಸೇರಿದ್ದರು. ಈ ವೇಳೆ ಬೆಳಗ್ಗೆ 6.45 ರ ಸುಮಾರಿಗೆ ಕಾಲ್ತುಳಿತ ಉಂಟಾಗಿದೆ. ವಿದ್ಯುತ್ ಕಂಬ ಬಿದ್ದ ನಂತರ ಜನರಲ್ಲಿ ಭೀತಿ ಉಂಟಾಗಿದ್ದು ಈ ವೇಳೆ ಕಾಲ್ತುಳಿತ ಉಂಟಾಗಿದೆ ಎಂದು ಎಸ್ಡಿಪಿಒ ಶಿವಂ ಕುಮಾರ್ ಮಾಹಿತಿ ನೀಡಿದ್ದಾರೆ.

ಏಳು ಮಂದಿ ಸಾವನ್ನಪ್ಪಿದ್ದಾರೆ. ವಿದ್ಯುತ್ ಕಂಬ ಬಿದ್ದು ಜನರು ವಿದ್ಯುತ್ ಸ್ಪರ್ಶಿಸಿ ಸಾವನ್ನಪ್ಪಿದ್ದಾರೆ ಎಂಬ ಸುದ್ದಿ ಬರುತ್ತಿದ್ದಂತೆ ಕಾಲ್ತುಳಿತದಂತಹ ಪರಿಸ್ಥಿತಿ ಉಂಟಾಗಿದೆ. ಎಲ್ಲವನ್ನೂ ಪರಿಶೀಲಿಸಿದ ನಂತರವೇ ನಿಖರವಾದ




ಕಾರಣವನ್ನು ನಾವು ನಿಮಗೆ ಹೇಳಬಹುದು ಎಂದೂ ತಿಳಿಸಿದ್ದಾರೆ.

ಜನಸಂದಣಿ ತುಂಬಾ ಅಧಿಕವಾಗಿತ್ತು. ಬೆಳಿಗ್ಗೆ 6.30-6.45 ರ ಸುಮಾರಿಗೆ ಎರಡು ರೈಲುಗಳಷ್ಟು ಜನರು ಇಲ್ಲಿಗೆ ಆಗಮಿಸಿದ್ದಾರೆ. ಜನಸಂದಣಿ ನಿರೀಕ್ಷೆಯಂತೆ ವ್ಯವಸ್ಥೆ ಮಾಡಲಾಗಿತ್ತು. ಆದರೆ ಒಂದು ಬದಿಯಲ್ಲಿ ಬ್ಯಾರಿಕೇಡಿಂಗ್ ಮುರಿದು ಜನರು ಪರಸ್ಪರರ ಮೇಲೆ ಬಿದ್ದಿದ್ದಾರೆ ಎಂದು ತಿಳಿಯಿತು. ನಾವು ತಕ್ಷಣ 10-15 ಮಂದಿಯನ್ನು ಆಸ್ಪತ್ರೆಗೆ ದಾಖಲಿಸಿದ್ದೇವೆ ಎಂದು ಲಖಿಸರಾಯ್ ಡಿಎಂ ಶೈಲೇಂದ್ರ ಕುಮಾರ್ ಹೇಳಿದ್ದಾರೆ.

# ವಂದೇಮಾತರಂ ಗೀತೆಗೆ ಅಗೌರವ: ಸೋನಿಯಾ, ರಾಹುಲ್ ಗಾಂಧಿ ಗಡೀಪಾರು ಮಾಡುವುದೇ ಒಳ್ಳೆಯದು: ಛಲವಾದಿ ನಾರಾಯಣಸ್ವಾಮಿ

**ಬೆಂಗಳೂರು, ಆ.17:** ವಂದೇ ಮಾತರಂ ಗೀತೆಗೆ ಅವಮಾನ ಮಾಡಿರುವ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿಯವರನ್ನು ಗಡೀಪಾರು ಮಾಡುವುದೇ ಒಳ್ಳೆಯದು ಎಂದು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು.

ವಿಧಾನಸೌಧದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಂದೇಮಾತರಂ ಹಾಡುವಾಗ ಕಾಂಗ್ರೆಸ್ ಅವಮಾನ ಮಾಡಿದೆ. ಸೋನಿಯಾ ಗಾಂಧಿ ಈ ದೇಶದ ಪ್ರಜೆ ಅಲ್ಲ. ಅವರಿಗೆ ದೇಶದ ಬಗ್ಗೆ ಗೌರವ ಇಲ್ಲ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೂ ವಂದೇ ಮಾತರಂ ಹಾಡುವಾಗ ಗೌರವ ತೋರಿಸಿ ನಿಲ್ಲಿಸಿ ನಿಲ್ಲಿಸಿ ಎಂದು ಕಾನೂನು ತಿರಸ್ಕಾರ ಮಾಡಿದ್ದಾರೆ. ಇವರಿಗೆಲ್ಲ ಈ ದೇಶಲ್ಲಿ ಇರುವ ಯೋಗ್ಯತೆ ಇಲ್ಲ,



ಇವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

**ಮೂವರನ್ನು ಕಗ್ಗೊಲೆ ಮಾಡಿದ ಸರಕಾರ:** ಚಾಮರಾಜನಗರ ಜಿಲ್ಲೆ ಹನೂರು ತಾಲೂಕಿನ ಕಾವೇರಿ ವನ್ಯಜೀವಿಧಾಮದ ಮರಿಯ ಮಂಗಲ ಅರಣ್ಯ ಪ್ರದೇಶದಲ್ಲಿ ಮೂವರನ್ನು ಈ ಸರಕಾರ ಕಗ್ಗೊಲೆ ಮಾಡಿದೆ ಎಂದು ಛಲವಾದಿ ನಾರಾಯಣಸ್ವಾಮಿ ಆರೋಪಿಸಿದರು. ಅಲ್ಪಸಂಖ್ಯಾತರ ಪರ ಇದ್ದೇವೆ ಎಂದು ಹೇಳುವ ಸರಕಾರವೇ ಅದೇ ಸಮುದಾಯಕ್ಕೆ ಸೇರಿದ ಮೂವರನ್ನು ಎನ್‌ಕೌಂಟರ್ ಮಾಡಿದೆ. ಇದು ಎಷ್ಟು ಸರಿ ಎಂದು ಪ್ರಶ್ನಿಸಿದ ಅವರು, ಈ ಸರಕಾರಕ್ಕೆ ಜನರ ಪ್ರಾಣದ ಬೆಲೆಯೇ ಗೊತ್ತಿಲ್ಲ. ಈ ಬಗ್ಗೆ ಸರಕಾರ ಎರಡೂ ಸದನದಲ್ಲಿ ತನ್ನ ನಿಲುವನ್ನು ಪ್ರಕಟಿಸಬೇಕು ಎಂದು ಆಗ್ರಹಿಸಿದರು.

**ನಾಗೇಂದ್ರ ರಾಜೀನಾಮೆ ನೀಡುವವರೆಗೂ ಹೋರಾಟ:** ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ ರೂ. ನುಂಗಿದ್ದ ನಾಗೇಂದ್ರ ಅವರನ್ನೇ ಮತ್ತೆ ಈ ಸರ್ಕಾರದಲ್ಲಿ ಸಚಿವರಾಗಿ ನೇಮಿಸಲಾಗಿದೆ. ನಾಗೇಂದ್ರ ಅವರಿಗೆ ಇನ್ನೂ ಕ್ಲೀನ್‌ಚಿಟ್ ಸಿಕ್ಕಿಲ್ಲ. ನ್ಯಾಯಾಲಯದಲ್ಲಿ ಪ್ರಕರಣದ ವಿಚಾರಣೆ ನಡೆಯುತ್ತಿದೆ. ಹಣ ನುಂಗಿದ್ದ ಸರ್ಕಾರ ಮತ್ತು ಕಾಂಗ್ರೆಸ್ ಪಕ್ಷ. ಹಣ ತಿಂದ ಪಾಪಕ್ಕೆ ನಾಗೇಂದ್ರ ಅವರ ಭವಿಷ್ಯ ಕಟ್ಟಿಕೊಡಲು ಸಚಿವರಾಗಿನ್ನಾಗಿಸಿದ್ದಾರೆ. ನಾಗೇಂದ್ರ ಅವರು ರಾಜೀನಾಮೆ ಕೊಡುವವರೆಗೂ ಸದನ ನಡೆಯಲು ಬಿಡುವುದಿಲ್ಲ. ಹೋರಾಟ ಮಾಡೇ ತೀರುತ್ತೇವೆ ಎಂದರು.

**ಕಾಶಪ್ಪನವರ್ ಸಂಪುಟದಿಂದ ಕೈಬಿಡಿ:** ಮೋದಿ ದೇಶವನ್ನು ಹೊಲಗೇರಿ ಮಾಡಿದ್ದಾರೆ ಎಂದು ಸಚಿವ ವಿಜಯಾನಂದ ಕಾಶಪ್ಪನವರ್ ಅವರು ಹೇಳಿ ಇಡೀ ದಲಿತ ಸಮುದಾಯಕ್ಕೆ ಅವಮಾನ ಮಾಡಿದ್ದಾರೆ. ಆದ್ದರಿಂದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸಚಿವರನ್ನು ಸಂಪುಟದಿಂದ ಕೈಬಿಡಬೇಕು ಎಂದು ಒತ್ತಾಯಿಸಿದರು. ಕಾಂಗ್ರೆಸ್ ಹೇಗೆ ದಲಿತರ ವಿರುದ್ಧ ಇದೆ ಎಂಬುದು ಜಗಜ್ಜಾಹೀರಾಗಿದೆ. ಈ ವಿಷಯವನ್ನೂ ಸದನದಲ್ಲಿ ಪ್ರಸ್ತಾಪಿಸಲಾಗುವುದು. ಉತ್ತರ ಸಿಗುವವರೆಗೆ ಸದನ ನಡೆಯಲು ಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

# ನಾಗೇಂದ್ರ ಎಂದರೆ ಮುಖ್ಯಮಂತ್ರಿಗೆ ಭಯವೇ: ವಿಜಯೇಂದ್ರ

**ಬೆಂಗಳೂರು,ಆ.17:** ಭ್ರಷ್ಟಾಚಾರದ ಗಂಭೀರ ಆರೋಪ ಹೊತ್ತ ನಾಗೇಂದ್ರ ಎಂದರೆ ಮುಖ್ಯಮಂತ್ರಿಗಳಿಗೆ ಭಯವೇ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪ್ರಶ್ನಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬರಗಾಲ, ಕೆಪಿಎಸ್ಸಿ ಹಗರಣ ಸೇರಿ ಅನೇಕ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚೆ ಆಗಬೇಕಿದೆ. ಇವೆಲ್ಲ ಚರ್ಚೆ ಮಾಡಲು ಮುಖ್ಯಮಂತ್ರಿಗಳು ಇಂಥ ಕಳಂಕಿತ ಸಚಿವರನ್ನು ಮಂತ್ರಿಮಂಡಲದಿಂದ ತಕ್ಷಣ ಕೈಬಿಡಬೇಕು ಎಂದು ಆಗ್ರಹಿಸಿದರು.

ಸರಕಾರದಲ್ಲಿ ಕಳಂಕಿತರಾದ ನಾಗೇಂದ್ರರನ್ನು ಸಚಿವಸಂಪುಟದಲ್ಲಿ ಸೇರಿಸಿದ್ದು, ಅವರನ್ನು ಕೈಬಿಡಬೇಕೆಂದು ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಶಾಸಕರು ಇವತ್ತು ಸದನದಲ್ಲಿ ಒಕ್ಕೊರಲಿನಿಂದ ಆಗ್ರಹಿಸುತ್ತಿದ್ದೇವೆ ಎಂದು ತಿಳಿಸಿದರು. ರಾಜ್ಯಾದ್ಯಂತ ಎಲ್ಲ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿ ಕಚೇರಿ ಮುಂದೆ ನಮ್ಮ ಕಾರ್ಯಕರ್ತರು ಪ್ರತಿಭಟನೆಯನ್ನು ಇವತ್ತು ಪ್ರಾರಂಭಿಸಿದ್ದಾರೆ. ಅನಿರ್ದಿಷ್ಟಾವಧಿ ಕಾಲದವರೆಗೆ ಪ್ರತಿಭಟನೆ ನಡೆಯಲಿದೆ ಎಂದು ತಿಳಿಸಿದರು.

ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆಗಿದ್ದಾಗ ನಾಗೇಂದ್ರ ಅವರು ಭ್ರಷ್ಟಾಚಾರದ ಆರೋಪ ಹೊತ್ತು ರಾಜೀನಾಮೆ ನೀಡಿದ್ದರು. ಈಗ ಮತ್ತೆ ಅವರನ್ನು ಸಚಿವಸಂಪುಟಕ್ಕೆ ತೆಗೆದುಕೊಳ್ಳುವ ಅನಿವಾರ್ಯತೆ ಯಾಕೆ ಬಂತು ನಿಮಗೆ ಎಂದು ಕೇಳಿದರು. ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ಲೂಟಿ ಮಾಡಿದ ವ್ಯಕ್ತಿಯನ್ನು ಮತ್ತೆ ಸಚಿವಸಂಪುಟಕ್ಕೆ ತೆಗೆದುಕೊಂಡಿದ್ದೀರಿ. ಮಾನ್ಯ ಮುಖ್ಯಮಂತ್ರಿಗಳೇ, ಈ ದಲಿತ ಸಮುದಾಯದ ಬಗ್ಗೆ ಇದೇನಾ ನಿಮ್ಮ ಕಾಳಜಿ ಎಂದು ಪ್ರಶ್ನಿಸಿದರು.

ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆಗಿದ್ದಾಗ ನಾಗೇಂದ್ರರ ವಿಚಾರ ಇದೇ ಸದನದಲ್ಲಿ ಈ ಹಿಂದೆ ಅವ್ಯವಹಾರದ ಕುರಿತಂತೆ ಚರ್ಚೆ ಆಗಿದೆ. ನಂತರದಲ್ಲೇ ನಾಗೇಂದ್ರರ ರಾಜೀನಾಮೆ ಪಡೆಯಲಾಗಿತ್ತು. ಈ ವಿಚಾರದಲ್ಲಿ ಚರ್ಚೆ ಬೇಡ. ನಾಗೇಂದ್ರರ ವಿರುದ್ಧ ಇದೀಗ ಆರೋಪಪಟ್ಟಿ ಹಾಕಲಾಗಿದೆ. ಅವರು ನಿರಪರಾಧಿ ಎಂದು ಎಲ್ಲೂ



ಸಾಬೀತಾಗಿಲ್ಲ ಎಂದು ತಿಳಿಸಿದರು.

ನಾಳೆ ನಾಗೇಂದ್ರರು ನಿಪರರಾಧಿ ಎಂದು ಸಾಬೀತಾದರೆ ಅವರನ್ನು ಸಚಿವರನ್ನಾಗಿ ಮಾಡುವ ಬದಲು ಮುಖ್ಯಮಂತ್ರಿಯನ್ನಾಗಿ ಮಾಡಿ. ನಮ್ಮದೇನೂ ಅಭ್ಯಂತರವಿಲ್ಲ ಎಂದು ತಿಳಿಸಿದರು. ಇವತ್ತು ಕಳಂಕಿತ ಸಚಿವರನ್ನು ಸದನದಲ್ಲಿ ಕೂರಿಸಿಕೊಂಡು ನಾವು ಚರ್ಚೆ ಮಾಡಲು ತಯಾರಿಲ್ಲ. ಅವರು ನಿರ್ದೋಷಿ ಎಂದು ಸಾಬೀತಾಗುವವರೆಗೆ ಸಚಿವಸಂಪುಟದಲ್ಲಿ ಇಟ್ಟುಕೊಳ್ಳುವ ಪ್ರಶ್ನೆಯೇ ಇಲ್ಲ ಎಂದು ಹೇಳಿದರು.

ಸದನದ ಒಳಗೆ ಮಾತ್ರವಲ್ಲದೇ ಸದನದ ಹೊರಗಡೆಯಿಂದಲೂ ಹೋರಾಟ ಮಾಡುತ್ತಿದ್ದೇವೆ ಎಂದು ನುಡಿದರು. ಹಣವನ್ನು ನೂರಾರು ನಕಲಿ ಬ್ಯಾಂಕ್ ಖಾತೆಗಳಿಗೆ ವರ್ಗಾವಣೆ ಮಾಡಿರುವುದು, ಚಿನ್ನ ಖರೀದಿ ಮಾಡಿದ್ದು ಜಗಜ್ಜಾಹೀರಾಗಿದೆ. ಇದರ ಕುರಿತು ವಿಧಾನಪರಿಷತ್ತಿನಲ್ಲಿ ಮಾಹಿತಿ ಕೊಟ್ಟಿದ್ದಾರೆ ಎಂದು ಅವರು ಪ್ರಶ್ನೆಗೆ ಉತ್ತರಿಸಿದರು. ಲೋಕಸಭಾ ಚುನಾವಣೆಯಲ್ಲಿ ಈ ಹಣ ದುರುಪಯೋಗ ಆದ ಕುರಿತಂತೆ ಇ.ಡಿ. ಪತ್ರಿಕಾ ಹೇಳಿಕೆಯಲ್ಲೂ ತಿಳಿಸಿದ್ದಾರೆ. ಈ ವಿಚಾರವಾಗಿ ಸದನದಲ್ಲಿ ಚರ್ಚೆ ಮಾಡುವ ಅವಶ್ಯಕತೆ ಇಲ್ಲ. ನಾವು ಕೂಡ ಸದನದ ಅಮೂಲ್ಯ ಸಮಯ ವ್ಯರ್ಥ ಮಾಡಲು ಸಿದ್ಧರಿಲ್ಲ ಎಂದು ತಿಳಿಸಿದರು. ಬರಗಾಲ, ಕೆಪಿಎಸ್ಸಿ ಹಗರಣ ಸೇರಿ ಅನೇಕ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚೆ ಆಗಬೇಕಿದೆ. ಇವೆಲ್ಲ ಚರ್ಚೆ ಮಾಡಲು ಮುಖ್ಯಮಂತ್ರಿಗಳು ಇಂಥ ಕಳಂಕಿತ ಸಚಿವರನ್ನು ಮಂತ್ರಿಮಂಡಲದಿಂದ ತಕ್ಷಣ ಕೈಬಿಡಬೇಕು ಎಂದು ಆಗ್ರಹಿಸಿದರು. ವಿಪಕ್ಷ ನಾಯಕ ಆರ್.ಅಶೋಕ್ ಮತ್ತು ಶಾಸಕರು ಉಪಸ್ಥಿತರಿದ್ದರು.

# ಮಾನಸಿಕ ರೋಗಿಗಳಿಗೆ ಸೂಕ್ತ ಆರೈಕೆ ಬೆಂಬಲ ಅಗತ್ಯ: ಡಾ.ಸಿ.ಆರ್.ಚಂದ್ರಶೇಖರ್

ಬೆಂಗಳೂರು, ಆ. 17: ಮಾನಸಿಕ ಆರೋಗ್ಯದ ವಲಯದಲ್ಲಿ ಸಾರ್ವಜನಿಕರಿಗೆ ಮಾನಸಿಕ ಕ್ಷೇಮ ಮತ್ತು ಸಮಾಲೋಚನಾ ಸೇವೆಗಳನ್ನು ಸುಲಭವಾಗಿ ದೊರಕಿಸುವ ಉದ್ದೇಶದಿಂದ ರೋಟರಿ ಬನ್ನೇರುಘಟ್ಟ ರೋಡ್ (ಆರ್.ಬಿ.ಬಿ.ಅರ್)ನಿಂದ ಸಮಾಧಾನ ಮನಚೈತನ್ಯ ಸಮಾಲೋಚನಾ ಕೇಂದ್ರವನ್ನು ಬನ್ನೇರುಘಟ್ಟ ರಸ್ತೆಯ ಗೊಟ್ಟಿಗೆರೆಯ ಸರ್ಕಾರಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಆರಂಭಿಸಲಾಗಿದೆ.

ಸರ್ಕಾರಿ ಆರೋಗ್ಯ ವ್ಯವಸ್ಥೆಯ ಮೂಲಕವೇ ಮಾನಸಿಕ ಆರೋಗ್ಯ ಸೇವೆಗಳನ್ನು ಜನರ ಸಮೀಪಕ್ಕೆ ಕೊಂಡೊಯ್ಯುವ ಈ ಉಪಕ್ರಮ ಮಹತ್ವದ ಹೆಜ್ಜೆಯಾಗಿದೆ. ಮಾನಸಿಕ ಆರೋಗ್ಯದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಭಾವನಾತ್ಮಕ ಹಾಗೂ ಮಾನಸಿಕ ಸಮಸ್ಯೆಗಳನ್ನು ಎದುರಿಸುತ್ತಿರುವವರಿಗೆ ಸೂಕ್ತ ಸಮಾಲೋಚನೆ ಮತ್ತು ಮಾರ್ಗದರ್ಶನ ನೀಡುವುದು ಹಾಗೂ ಅಗತ್ಯವಿದ್ದಾಗ ಯಾವುದೇ ಹಿಂಜರಿಕೆಯಿಲ್ಲದೆ ತಜ್ಞರ ನೆರವು ಪಡೆಯುವಂತೆ ಪ್ರೋತ್ಸಾಹಿಸುವುದು ಈ ಕೇಂದ್ರದ ಪ್ರಮುಖ ಉದ್ದೇಶವಾಗಿದೆ.

ರೋಟರಿ ಜಿಲ್ಲೆ 3191ರ ಜಿಲ್ಲಾ ಗವರ್ನರ್ ರೋಟೇರಿಯನ್ ಅನಿಲ್ ಗುಪ್ತಾ, ಆರೋಗ್ಯಾಧಿಕಾರಿ ಡಾ. ಎ.ಎಸ್. ಬಾಲಸುಂದರ್, ಮಾನಸಿಕ ಆರೋಗ್ಯ ವಿಭಾಗದ ಉಪನಿರ್ದೇಶಕರಾದ ಡಾ. ರಜನಿ ಪಾರ್ಥಸಾರಥಿ ಹಾಗೂ ಡಾ. ಸಿ.ಆರ್. ಚಂದ್ರಶೇಖರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಡಾ. ಸಿ.ಆರ್. ಚಂದ್ರಶೇಖರ್, ದೈಹಿಕ ಆರೋಗ್ಯದಷ್ಟೇ ಮಾನಸಿಕ ಆರೋಗ್ಯವೂ ಮುಖ್ಯ. ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ನಿರ್ಲಕ್ಷಿಸಬಾರದು. ಮಾನಸಿಕ ಸಮಸ್ಯೆ ಇರುವವರನ್ನು ಕಳಂಕದ ದೃಷ್ಟಿಯಿಂದ ನೋಡಬಾರದು. ಸಮಸ್ಯೆಗಳನ್ನು ಆರಂಭಿಕ ಹಂತದಲ್ಲೇ ಗುರುತಿಸಿ, ಸೂಕ್ತ ಸಮಯದಲ್ಲಿ ಸಮಾಲೋಚನೆ ನಡೆಸಿ ಆರೈಕೆ ಮತ್ತು ಬೆಂಬಲ ನೀಡುವುದು ಅತ್ಯಂತ ಅಗತ್ಯ? ಎಂದು ಹೇಳಿದರು.

ಸರ್ಕಾರಿ ಆರೋಗ್ಯ ಕೇಂದ್ರದಲ್ಲಿಯೇ ಮಾನಸಿಕ ಕ್ಷೇಮ ಸೇವೆಗಳನ್ನು ಆರಂಭಿಸುವ ಮೂಲಕ ಸಾರ್ವಜನಿಕರಿಗೆ ನೆರವನ್ನು ಮತ್ತಷ್ಟು ಸುಲಭಗೊಳಿಸಿರುವ ರೋಟರಿ ಬನ್ನೇರುಘಟ್ಟ ರೋಡ್ ಸಂಸ್ಥೆಯ ಕಾರ್ಯವನ್ನು ಗಣ್ಯರು ಶ್ಲಾಘಿಸಿದರು. ಸಮಾಧಾನದಿಂದ ಬಲಿಷ್ಠ ಮನಸ್ಸು, ಬಲಿಷ್ಠ ಮನಸ್ಸಿನಿಂದ ಆರೋಗ್ಯಕರ ಸಮಾಜ ಎಂಬ ಆಶಯದೊಂದಿಗೆ ಈ ಮಾನಸಿಕ ಆರೋಗ್ಯ ರಕ್ಷಣೆಗೆ ಆದ್ಯತೆ ನೀಡಲಾಗಿದೆ.

ಈ ಮಹತ್ವದ ಉಪಕ್ರಮಕ್ಕೆ ರೋಟರಿ ಜಿಲ್ಲಾ 3191ರ ಮಾನಸಿಕ ಕ್ಷೇಮ ವಿಭಾಗದ ಜಿಲ್ಲಾ ನಿರ್ದೇಶಕ ರೋಟೇರಿಯನ್ ರಘು ಅಲ್ಲಂ, ಆರ್.ಬಿ.ಬಿ.ಆರ್ ಅಧ್ಯಕ್ಷ ಸುರೇಶ್ ಪ್ರಕಾಶ್, ಆರ್.ಬಿ.ಬಿ.ಆರ್ ಮಾನಸಿಕ ಕ್ಷೇಮ ವಿಭಾಗದ ನಿರ್ದೇಶಕ ವಂದನಾ ಕುಲಕರ್ಣಿ, ನಿಕಟಪೂರ್ವ ಅಧ್ಯಕ್ಷರಾದ ಡಾ. ಕನ್ವಲ್ ಅವರ ನೇತೃತ್ವದಲ್ಲಿ ಹಾಗೂ ಗೊಟ್ಟಿಗೆರೆ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಆರ್.ಎನ್. ಲಕ್ಷ್ಮೀಪತಿ ಅವರ ಸಹಕಾರದಲ್ಲಿ ಈ ಚಟುವಟಿಕೆ ನಡೆಯುತ್ತಿದೆ.ಸಮಾಧಾನ ಮನಚೈತನ್ಯ ಯೋಜನೆಯು ಮಾನಸಿಕ ಆರೋಗ್ಯದ ಕುರಿತು ಜಾಗೃತಿ ಮೂಡಿಸುವುದರ ಜೊತೆಗೆ, ಮನಸ್ಸನ್ನು ಬಲಪಡಿಸಿ ಆರೋಗ್ಯಕರ ಸಮಾಜ ನಿರ್ಮಿಸುವ ಗುರಿ ಹೊಂದಿದೆ. ಮುಂದಿನ ದಿನಗಳಲ್ಲಿ ಮಾನಸಿಕ ಆರೋಗ್ಯ ಜಾಗೃತಿ ಹಾಗೂ ಸಮಾಲೋಚನಾ ಸೇವೆಗಳನ್ನು ಇನ್ನಷ್ಟು ವಿಸ್ತರಿಸಿ, ಅಗತ್ಯವಿರುವ ಪ್ರತಿಯೊಬ್ಬರಿಗೂ ಸರಿಯಾದ ಸಮಯದಲ್ಲಿ ನೆರವು ದೊರಕುವಂತೆ ಮಾಡುವುದಾಗಿ ರೋಟರಿ ಬನ್ನೇರುಘಟ್ಟ ರೋಡ್ ತಿಳಿಸಿದೆ.

# ಜೈಲ್‌ನಲ್ಲೇ ಪ್ರಜ್ವಲ್‌ಗೆ ಡಿಜಿಪಿ ಅಲೋಕ್‌ಕುಮಾರ್ ಕ್ಲಾಸ್

**ಬೆಂಗಳೂರು, ಆ.17:** ಮನೆಗೆಲಸದ ಮಹಿಳೆ ಮೇಲೆ ಅತ್ಯಾಚಾರ ಎಸಗಿದ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರಿಗೆ ಬಳಿ ಮೊಬೈಲ್ ಪತ್ತೆಯಾದ ನಂತರ ತೀವ್ರ ಆಕ್ರೋಶಗೊಂಡಿರುವ ಡಿಜಿಪಿ ಅಲೋಕ್ ಕುಮಾರ್ ಅವರು ಮಾಜಿ ಸಂಸದನಿಗೆ ಜೈಲಿನಲ್ಲೇ ತರಾಟೆಗೆ ತೆಗೆದುಕೊಂಡಿದ್ದಾರೆ ಎಂದು ಮೂಲಗಳು ತಿಳಿಸಿವೆ.



ಕೇಂದ್ರ ಅಪರಾಧ ವಿಭಾಗದ(ಸಿಸಿಬಿ) ಪೊಲೀಸ್ ತಂಡ ಪರಪ್ಪನ ಅಗ್ರಹಾರ ಜೈಲಿನ ಮೇಲೆ ಹಠಾತ್ ದಾಳಿ ನಡೆಸಿದ ವೇಳೆ ಪ್ರಜ್ವಲ್ ರೇವಣ್ಣ ಮತ್ತು ಇನ್ನೊಬ್ಬ ವಿಚಾರಣಾಧೀನ ಕೈದಿ ಬಳಿ ಮೊಬೈಲ್ ಫೋನ್ ಹಾಗೂ ಪೆನ್ ಡ್ರೈವ್ ಪತ್ತೆಯಾಗಿತ್ತು. ಬಳಿಕ ಪರಪ್ಪನ ಅಗ್ರಹಾರ ಜೈಲಿಗೆ ದಿಢೀರ್ ಭೇಟಿ ನೀಡಿದ ಅಲೋಕ್ ಕುಮಾರ್ ಅವರು, ಹಲವು ಬ್ಯಾರಕ್‌ಗಳಿಗೆ ಭೇಟಿ ನೀಡಿ ಪರಿಶೀಲಿಸಿದರು. ಈ ವೇಳೆ ಪ್ರಜ್ವಲ್ ರೇವಣ್ಣ ಇದ್ದ ಬ್ಯಾರಕ್‌ನಲ್ಲಿ ಮಾತ್ರ ಸುಮಾರು 10ರಿಂದ 12 ನಿಮಿಷಗಳ ಕಾಲ ವಿಶೇಷವಾಗಿ ಮಾತನಾಡಿದ್ದಾರೆ.. ಇದೇ ವಿಚಾರಕ್ಕೆ ಅಲೋಕ್ ಕುಮಾರ್ ಅವರ ಪ್ರಜ್ವಲ್ ಅವರನ್ನು ತೀವ್ರ ತರಾಟೆಗೆ ತೆಗೆದುಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಸಂಸದನ ವಿರುದ್ಧ ಕೇಸ್ ದಾಖಲು ನಿನ್ನಿಂದಲೇ ಇಡೀ ಇಲಾಖೆ ಮರ್ಯಾದೆ ಹಾಳಾಗಿದೆ. ನನ್ನ ವೃತ್ತಿ ಜೀವನದಲ್ಲಿ ಯಾವಾಗಲೂ ಇಷ್ಟು ಬೇಜಾರಾಗಿರಲಿಲ್ಲ. ನಾನು ನಿಮ್ಮಿಂದ ತಲೆತಗ್ಗಿಸುವಂತಾಯ್ತು ಎಂದು ಅಲೋಕ್ ಕುಮಾರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇನ್ಮುಂದೆ ಆದ್ರೂ ನೆಟ್ಟಗಿರಿ, ಜೈಲಿನ ನಿಯಮಾವಳಿ ಪಾಲಿಸಬೇಕು ಎಂದು ಡಿಜಿಪಿ ಎಚ್ಚರಿಕೆ ನೀಡಿದ್ದಾರೆ. ಈ ವೇಳೆ ಪ್ರಜ್ವಲ್ ರೇವಣ್ಣ, ಇಲ್ಲ ಸಾರ್, ನಾನೇನು ಮಾಡಿಲ್ಲ ಸಾರ್ ಎಂದು ವಾದಿಸಿದ್ದಾರೆ. ನನಗೆಲ್ಲಾ ಗೊತ್ತಿದೆ, ಸಾಕು ನಿಲ್ಸಿ ನಿಮ್ ಡ್ರಾಮಾ. ನಿಮಗೆ ಮೊಬೈಲ್ ಕೊಟ್ಟವರಾರು.., ಹೇಳದಿದ್ರೆ ಬೇರೆ ಆಕ್ಷನ್ ತಗೋಬೇಕಾಗುತ್ತೆ. ಮುಂದೆ ಈ ರೀತಿ ಆದ್ರೆ, ಮೊಬೈಲ್ ಕಂಡುಬಂದ್ರೆ ಸುಮ್ಮನಿರೊಲ್ಲ ಅಲೋಕ್ ಕುಮಾರ್ ಎಚ್ಚರಿಕೆ ನೀಡಿದ್ದಾರೆ ಎನ್ನಲಾಗಿದೆ.

# ಕರ್ತವ್ಯನಿರತ ಪೊಲೀಸ್ ಮೇಲೆ ಹಲ್ಲೆ: ಜೆಡಿಎಸ್ ನಾಯಕನ ಸೆರೆ

**ಬೆಂಗಳೂರು, ಆ.17:** ಬೆಂಗಳೂರಿನ ಬನ್ನೇರುಘಟ್ಟ ರಸ್ತೆಯ ಜನನಿಬಿಡ ಗೊಟ್ಟಿಗೆರೆ ಜಂಕ್ಷನ್ ನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಸಂಚಾರ ಪೊಲೀಸ್ ಸಿಬ್ಬಂದಿಯ ಮೇಲೆ ಹಲ್ಲೆಗೈದ ಆರೋಪದಲ್ಲಿ ಜೆಡಿಎಸ್ ಮುಖಂಡರೊಬ್ಬರನ್ನು ಹುಳಿಮಾವು ಪೊಲೀಸರು ಬಂಧಿಸಿದ್ದಾರೆ.ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಮಂಜುನಾಥ ಸಿ. ಯಾನೆ ಗೊಟ್ಟಿಗೆರೆ ಮಂಜಣ್ಣ ಬಂಧಿತ ಆರೋಪಿ ಎಂದು ತಿಳಿದು ಬಂದಿದೆ. ಗೊಟ್ಟಿಗೆರೆ ಪ್ರದೇಶದಲ್ಲಿ ಸಂಚಾರ ನಿಯಂತ್ರಿಸುತ್ತಿದ್ದ ಸಂಚಾರ ಪೊಲೀಸ್ ಕಾನ್ ಸ್ಟೇಬಲ್ ಅರುಣ್ ಮಂಜಪ್ಪ ಬಡಗೌಡ್ರ ಮೇಲೆ ಹಲ್ಲೆ ನಡೆಸಿದ ಆರೋಪ ಅವರ ಮೇಲೆ ಕೇಳಿ ಬಂದಿದೆ.ಗೊಟ್ಟಿಗೆರೆ ಜಂಕ್ಷನ್ ನಲ್ಲಿ ರವಿವಾರ ಅಪರಾಹ್ನ ಸಂಚಾರ ಪೊಲೀಸ್ ಕಾನ್‌ಸ್ಟೇಬಲ್ ಅರುಣ್ ಮಂಜಪ್ಪ ಅವರು ಮಂಜಣ್ಣರ ವಾಹನವನ್ನು ನಿಲ್ಲಿಸುವಂತೆ ಸೂಚಿಸಿದ್ದಾರೆ. ಇದರಿಂದ ಕೋಪಗೊಂಡ ಮಂಜಣ್ಣ ತನಗೆ ಅವಾಚ್ಯವಾಗಿ ನಿಂದಿಸಿ, ಹಲ್ಲೆ ಮಾಡಿದ್ದಾರೆ ಎಂದು ಅರುಣ್ ಮಂಜಪ್ಪ ಪೊಲೀಸ್ ದೂರು ನೀಡಿದ್ದರು. ಈ ಬಗ್ಗೆ ಪ್ರಕರಣ ದಾಖಲಾಗಿತ್ತು.ಈ ಬಗ್ಗೆ ತನಿಖೆ ನಡೆಸಿದ ಹುಳಿಮಾವು ಠಾಣೆಯ ಪೊಲೀಸರು ಆರೋಪಿ ಮಂಜಣ್ಣನನ್ನು ಸೋಮವಾರ ಬೆಳಗ್ಗೆ ಬಂಧಿಸಿದ್ದಾರೆ.



## ಪೊಲೀಸರ ಮೇಲೆ ಹಲ್ಲೆ ಸಹಿಸುವುದಿಲ್ಲ ಪ್ರಿಯಾಂಕ್ ಖರ್ಗೆ ಎಚ್ಚರಿಕೆ

ಪೊಲೀಸರ ಮೇಲೆ ಹಲ್ಲೆ ನಡೆಸುವುದನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಗೃಹ ಸಚಿವರು ಎಚ್ಚರಿಕೆ ನೀಡಿದರು. ಮೊನ್ನೆ ಮಂಡ್ಯದಲ್ಲಿ ಹಾಗೂ ಬೆಂಗಳೂರಿನಲ್ಲಿ ನಡೆದ ಘಟನೆ ರಾಜಕಾರಣಿಗಳು ತಲೆತಗ್ಗಿಸುವಂತಿದೆ. ಅಧಿಕಾರದ ಮದದಲ್ಲಿ ಜನರಿಗೆ ರಕ್ಷಣೆ ನೀಡುವ ಹಾಗೂ ಅನುಕೂಲ ಮಾಡಿಕೊಡುವ ಪೊಲೀಸರ ಮೇಲೆ ಹಲ್ಲೆ ನಡೆಸುವುದು, ದೌರ್ಜನ್ಯ ಮಾಡುವುದು ಸ್ವೀಕಾರಾರ್ಹವಲ್ಲ ಎಂದು ಹೇಳಿದರು. ಪೊಲೀಸರಿಗೆ ಕಪಾಳಮೋಕ್ಷ ಮಾಡುವುದು, ಕೊರಳಪಟ್ಟಿ ಹಿಡಿಯುವುದು ಸೇರಿದಂತೆ ಯಾವುದೇ ರೀತಿಯ ದೌರ್ಜನ್ಯ ನಡೆಸಿದರೂ ಅದನ್ನು ಕಾಂಗ್ರೆಸ್ ಸರ್ಕಾರ ಸಹಿಸುವುದಿಲ್ಲ. ಕಾಂಗ್ರೆಸ್, ಬಿಜೆಪಿ ಅಥವಾ ಜೆಡಿಎಸ್ ಯಾವುದೇ ಪಕ್ಷದವರಾಗಿದ್ದರೂ ಕಾನೂನಿನ ಮುಂದೆ ಯಾರಿಗೂ ರಿಯಾಯಿತಿ ಇಲ್ಲ ಎಂದು ಸ್ಪಷ್ಟಪಡಿಸಿದರು. ಬೆಂಗಳೂರಿನಲ್ಲಿ ನಿನ್ನೆ ನಡೆದ ಘಟನೆಗೆ ಸಂಬಂಧಿಸಿದಂತೆ ಎಫ್‌ಐಆರ್ ದಾಖಲಿಸಲಾಗಿದ್ದು, ನೋಟಿಸ್ ಜಾರಿ ಮಾಡಲಾಗಿದೆ. ಎಫ್‌ಐಆರ್ ಪ್ರತಿಯನ್ನು ಸಂಬಂಧಪಟ್ಟವರಿಗೆ ಕಳುಹಿಸಿಕೊಡಲಾಗುವುದು ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದರು. ಸರ್ಕಾರಿ ಅಧಿಕಾರಿಗಳ ಮೇಲೆ ಹಲ್ಲೆ ಅಥವಾ ದೌರ್ಜನ್ಯ ನಡೆಸುವುದನ್ನೂ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಅದರಲ್ಲೂ ಕ್ಷುಲ್ಲಕ ಕಾರಣಗಳಿಗೆ ಇಂತಹ ಘಟನೆಗಳು ನಡೆದರೆ ಸರ್ಕಾರ ಸುಮ್ಮನಿರುವುದಿಲ್ಲ. ಲೋಪಗಳಿದ್ದರೆ ದೂರು ನೀಡಲಿ, ಕ್ರಮ ಕೈಗೊಳ್ಳುತ್ತೇವೆ ಎಂದು ಎಚ್ಚರಿಕೆ ಕೊಟ್ಟರು.

# ಬಿಡದಿ ಟೌನ್‌ಶಿಪ್ ವಿರೋಧಿಸಿ ಇಂದಿನಿಂದ ಫ್ರೀಡಂಪಾರ್ಕ್‌ನಲ್ಲಿ ಜೆಡಿಎಸ್ ಧರಣಿ

ಬೆಂಗಳೂರು, ಆ.17– ಬಿಡದಿ ಉಪನಗರ ಯೋಜನೆ ವಿರೋಧಿಸಿ ರೈತರು ನಡೆಸುತ್ತಿರುವ ಹೋರಾಟಕ್ಕೆ ಬೆಂಬಲ ನೀಡಿರುವ ಜೆಡಿಎಸ್ ಮಂಗಳವಾರ ನಗರದ ಸ್ವಾತಂತ್ರ್ಯ ಉದ್ಯಾನವನದಲ್ಲಿ ಬೆಳಗ್ಗೆ 10 ಘಂಟೆಗೆ ಪ್ರತಿಭಟನಾ ಸಮಾವೇಶ ನಡೆಸಲಿದೆ.

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಯುವಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಸೇರಿದಂತೆ ಪಕ್ಷದ ನಾಯಕರು, ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗವಹಿಸಿ ಬಿಡದಿ ಉಪನಗರ ಯೋಜನೆಯನ್ನು ಕೈಬಿಡುವಂತೆ ರಾಜ್ಯಸರ್ಕಾರವನ್ನು ಆಗ್ರಹಿಸಲಿದ್ದಾರೆ.

ಬಿಡದಿ ಉಪನಗರ ಯೋಜನೆಯನ್ನು ವಿರೋಧಿಸಿ ರೈತರು ನಡೆಸುತ್ತಿರುವ ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿ ಈಗಾಗಲೇ 2 ಬಾರಿ ಜೆಡಿಎಸ್ ಪಾದಯಾತ್ರೆ ನಡೆಸಿದೆ.ಬೈರಮಂಗಲದಿಂದ ಸ್ವಾತಂತ್ರ್ಯ ಉದ್ಯಾನವನದವರೆಗೆ ಹಮಿಕೊಂಡಿದ್ದ ಪಾದಯಾತ್ರೆಯನ್ನು ಮಾರ್ಗಮಧ್ಯೆ ತಡೆಯಲಾಗಿತ್ತು. ಹೀಗಾಗಿ ಆ.11 ರಂದು ನಡೆಯಬೇಕಿದ್ದ ಈ ಪ್ರತಿಭಟನಾ ಸಮಾವೇಶವನ್ನು ಮಂಗಳವಾರಕ್ಕೆ ಮುಂದೂಡಲಾಗಿತ್ತು.

ಆ.9 ಮತ್ತು 10 ರಂದು ಜೆಡಿಎಸ್ ಯುವಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ಪಾದಯಾತ್ರೆ ಕೈಗೊಳ್ಳಲಾಗಿತ್ತು. ಪಕ್ಷದ ಕಾರ್ಯಕರ್ತರು ಸೇರಿದಂತೆ ಅಪಾರ ಸಂಖ್ಯೆಯ ರೈತರು ಬೆಂಬಲ ನೀಡಿದ್ದರು.ನಾಳೆ ನಡೆಯುವ ಪ್ರತಿಭಟನೆಯಲ್ಲಿ ಉಪನಗರ ಯೋಜನಾ ವ್ಯಾಪ್ತಿಯ ರೈತರು ಭಾಗವಹಿಸುವ ನಿರೀಕ್ಷೆ ಇದೆ.

# ಸೆಪ್ಟೆಂಬರ್ ಅಂತ್ಯದೊಳಗೆ ಇ–ಕೆವೈಸಿ ಅಪ್‌ಡೇಟ್ ಮಾಡಿ: ಪಡಿತರ ಚೀಟಿದಾರರಿಗೆ ಸರ್ಕಾರದ ಸೂಚನೆ

**ಬೆಂಗಳೂರು, ಆ.17:** ರಾಜ್ಯದಲ್ಲಿ ರೇಷನ್ ಕಾರ್ಡ್ ಹೊಂದಿರುವ ಪ್ರತಿಯೊಬ್ಬ ಫಲಾನುಭವಿಯೂ ಈಗ ಕಡ್ಡಾಯವಾಗಿ ಇ–ಕೆವೈಸಿ ಅಪ್‌ಡೇಟ್ ಮಾಡಿಕೊಳ್ಳುವ ಅಗತ್ಯವಿದೆ. ಸರ್ಕಾರವು ಈಗಾಗಲೇ ಈ ಕುರಿತು ಸ್ಪಷ್ಟ ಸೂಚನೆ ನೀಡಿದ್ದು, ಬಿಪಿಎಲ್ ಎಪಿಎಲ್ ಮತ್ತು ಅಂತ್ಯೋದಯ ಕಾರ್ಡ್ ಹೊಂದಿರುವ ಪ್ರತಿಯೊಬ್ಬರೂ ಸೆಪ್ಟೆಂಬರ್ ಅಂತ್ಯದೊಳಗೆ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಾಗಿದೆ.ಒಂದು ವೇಳೆ ಈ ಅವಧಿಯೊಳಗೆ ಇ–ಕೆವೈಸಿ ಮಾಡಿಸದಿದ್ದರೆ, ರೇಷನ್ ಕಾರ್ಡ್ ರದ್ದಾಗುವ ಸಾಧ್ಯತೆಯಿದೆ ಮತ್ತು ಇದರಿಂದ ಸಿಗಬೇಕಾದ ಸರ್ಕಾರಿ ಸವಲತ್ತುಗಳು ಸ್ಥಗಿತಗೊಳ್ಳಬಹುದು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಎಚ್ಚರಿಕೆನೀಡಿದೆ.

ಕಳೆದ ಐದು ವರ್ಷಗಳಿಂದ ಇ–ಕೆವೈಸಿ ಅಪ್‌ಡೇಟ್ ಆಗದಿರುವ ಕಾರಣ, ಕೇಂದ್ರ ಸರ್ಕಾರದ ನಿರ್ದೇಶನದ ಮೇರೆಗೆ ರಾಜ್ಯ ಸರ್ಕಾರವು ಈ ಪರಿಷ್ಕರಣಾ ಕಾರ್ಯವನ್ನು ಕೈಗೊಂಡಿದೆ. ಈ ಪ್ರಕ್ರಿಯೆಯ ಮುಖ್ಯ ಉದ್ದೇಶವೆಂದರೆ, ಕುಟುಂಬದಲ್ಲಿನ ಸದಸ್ಯರು ಜೀವಂತವಾಗಿದ್ದಾರೆಯೇ, ಮೃತಪಟ್ಟಿದ್ದಾರೆಯೇ ಅಥವಾ ಬೇರೆ ಕಡೆಗೆ ಸ್ಥಳಾಂತರಗೊಂಡಿದ್ದಾರೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವುದು. ಈ ಮೂಲಕ ಅರ್ಹ ಫಲಾನುಭವಿಗಳಿಗೆ ಮಾತ್ರ ಸರ್ಕಾರದ ಸೌಲಭ್ಯಗಳು ತಲುಪುವಂತೆ ಮಾಡುವುದು ಸರ್ಕಾರದ ಗುರಿಯಾಗಿದೆ.

ಎಪಿಎಲ್ ಕಾರ್ಡ್‌ದಾರರಿಗೆ ರೇಷನ್ ಸಿಗದಿದ್ದರೂ



ಸಹ, ಗೃಹಲಕ್ಷ್ಮಿ ಸೇರಿದಂತೆ ವಿವಿಧ ಸರ್ಕಾರಿ ಯೋಜನೆಗಳ ಲಾಭ ಪಡೆಯಲು ಈ ಕಾರ್ಡ್ ಅನಿವಾರ್ಯವಾಗಿರುವುದರಿಂದ, ಅವರಿಗೂ ಈ ಇ–ಕೆವೈಸಿ ಪ್ರಕ್ರಿಯೆಯು ಅತ್ಯಂತ ಮುಖ್ಯವಾಗಿದೆ.ಇ–ಕೆವೈಸಿ ಮಾಡಿಸುವುದು ಬಹಳ ಸರಳವಾಗಿದ್ದು, ಕುಟುಂಬದ ಪ್ರತಿಯೊಬ್ಬ ಸದಸ್ಯರೂ ತಮ್ಮ ಆಧಾರ್ ಕಾರ್ಡ್ನೊಂದಿಗೆ ಹತ್ತಿರದ ನ್ಯಾಯಬೆಲೆ ಅಂಗಡಿಗೆ ತೆರಳಬೇಕು. ಅಲ್ಲಿರುವ ಇ–ಪಿಓಎಸ್ ಯಂತ್ರದ ಮೂಲಕ ತಮ್ಮ ಬೆರಳಚ್ಚು ನೀಡುವ ಮೂಲಕ ಪ್ರಕ್ರಿಯೆಯನ್ನು ಪೂರ್ಣಗೊಳಿಸಬಹುದು. ಕುಟುಂಬದ ಮುಖ್ಯಸ್ಥರು ಮಾತ್ರವಲ್ಲದೆ, ಪ್ರತಿಯೊಬ್ಬ ಸದಸ್ಯರೂ ವೈಯಕ್ತಿಕವಾಗಿ ಹಾಜರಿದ್ದು ಬೆರಳಚ್ಚು ನೀಡುವುದು ಸೂಕ್ತವಾಗಿದೆ. ಪಡಿತರ ಚೀಟಿಗೆ ಇ–ಕೆವೈಸಿ ಆಗಿದೆಯೇ ಅಥವಾ ಇಲ್ಲವೇ ಎಂಬುದನ್ನು ತಿಳಿಯಲು ನಿಮ್ಮ ಹತ್ತಿರದ ನ್ಯಾಯಬೆಲೆ ಅಂಗಡಿಯವರನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದು.

# ಡಾ.ಮನಮೋಹನ್ ಸಿಂಗ್ ವಿವಿಯಲ್ಲಿ ಪಠ್ಯಕ್ರಮ ಪರಿಚಯ ವಿಶಿಷ್ಟ ಕಾರ್ಯಾಗಾರ

**ಬೆಂಗಳೂರು,ಆ.17:** ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದ (ಆಡಿ. ಒಖಃಅಗ) ವಾಣಿಜ್ಯ ಅಧ್ಯಯನ ಮತ್ತು ಸಂಶೋಧನಾ ವಿಭಾಗ ಹಾಗೂ ಬೆಂಗಳೂರು ನಗರ ವಿಶ್ವವಿದ್ಯಾಲಯದ ವಾಣಿಜ್ಯ ಮತ್ತು ನಿರ್ವಹಣಾ ಶಿಕ್ಷಕರ ಮಂಡಳಿ (ಃಅಗಖಿಅಅಒ) ಇವರ ಸಹಯೋಗದಲ್ಲಿ ಐದನೇ ಸೆಮಿಸ್ಟರ್ ಬಿ.ಕಾಂ. ಮತ್ತು ಬಿಬಿಎ (ಏವಿಯೇಷನ್ ಮ್ಯಾನೇಜ್ಮೆಂಟ್) ಕಾರ್ಯಕ್ರಮಗಳ ಒಂದು ದಿನದ ಪಠ್ಯಕ್ರಮ ಪರಿಚಯ ಕಾರ್ಯಾಗಾರ ಹಾಗೂ ನಿವೃತ್ತ ವಾಣಿಜ್ಯ ಮತ್ತು ನಿರ್ವಹಣಾ ಬೋಧಕ ಸಿಬ್ಬಂದಿಯವರ ಸನ್ಮಾನ ಸಮಾರಂಭವನ್ನು ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಬೆಂಗಳೂರು ಶಿಕ್ಷಕರ ಕ್ಷೇತ್ರದ ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಶ್ರೀ ಪಿ. ಪುಟ್ಟಣ್ಣ ಅವರು ಉದ್ಘಾಟಿಸಿದರು. ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತಿನ ಉಪಾಧ್ಯಕ್ಷ ಪ್ರೊ.ಎಸ್. ಆರ್. ನಿರಂಜನ್ ಅವರು ಪ್ರಧಾನ ಭಾಷಣ ಮಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ. ರಮೇಶ್ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಡಾ. ರಮೇಶ್ ಕುಡೇನಹಟ್ಟಿ, ಕುಲಸಚಿವರು (ಮೌಲ್ಯಮಾಪನ), ಡಾ. ವಿಜಯಲಕ್ಷ್ಮಿ ಎಂ. ವಿ., ಹಣಕಾಸು ಅಧಿಕಾರಿ, ಹಾಗೂ ವಾಣಿಜ್ಯ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಪ್ರೊ. ಜಲಜಾ ಕೆ. ಆರ್. ಅವರು ಉಪಸ್ಥಿತರಿದ್ದರು.

BCUTCCMನ ಪದಾಧಿಕಾರಿಗಳಾದ ಡಾ. ಎಚ್. ಭವಾನಿ, ಅಧ್ಯಕ್ಷರು; ಡಾ. ಸಿ. ನಾಗರಾಜ, ಪ್ರಧಾನ ಕಾರ್ಯದರ್ಶಿ; ಹಾಗೂ ಪ್ರೊ. ಎಚ್. ಆರ್. ಪದ್ಮನಾಭ, ಖಜಾಂಚಿ ಸೇರಿದಂತೆ ವಿಶ್ವವಿದ್ಯಾಲಯದ ಅಧೀನದ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರು, ವಿಭಾಗ ಮುಖ್ಯಸ್ಥರು ಹಾಗೂ ವಾಣಿಜ್ಯ ಮತ್ತು ನಿರ್ವಹಣಾ ವಿಭಾಗದ ಬೋಧಕ ಸಿಬ್ಬಂದಿ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

**ಪಠ್ಯಕ್ರಮ ಪರಿಷ್ಕರಣೆ ಮತ್ತು ಉದ್ಯೋಗಾವಕಾಶಗಳಿಗೆ ಒತ್ತು:** ಉದ್ಘಾಟನಾ ಭಾಷಣದಲ್ಲಿ ಶ್ರೀ ಪಿ. ಪುಟ್ಟಣ್ಣ ಅವರು ಕಾಲಾನುಗುಣವಾಗಿ ಪಠ್ಯಕ್ರಮ ಮತ್ತು ಪಠ್ಯಸೂಚಿಗಳನ್ನು ನವೀಕರಿಸಿ ಪರಿಷ್ಕರಿಸುವ ಅಗತ್ಯವನ್ನು ಒತ್ತಿ ಹೇಳಿದರು. ವಿದ್ಯಾರ್ಥಿಗಳಿಗೆ ಪ್ರಸ್ತುತ ಅಗತ್ಯವಿರುವ ಜ್ಞಾನ ಮತ್ತು ಕೌಶಲ್ಯಗಳನ್ನು ಒದಗಿಸುವ ಮೂಲಕ ಅವರ ಉದ್ಯೋಗಾವಕಾಶಗಳನ್ನು ಹೆಚ್ಚಿಸುವ ನಿಟ್ಟಿನಲ್ಲಿ ಪಠ್ಯಕ್ರಮ ರೂಪಿಸಬೇಕು ಎಂದು ಅವರು ತಿಳಿಸಿದರು.

ಕುಲಪತಿ ಪ್ರೊ.ಬಿ.ರಮೇಶ್, ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸುವುದು ಹಾಗೂ ಶೈಕ್ಷಣಿಕ ಗುಣಮಟ್ಟವನ್ನು ಸುಧಾರಿಸುವಲ್ಲಿ ವಾಣಿಜ್ಯ ಮತ್ತು ನಿರ್ವಹಣಾ ಬೋಧಕರ ಕೊಡುಗೆಯನ್ನು ಶ್ಲಾಘಿಸಿದರು. ಕೈಗಾರಿಕೆ ಮತ್ತು ಶೈಕ್ಷಣಿಕ ಕ್ಷೇತ್ರಗಳ ನಡುವಿನ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದ್ದು, ಉದ್ಯಮ ಮತ್ತು ಶಿಕ್ಷಣ ಕ್ಷೇತ್ರಗಳ ನಡುವಿನ



ಅಂತರವನ್ನು ಕಡಿಮೆ ಮಾಡಬೇಕು ಎಂದು ಅವರು ಹೇಳಿದರು. ಪ್ರಧಾನ ಭಾಷಣ ಮಾಡಿದ ಪ್ರೊ.ಎಸ್.ಆರ್. ನಿರಂಜನ್ ಅವರು ಸಮಾಜ ಮತ್ತು ಕೈಗಾರಿಕಾ ಕ್ಷೇತ್ರಗಳ ಬದಲಾಗುತ್ತಿರುವ ಅಗತ್ಯಗಳನ್ನು ಪೂರೈಸುವಲ್ಲಿ ಉನ್ನತ ಶಿಕ್ಷಣದ ಮಹತ್ವವನ್ನು ವಿವರಿಸಿದರು. ಉನ್ನತ ಶಿಕ್ಷಣ ಹಾಗೂ ಪಠ್ಯಕ್ರಮ ಅಭಿವೃದ್ಧಿಯಲ್ಲಿ ಬಹುಶಿಸ್ತೀಯ ವಿಧಾನ ಅಳವಡಿಸಿಕೊಳ್ಳುವ ಅಗತ್ಯವನ್ನೂ ಅವರು ಪ್ರತಿಪಾದಿಸಿದರು.

**ನಿವೃತ್ತ ಬೋಧಕರಿಗೆ ಸನ್ಮಾನ:** ಕಾರ್ಯಕ್ರಮದ ಅಂಗವಾಗಿ ವಾಣಿಜ್ಯ ಮತ್ತು ನಿರ್ವಹಣಾ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ 30ಕ್ಕೂ ಹೆಚ್ಚು ಪ್ರಾಧ್ಯಾಪಕರು ಹಾಗೂ ಬೋಧಕ ಸಿಬ್ಬಂದಿಯನ್ನು ಅವರ ದೀರ್ಘಕಾಲದ ಸಮರ್ಪಿತ ಸೇವೆ ಮತ್ತು ಉನ್ನತ ಶಿಕ್ಷಣಕ್ಕೆ ನೀಡಿದ ಅಮೂಲ್ಯ ಕೊಡುಗೆಗಾಗಿ ಸನ್ಮಾನಿಸಲಾಯಿತು.

ನಿವೃತ್ತ ಬೋಧಕರ ಸೇವೆಯನ್ನು ಸ್ಮರಿಸಿ ಗೌರವಿಸುವ ಮೂಲಕ ಅವರ ಅನುಭವ ಮತ್ತು ಕೊಡುಗೆಗಳನ್ನು ಮುಂದಿನ ಪೀಳಿಗೆಯ ಬೋಧಕರಿಗೆ ಪ್ರೇರಣೆಯಾಗಿ ಗುರುತಿಸಲಾಯಿತು.

**ಸುಮಾರು 500 ಬೋಧಕರ ಭಾಗವಹಿಸುವಿಕೆ:** ಕಾರ್ಯಾಗಾರದಲ್ಲಿ ಮನಮೋಹನ್ ಸಿಂಗ್ ವಿವಿಗೆ ಸಂಯೋಜಿತವಾಗಿರುವ ವಿವಿಧ ಕಾಲೇಜುಗಳ ಸುಮಾರು 500 ವಾಣಿಜ್ಯ ಮತ್ತು ನಿರ್ವಹಣಾ ವಿಭಾಗದ ಬೋಧಕ ಸಿಬ್ಬಂದಿ ಉತ್ಸಾಹದಿಂದ ಭಾಗವಹಿಸಿದರು. ಕಾರ್ಯಾಗಾರವು ಪಠ್ಯಕ್ರಮ ಪರಿಚಯ, ಶೈಕ್ಷಣಿಕ ಚರ್ಚೆ, ಪಠ್ಯಕ್ರಮ ಅಭಿವೃದ್ಧಿ, ಬೋಧನಾ ಅನುಭವಗಳ ವಿನಿಮಯ ಹಾಗೂ ವಾಣಿಜ್ಯ ಮತ್ತು ನಿರ್ವಹಣಾ ಶಿಕ್ಷಣ ಕ್ಷೇತ್ರದ ಬೋಧಕರ ನಡುವಿನ ವೃತ್ತಿಪರ ಸಹಯೋಗವನ್ನು ಬಲಪಡಿಸಲು ಮಹತ್ವದ ವೇದಿಕೆಯಾಯಿತು.

ಐದನೇ ಸೆಮಿಸ್ಟರ್ ಬಿ.ಕಾಂ. ಮತ್ತು ಬಿಬಿಎ ಪಠ್ಯಕ್ರಮದ ಅನುಷ್ಠಾನ, ಶೈಕ್ಷಣಿಕ ಅಗತ್ಯಗಳು ಹಾಗೂ ಬೋಧನಾ ವಿಧಾನಗಳ ಕುರಿತು ಬೋಧಕರಿಗೆ ಸ್ಪಷ್ಟವಾದ ಮಾರ್ಗದರ್ಶನ ದೊರೆಯಿತು.

ಪ್ರೊ.ಜಲಜಾ ಕೆ.ಆರ್.ಅವರು ಸ್ವಾಗತ ಭಾಷಣ ಮಾಡಿದರು. ಪ್ರಧಾನ ಕಾರ್ಯದರ್ಶಿ ಡಾ.ಸಿ.ನಾಗರಾಜ ಅವರು ವಂದನಾರ್ಪಣೆ ಸಲ್ಲಿಸಿದರು.ಕಾರ್ಯಕ್ರಮವು ಗುಣಮಟ್ಟದ ಉನ್ನತ ಶಿಕ್ಷಣ, ನಿರಂತರ ಪಠ್ಯಕ್ರಮ ಅಭಿವೃದ್ಧಿ, ಬೋಧಕರ ಸಹಯೋಗ ಹಾಗೂ ಕೈಗಾರಿಕೆ ಶೈಕ್ಷಣಿಕ ಕ್ಷೇತ್ರಗಳ ನಡುವಿನ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವ ವಿಶ್ವವಿದ್ಯಾಲಯದ ಬದ್ಧತೆಯನ್ನು ಪುನರುಚ್ಚರಿಸುವ ಮೂಲಕ ಯಶಸ್ವಿಯಾಗಿ ಸಂಪನ್ನಗೊಂಡಿತು.

# ಮಹಿಳಾ ಮಕ್ಕಳ ಅಭಿವೃದ್ಧಿ ಸಮನ್ವಯ ಸಮಿತಿ ಸಭೆ

**ಜಾಗೃತಿ ಕಾರ್ಯಕ್ರಮಗಳು ಸಭಾಂಗಣಕ್ಕೆ ಸೀಮಿತವಾಗಬಾರದು: ಡಿಸಿ ಇಕ್ರಮ್ ಶರೀಫ್**



ಕಲಬುರಗಿಯ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಮ್ಮಿಕೊಂಡಿರುವ ವಿವಿಧ ಯೋಜನೆಗಳ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಮಾತನಾಡಿದರು.

**ಕಲಬುರಗಿ, ಆ. 17:** ಮಹಿಳಾ ಮತ್ತು ಮಕ್ಕಳ ಕಲ್ಯಾಣ ಯೋಜನೆಗಳು ಕೇವಲ ಕಾಗದಕ್ಕಷ್ಟೇ ಸೀಮಿತವಾಗದೆ ಫಲಾನುಭವಿಗಳಿಗೆ ನೇರವಾಗಿ ತಲುಪಬೇಕು. ಜಾಗೃತಿ ಕಾರ್ಯಕ್ರಮಗಳು ಸಭಾಂಗಣಕ್ಕೆ ಸೀಮಿತವಾಗದೇ, ಇನ್ನುಮುಂದೆ ಆಯೋಜಿಸುವ ಪ್ರತಿಯೊಂದು ಜಾಗೃತಿ ಕಾರ್ಯಕ್ರಮದಲ್ಲೂ ಕನಿಷ್ಠ 100ಕ್ಕೂ ಹೆಚ್ಚು ಜನರು ಕಡ್ಡಾಯವಾಗಿ ಭಾಗವಹಿಸುವಂತೆ ಅಧಿಕಾರಿಗಳು ವೈಯಕ್ತಿಕ ಜವಾಬ್ದಾರಿ ವಹಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಇಕ್ರಂ ಶರೀಫ್ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಮ್ಮಿಕೊಂಡಿರುವ ವಿವಿಧ ಯೋಜನೆಗಳ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮ ಪಂಚಾಯಿತಿ ಹಾಗೂ ಶಾಲಾ-ಕಾಲೇಜು ಮಟ್ಟದಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ನಡೆಯುವ ಜಾಗೃತಿ ಕಾರ್ಯಕ್ರಮಗಳಲ್ಲಿ ಕೇವಲ ಕಾಗದದ ವರದಿ ಪ್ರದರ್ಶಿಸುವುದನ್ನು ತಕ್ಷಣವೇ ನಿಲ್ಲಿಸಬೇಕು. ಪ್ರತಿಯೊಂದು ಸಭೆಯಲ್ಲೂ ಕನಿಷ್ಠ 100 ಕ್ಕೂ ಹೆಚ್ಚು ಸಾರ್ವಜನಿಕರು, ವಿದ್ಯಾರ್ಥಿಗಳು, ಪೋಷಕರು ಹಾಗೂ ಸ್ಥಳೀಯ ಜನಪ್ರತಿನಿಧಿಗಳು ಕಡ್ಡಾಯವಾಗಿ ಭಾಗವಹಿಸುವುದನ್ನು ಸಂಬಂಧಪಟ್ಟ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿಯ ಇಲಾಖೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಖಾತರಿಪಡಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕ್ಷೇತ್ರ ಮಟ್ಟಕ್ಕೆ ತೆರಳಿ ಕೆಲಸ ಮಾಡುವ ಅಧಿಕಾರಿಗಳು ತಮ್ಮ ಕಾರ್ಯಕ್ರಮಗಳ ನೈಜತೆಯನ್ನು ಸಾಬೀತುಪಡಿಸಲು ಜಿಪಿಎಸ್ ಆಧಾರಿತ ಸಮಯ ಮತ್ತು ದಿನಾಂಕ ನಮೂದಾಗಿರುವ ಛಾಯಾಚಿತ್ರಗಳೊಂದಿಗೆ ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸಬೇಕು. ಜತೆಗೆ ಅಧಿಕಾರಿಗಳ ದೈನಂದಿನ ಹಾಜರಾತಿಯನ್ನು 'ಕರ್ತವ್ಯ' ಆಪ್‌ನಲ್ಲಿ ನಿಖರವಾಗಿ ನಮೂದಿಸುವುದನ್ನು ಕಡ್ಡಾಯಗೊಳಿಸಲಾಗಿದೆ ಎಂದರು.

ಜಿಲ್ಲೆಯ ಸಾಂತ್ವನ ಕೇಂದ್ರಗಳು ಹಾಗೂ 'ಶಕ್ತಿ ಸದನ'ಗಳ (ಸ್ವಾಧಾರ್ ಗೃಹ) ನಿರ್ವಹಣೆಯಲ್ಲಿ ಸಂಪೂರ್ಣ ಪಾರದರ್ಶಕತೆ ಕಾಯ್ದುಕೊಳ್ಳಲು ಮುಂದಿನ 15 ದಿನಗಳ ಒಳಗಾಗಿ ಆಧಾರ್ ಆಧಾರಿತ ಬಯೋಮೆಟ್ರಿಕ್ ಹಾಜರಾತಿ ಮತ್ತು ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಬೇಕು. ಸಿಸಿಟಿವಿ ಲೈವ್‌ಸ್ಟ್ರೀಮಿಂಗ್ ಮೇಲಾಧಿಕಾರಿಗಳ ಮೊಬೈಲ್‌ಗೆ ಸಂಪರ್ಕ ಕಲ್ಪಿಸದ ಕೇಂದ್ರಗಳಿಗೆ ಅನುದಾನ ತಡೆಹಿಡಿಯಲಾಗುವುದು ಎಂದು ಎಚ್ಚರಿಸಿದರು.

ಇದೇ ವೇಳೆ, ಪ್ರಸ್ತುತ ಖಾಸಗಿ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ 'ಸ್ವಧಾರ ಗೃಹ'ವನ್ನು ತಕ್ಷಣವೇ ಸೂಕ್ತ ಸ್ವಂತ ಕಟ್ಟಡಕ್ಕೆ ಸ್ಥಳಾಂತರಿಸಲು ಆದೇಶಿಸಲಾಯಿತು. ಇದರಿಂದ ಸರ್ಕಾರಿ ಹಣ ಉಳಿತಾಯವಾಗುವುದರ ಜತೆಗೆ ನಿವಾಸಿಗಳಿಗೆ ಉತ್ತಮ ಹಾಗೂ ಸುರಕ್ಷಿತ ವಾತಾವರಣ ಸಿಗಲಿದೆ.

ಇದಲ್ಲದೆ, ಜಿಲ್ಲೆಯ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಶಾರೀರಿಕ ಬೆಳವಣಿಗೆ ಮತ್ತು ಅಪೌಷ್ಟಿಕತೆ ಅಳೆಯಲು ಬಳಸುವ ತೂಕದ ಯಂತ್ರಗಳು, 'ಸ್ಟೇಡಿಯೋಮೀಟರ್' ಹಾಗೂ 'ಇನ್ಫಾಂಟೋಮೀಟರ್' ಉಪಕರಣಗಳ ಸ್ಥಿತಿಗತಿಯನ್ನು ತಕ್ಷಣವೇ ಪರಿಶೀಲಿಸಿ, ಕೆಟ್ಟುಹೋಗಿರುವ ಉಪಕರಣಗಳ ಪಟ್ಟಿ ತಯಾರಿಸಿ ಹೊಸ ಉಪಕರಣಗಳ ಖರೀದಿಗಾಗಿ ವರದಿ ಸಲ್ಲಿಸಲು ಸೂಚಿಸಿದರು.

ಮಹಿಳಾ ಸಹಾಯವಾಣಿ 181 ಹಾಗೂ ಮಕ್ಕಳ ಸಹಾಯವಾಣಿ 1098 ಕುರಿತು ಗ್ರಾಮೀಣ ಭಾಗದಲ್ಲಿ ವ್ಯಾಪಕ ಅರಿವು ಮೂಡಿಸಲು ತಿಳಿಸಿದ ಅವರು, ಗರ್ಭಿಣಿ ಮತ್ತು ಬಾಣಂತಿ ಮಹಿಳೆಯರ ಪೌಷ್ಠಿಕಾಂಶ ಹಾಗೂ ಆರೋಗ್ಯ ಸುಧಾರಣೆಗಾಗಿ ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಮಾತೃವಂದನಾ ಯೋಜನೆ ಜಾರಿಯಲ್ಲಿದೆ. ಈ ಯೋಜನೆಯಡಿ ಮೊದಲ ಮಗುವಿಗೆ 2 ಕಂತುಗಳಲ್ಲಿ ಒಟ್ಟು 5,000 ಹಣ ಎರಡನೇ ಮಗು ಹೆಣ್ಣಾಗಿದ್ದರೆ ಒಂದೇ ಕಂತಿನಲ್ಲಿ 6,000 ಧನಸಹಾಯ ನೀಡಲಾಗುತ್ತದೆ. ಈ ಹಣ ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆಯಾಗುತ್ತದೆ. ಸರ್ಕಾರಿ ನೌಕರು ಹಾಗೂ ಸಾರ್ವಜನಿಕ ಉದ್ದಿಮೆಗಳ ನೌಕರರನ್ನು ಹೊರತು ಪಡಿಸಿ, ಉಳಿದ ಅರ್ಹ ಮಹಿಳೆಯರು ಇದರ ಪ್ರಯೋಜನ ಪಡೆಯಬಹುದು. ಎಂದು ತಿಳಿಸಿದರು.

ಸಭೆಯಲ್ಲಿ ಸೇಡಂ ಉಪವಿಭಾಗದ ಸಹಾಯಕ ಆಯುಕ್ತರಾದ ಪ್ರಭು ರೆಡ್ಡಿ ಹೆಚ್ಚುವರಿ ಎಸ್.ಪಿ. ಮಹೇಶ್ ಮೇಘಣ್ಣನವರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳಾದ ಡಿಯುಡಿಸಿ ಯೋಜನಾ ನಿರ್ದೇಶಕ ಮುನ್ನವ್ವರ ದೌಲಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಕುಮಾರ್ ರಾಠೋಡ, ಡಿಎಚ್ಒ ಡಾ. ಶರಣಬಸಪ್ಪ ಕ್ಯಾತ್ನಾಳ, ಜಿಲ್ಲಾ ಸರ್ಜನ್ ರೂಆಯ್ಯ ಅಸ್ನರಬಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಶರಣಪ್ಪ,ಜಿಲ್ಲಾ ಹಾಗೂ ತಾಲೂಕು ಮಟ್ಟದ ಸಿಡಿಪಿಒಗಳು,ಎನ್‌ಜಿಒ ಹಾಗೂ ವಿವಿಧ ಯೋಜನೆಗಳ ಮಿಷನ್ ಕೋಆರ್ಡಿನೇಟರ್‌ಗಳು ಉಪಸ್ಥಿತರಿದ್ದರು.



ಕರ್ನಾಟಕ ರಾಜ್ಯ ಸಚಿವ ಸಂಪುಟದಿಂದ ಸಚಿವ ಬಿ. ನಾಗೇಂದ್ರ ಅವರನ್ನು ತಕ್ಷಣ ವಜಾಗೊಳಿಸಬೇಕೆಂದು ಒತ್ತಾಯಿಸಿ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಸೋಮವಾರ ಕಲಬುರಗಿಯಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

# 36 ಕೆರೆ ತುಂಬಿಸುವ ಯೋಜನೆ ವಿಳಂಬ ಶಾಸಕ ಪ್ರಭು ಚವಾಣ್ ಎಚ್ಚರಿಕೆ



**ಬೀದರ, ಆ. 17:** ತಮ್ಮ ಔರಾದ ಕ್ಷೇತ್ರದ ರೈತರ ಬಹುದಿನಗಳ ಬೇಡಿಕೆಯಾಗಿರುವ 560 ಕೋಟಿ ವೆಚ್ಚದ 36 ಕೆರೆ ತುಂಬಿಸುವ ಯೋಜನೆ ಮಂಜೂರಾಗಿ 3 ವರ್ಷ ಕಳೆದರೂ ಅನುಷ್ಠಾನಗೊಳ್ಳುತ್ತಿಲ್ಲ. ಸರ್ಕಾರ ಇನ್ನೂ ವಿಳಂಬ ಮಾಡಿದರೆ ಕ್ಷೇತ್ರದ ಜನರೊಂದಿಗೆ ಹೋರಾಟ ನಡೆಸುವುದು ಅನಿವಾರ್ಯವಾಗುತ್ತದೆ ಎಂದು ಮಾಜಿ ಸಚಿವರೂ ಆಗಿರುವ ಶಾಸಕ ಪ್ರಭು ಚವಾಣ್ ಎಚ್ಚರಿಕೆ ನೀಡಿದರು.

ಔರಾದ ತಾಲ್ಲೂಕು ಆಡಳಿತದ ವತಿಯಿಂದ ತಾಲ್ಲೂಕು ಕ್ರೀಡಾಂಗಣದಲ್ಲಿ ನಡೆದ ಸ್ವಾತಂತ್ರ್ಯ ದಿನಾಚರಣೆ ಸಮಾರಂಭದಲ್ಲಿ ಮಾತನಾಡಿದ ಅವರು, ಕಾರಂಜಾ ಜಲಾಶಯದಿಂದ ಔರಾದ್‌ಗೆ ಕುಡಿಯುವ ನೀರು ಪೂರೈಸುವ 84 ಕೋಟಿ ಯೋಜನೆ ಹಾಗೂ 36 ಕೆರೆ ತುಂಬಿಸುವ ಯೋಜನೆಗಳು ಮಂಜೂರಾಗಿ ಹಲವು ವರ್ಷಗಳಾದರೂ ಕಾಮಗಾರಿಗಳು ನಿರೀಕ್ಷಿತ ವೇಗದಲ್ಲಿ ಸಾಗುತ್ತಿಲ್ಲ. ಸರ್ಕಾರ ತಕ್ಷಣ ಗಮನಹರಿಸಿ ಯೋಜನೆಗಳನ್ನು ಅನುಷ್ಠಾನಗೊಳಿಸಬೇಕು ಎಂದು ಒತ್ತಾಯಿಸಿದರು.

ಬೀದರ್–ನಾಂದೇಡ್ ವಾಯಾ ಔರಾದ್ ನಡುವಿನ ನೂತನ ರೈಲು ಮಾರ್ಗಕ್ಕೆ ಕೇಂದ್ರ ಸರ್ಕಾರ ಮಂಜೂರಾತಿ ನೀಡಿದೆ. ಮಹಾರಾಷ್ಟ್ರ ಸರ್ಕಾರ ತನ್ನ ಪಾಲಿನ ಅನುದಾನ ನೀಡಿದೆ. ಆದರೆ, ಕರ್ನಾಟಕ ಸರ್ಕಾರದ ವಿಳಂಬ ಧೋರಣೆಯಿಂದ ಯೋಜನೆ ನನೆಗುದಿಗೆ ಬಿದ್ದಿದೆ. ಮಳೆ ಕೊರತೆಯಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಪರಿಹಾರಕ್ಕಾಗಿ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಗಿದೆ ಎಂದರು.

ವಾಣಿಜ್ಯ ತೆರಿಗೆ ಅಧಿಕಾರಿ ಖಾಜಾ ಖಲಿಲುಲ್ಲ ಉಪನ್ಯಾಸ ನೀಡಿದರು. ತಹಶೀಲ್ದಾರ್ ಮಹೇಶ ಪಾಟೀಲ ಧ್ವಜಾರೋಹಣ ನೆರವೇರಿಸಿದರು.

ತಾ.ಪಂ ಇಒ ಕಿರಣ ಪಾಟೀಲ, ಸಿಪಿಐ ರಘುವೀರಸಿಂಗ ಠಾಕೂರ, ಪುರಸಭೆ ಮುಖ್ಯಾಧಿಕಾರಿ ರವಿ ಸುಕುಮಾರ, ಲೋಕೋಪಯೋಗಿ ಎಇಇ ಅಧಿಕಾರಿ ಪ್ರೇಮಸಾಗರ ಮತ್ತಿತರರಿದ್ದರು. ಪೊಲೀಸ್ ಇಲಾಖೆ, ಗೃಹರಕ್ಷಕ ದಳ ಹಾಗೂ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಆಕರ್ಷಕ ಪಥಸಂಚಲನ ನಡೆಸಿಕೊಟ್ಟರು.

# ಕುಣಿಗಲ್ ಮೂಲದ ಟೆಕ್ಕಿ ತಂದೆ ಮಗ ಅನುಮಾನಾಸ್ಪದ ಸಾವು

**ತುಮಕೂರು, ಆ.17:** ಬೆಂಗಳೂರಿನ ಚಿಕ್ಕಬಾಣಾವರ ಗುಟ್ಟೆ ಬಸವೇಶ್ವರ ಲೇಔಟ್‌ನಲ್ಲಿ ತಂದೆ–ಮಗ ಅನುಮಾನಾಸ್ಪದವಾಗಿ ಸಾವನ್ನಪ್ಪಿರುವ ಘಟನೆ ರಾತ್ರಿ ನಡೆದಿದೆ. ಮೃತರನ್ನು ಅಭಿನಂದನ್ (38) ಹಾಗೂ ಅವರ ಐದು ವರ್ಷದ ಪುತ್ರ ಯದುವೀರ್ ಎಂದು ಗುರುತಿಸಲಾಗಿದೆ. ಇವರು ಮೂಲತಃ ಕುಣಿಗಲ್‌ನವರು. ಎಲೆಕ್ಟ್ರಾನಿಕ್ ಸಿಟಿಯ ಎಂಎನ್‌ಸಿ ಕಂಪನಿಯೊಂದರಲ್ಲಿ ಅಭಿನಂದನ್ ಕೆಲಸ ಮಾಡುತ್ತಿದ್ದರು.

ಅವರ ಪತ್ನಿ ಹರಿಣಿ ಗೃಹಿಣಿ. ರಾತ್ರಿ ಪತಿ–ಪತ್ನಿ ನಡುವೆ ಗಲಾಟೆ ನಡೆದಿದ್ದು ಬಳಿಕಾ ಬೇರೆ ಬೇರೆ ಕೊಠಡಿಯಲ್ಲಿ ಮಲಗಿದ್ದರು ಎನ್ನಲಾಗಿದೆ.ಆದರೆ ಬೆಳಗ್ಗೆ ಎದ್ದು ನೋಡಿದಾಗ ಅಭಿನಂದನ್ ಹಾಗೂ ಪುತ್ರ ಯದುವೀರ್ ಮಲಗಿದ್ದ ಸ್ಥಿತಿಯಲ್ಲೇ ಮೃತಪಟ್ಟಿರುವುದು ಕಂಡು ಬಂದಿದೆ. ಅಭಿನಂದನ್ ಮುಖದಲ್ಲಿ ಗಾಯದ ಗುರುತುಗಳು ಕಂಡು ಬಂದಿದ್ದು, ಕಿವಿಯಿಂದ ರಕ್ತ ಸೋರಿದ್ದ ಸ್ಥಿತಿಯಲ್ಲಿ ಮೃತದೇಹ ಪತ್ತೆಯಾಗಿದೆ.ಘಟನೆಗೆ ಸಂಬಂಧಿಸಿದಂತೆ ಅಭಿನಂದನ್ ಪತ್ನಿ ಹರಿಣಿಯನ್ನು ಚಿಕ್ಕಬಾಣಾವರ ಪೊಲೀಸರು ವಶಕ್ಕೆ ಪಡೆದು ತೀವ್ರ ವಿಚಾರಣೆ ನಡೆಸುತ್ತಿದ್ದಾರೆ.

ತನಿಖೆ ವೇಳೆ ಪೊಲೀಸರಿಗೆ ಹಲವಾರು ಅನುಮಾನ ಮೂಡಿದ್ದು, ಸದ್ಯ ಪತಿ–ಪತ್ನಿಯ ಇಬ್ಬರ ಮೊಬೈಲ್‌ಗಳನ್ನು ವಶಕ್ಕೆ ಪಡೆದಿದ್ದು, ಕರೆಗಳ ಮಾಹಿತಿ ಹಾಗೂ ಇತರೆ ವಿವರಗಳ ಪರಿಶೀಲನೆ ನಡೆಸುತ್ತಿದ್ದಾರೆ.

ಗಲಾಟೆಯ ಬಳಿಕ ನಡೆದ ಘಟನೆ ಹಿನ್ನೆಲೆಯಲ್ಲಿ ಪತ್ನಿಯಿಂದಲೇ ಕೃತ್ಯ ನಡೆದಿರಬಹುದೇ ಎಂಬ ಅನುಮಾನವೂ ಸಹ ಪೊಲೀಸರಿಗೆ ಮೂಡಿ ಬಂದಿದೆ. ತಂದೆ–ಮಗನ ಸಾವು ಹೇಗೆ ಸಂಭವಿಸಿತು ಎಂಬುದರ ಬಗ್ಗೆ ಪೊಲೀಸರು ತನಿಖೆ ಮುಂದುವರಿಸಿದ್ದು, ತನಿಖೆಯ ಬಳಿಕ ಹಾಗೂ ಮರಣೋತ್ತರ ಪರೀಕ್ಷೆ ನಂತರ ಸಾವಿಗೆ ನಿಖರ ಕಾರಣ ತಿಳಿದುಬರಲಿದೆ.

ಸುದ್ದಿ ತಿಳಿದು ಚಿಕ್ಕಬಾಣಾವರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಪ್ರಕರಣ ದಾಖಲಿಸಿಕೊಂಡು ಶವಗಳನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಅರಣ್ಯ ಇಲಾಖೆ ಕಚೇರಿಗೆ ಮುಂದುವರಿದ ಪೊಲೀಸ್ ಬಂದೋಬಸ್ತ್

ಹನೂರು, ಆ.17: ಮೂವರ ಶೂಟೌಟ್ ಪ್ರಕರಣದಿಂದ ಕುಟುಂಬಸ್ಥರು ಹಾಗೂ ಪ್ರತಿಭಟನಾ ಕಾರರು ರೊಚ್ಚಿಗೆದ್ದಿರುವ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಹನೂರಿನ ಅರಣ್ಯ ಇಲಾಖೆ ಕಚೇರಿ ಗೇಟ್ ಬಂದ್ ಮಾಡಲಾಗಿದ್ದು, ಬಿಗಿ ಪೊಲೀಸ್ ಬಂದೋಬಸ್ತ್ ಒದಗಿಸಲಾಗಿದೆ.

ಕಾವೇರಿ ವನ್ಯಜೀವಿ ವಿಭಾಗದ ತೊಮಿಯಾರ್ ಪಾಳ್ಯ ಅರಣ್ಯ ಪ್ರದೇಶದಲ್ಲಿ ಅರಣ್ಯ ಇಲಾಖೆ ಗುಂಡೇಟಿಗೆ ಮೂವರು ಬೇಟೆಗಾರರು ಬಲಿಯಾದ ಸುದ್ದಿ ತಿಳಿಯುತ್ತಿದ್ದಂತೆ ರೊಚ್ಚಿಗೆದ್ದ ಕುಟುಂಬಸ್ಥರು, ಸಂಬಂಧಿಕರು ಹಾಗೂ ಗ್ರಾಮಸ್ಥರು ಶನಿವಾರ ತಾಲೂಕಿನ ಶಾಗ್ಯ ಹಾಗೂ ಕಳ್ಳಿದೊಡ್ಡಿ ಅರಣ್ಯ ಇಲಾಖೆ ವಸತಿ ಗೃಹದಲ್ಲಿ ಬೈಕ್ ಹಾಗೂ ಪೀಠೋಪಕರಣಗಳನ್ನು ಧ್ವಂಸ ಗೊಳಿಸಿದ್ದರು. ಈ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ವಸತಿ ಗೃಹವನ್ನು ಒಳಗೊಂಡಿರುವ ವಲಯ ಅರಣ್ಯಾಧಿಕಾರಿ ಕಚೇರಿಗೆ ಅಗತ್ಯ ಮುಂಜಾಗ್ರತಾ ಕ್ರಮವಾಗಿ ಹೆಚ್ಚಿನ ಬಿಗಿ ಪೊಲೀಸ್ ಬಂದೋಬಸ್ತ್ ಒದಗಿಸಿದ್ದಾರೆ.

# ವಂದೇ ಮಾತರಂ ವಿವಾದ: ಕಾಂಗ್ರೆಸ್ ಕಚೇರಿಗೆ ಮುತ್ತಿಗೆಗೆ ಮುಂದಾದ ಬಿಜೆಪಿ ಕಾರ್ಯಕರ್ತರು, ಪೊಲೀಸರಿಂದ ತಡೆ



**ಬೀದರ್, ಆ. 17:** 'ವಂದೇ ಮಾತರಂ' ಗೀತೆಗೆ ಕಾಂಗ್ರೆಸ್ ಅಧಿನಾಯಕಿ ಸೋಜನಿಯಾ ಗಾಂಧಿ ಅಗೌರವ ತೋರಿಸಿದ್ದಾರೆಂದು ಆರೋಪಿಸಿ ಬಿಜೆಪಿ ಯುವ ಮೋರ್ಚಾ ವತಿಯಿಂದ ಬೀದರ್‌ನ ಕಾಂಗ್ರೆಸ್ ಪಕ್ಷದ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಕಚೇರಿಗೆ ಮುತ್ತಿಗೆ ಹಾಕಲು ಕಾರ್ಯಕರ್ತರು ಮುಂದಾದಾಗ, ಪೊಲೀಸರು ಮುನ್ನೆಚ್ಚರಿಕಾ ಕ್ರಮವಾಗಿ ಬಿಗಿ ಬಂದೋಬಸ್ತ್ ಕೈಗೊಂಡು ಮುತ್ತಿಗೆ ಯತ್ನವನ್ನು ತಡೆದರು.

ಪ್ರತಿಭಟನೆಯಲ್ಲಿ ಬಿಜೆಪಿ ನಗರ ಅಧ್ಯಕ್ಷ ಹಾಗೂ ನಗರಸಭೆ ಸದಸ್ಯ ಶಶಿ ಹೊಸಳ್ಳಿ ಮಾತನಾಡಿ, 'ವಂದೇ ಮಾತರಂ' ಕೇವಲ ಗೀತೆಯಲ್ಲ. ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಕೋಟ್ಯಂತರ ಭಾರತೀಯರಲ್ಲಿ ರಾಷ್ಟ್ರಭಕ್ತಿ ಮತ್ತು ದೇಶಾಭಿಮಾನದ ಭಾವನೆ ಮೂಡಿಸಿದ ಮಹತ್ವದ ರಾಷ್ಟ್ರೀಯ ಗೀತೆಯಾಗಿದೆ. ಇಂತಹ ಗೀತೆಗೆ ಅಗೌರವ ತೋರುವ ಯಾವುದೇ ಪ್ರಯತ್ನವನ್ನು ಸಹಿಸಲು ಸಾಧ್ಯವಿಲ್ಲ ಎಂದು ಹೇಳಿದರು.

'ವಂದೇ ಮಾತರಂ' ಹಾಡುತ್ತಿದ್ದ ವೇಳೆ ಕೈ ಸನ್ನೆ ಮೂಲಕ ಗೀತೆಯನ್ನು ನಿಲ್ಲಿಸುವಂತೆ ಸೂಚಿಸಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಈ ಕುರಿತು ಕಾಂಗ್ರೆಸ್ ಪಕ್ಷದ ಹಿರಿಯ ನಾಯಕರು ಸ್ಪಷ್ಟನೆ ನೀಡಬೇಕು ಎಂದು ಶಶಿ ಹೊಸಳ್ಳಿ ಆಗ್ರಹಿಸಿದರು. ಪ್ರತಿಭಟನೆಯ ವೇಳೆ ಕಾರ್ಯಕರ್ತರು ಕಾಂಗ್ರೆಸ್ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಸ್ಥಳದಲ್ಲಿ ಪೊಲೀಸರು ಬಿಗಿ ಬಂದೋಬಸ್ತ್ ಕಲ್ಪಿಸಿದ್ದರು. ಪ್ರತಿಭಟನೆಯಲ್ಲಿ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿಗಳಾದ ವೀರೇಶ ಸ್ವಾಮಿ, ರಮೇಶ ಕಲ್ಲೂರ, ದೀಪಕ ಗಾದಗಿ, ರಾಜೇಂದ್ರ ಪೂಜಾರಿ, ಗಣೇಶ್ ಭೋಸ್ಲೆ, ರೋಷನ್ ವರ್ಮಾ, ನಿತಿನ್ ನವಲಕಲೆ, ನರೇಶ್ ಗೌಳಿ, ಸಚಿನ ಮಠಪತಿ, ಶರಣು ಸಿದ್ದವೀರ, ವೀರೇಂದ್ರ ಪಾಟೀಲ, ಬಾಲಾಜಿ ಪಾಟೀಲ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಪತ್ನಿಯ ಶೀಲ ಶಂಕಿಸಿ ಜಿಲೆಟಿನ್‌ನಿಂದ ಮನೆ ಸ್ಫೋಟ

## ಪತಿಯ ಆತ್ಮಾಹುತಿ ಬಾಂಬ್, ಪತ್ನಿ-ಮಕ್ಕಳು ಸಹಿತ ಎಲ್ಲರೂ ಛಿದ್ರ ಛಿದ್ರ..!

**ಕಲಬುರಗಿ, ಆ. 17:** ಛಿದ್ರ ಛಿದ್ರಗೊಂಡಿರುವ ಮನೆ. ಮನೆಯೊಳಗಿನ ವಸ್ತುಗಳು ಮಾತ್ರವಲ್ಲ, ದೇಹಗಳೂ ಸಹ ಛಿದ್ರ ಛಿದ್ರ. ಮುಂಡದಿಂದ ಬೇರ್ಪಟ್ಟು ಛಿದ್ರಗೊಂಡು ಬಿದ್ದಿರುವ ರುಂಡ. ಈ ಭಯಾನಕ ಸ್ಫೋಟದ ದೃಶ್ಯಗಳು ಕಂಡು ಬಂದಿದ್ದು ಜಿಲ್ಲೆಯ ಆಳಂದ ತಾಲೂಕಿನ ಮಟಕಿ ತಾಂಡಾದಲ್ಲಿ.

ಇಲ್ಲಿ ಸ್ಫೋಟ ಸಂಭವಿಸಿದ್ದು ಆಕಸ್ಮಿಕವಾಗಿ ಅಲ್ಲ. ಕುಟುಂಬದ ಯಜಮಾನನೇ ಇಲ್ಲಿ ಆತ್ಮಾಹುತಿ ಬಾಂಬರ್. ಅಕ್ಷರಶಃ ಭಯೋತ್ಪಾದನಾ ಕೃತ್ಯಕ್ಕೆ ಹೋಲಿಸುವ ಭಯಾನಕ ಕೃತ್ಯ ಮಟಕಿ ತಾಂಡಾದಲ್ಲಿ ನಡೆದಿದೆ.

ಹೆಂಡತಿಯ ಮೇಲಿನ ಸಂಶಯ, ಹಗೆತನದಿಂದ ಗಂಡನೇ ತನ್ನ ಮೈಗೆ ಜಿಲೆಟಿನ್ ಸ್ಫೋಟಕ ಕಟ್ಟಿಕೊಂಡು ಹೆಂಡತಿ, ಮಗ, ಮಗಳು ಹಾಗೂ ಅಣ್ಣನ ಹೆಂಡತಿ ಇರುವ ಕೋಣೆಯೊಳಗೆ ಹೋಗಿ ತನ್ನನ್ನು ತಾನೇ ಸ್ಫೋಟಿಸಿಕೊಂಡಿದ್ದಾನೆ. ಪರಿಣಾಮ ತಾನೂ ಸಾವಿಗೀಡಾಗಿ ತನ್ನ 16 ವರ್ಷದ ಮಗಳನ್ನೂ ಬಲಿ ಪಡೆದಿದ್ದಾನೆ. ಅಷ್ಟೇ ಅಲ್ಲ ಘಟನೆಯಲ್ಲಿ ಆತನ ಹೆಂಡತಿ, ಮಗ, ಅಣ್ಣನ ಹೆಂಡತಿ ಸಹಿತ ನಾಲ್ವರು ತೀವ್ರವಾಗಿ ಗಾಯಗೊಂಡಿದ್ದು ಸಾವು ಬದುಕಿನ ನಡುವೆ ಹೋರಾಡುತ್ತಿದ್ದಾರೆ.

**ಹೆಂಡತಿ ಜೊತೆ ಮಕ್ಕಳ ಮೇಲೆಯೂ ದ್ವೇಷ:** ಮಟಕಿ ತಾಂಡಾ ನಿವಾಸಿ 50 ವರ್ಷದ ಸೇವಾಲಾಲ್ ಎಂಬಾತನೇ ಈ ಭೀಕರ ಕೃತ್ಯ ಎಸಗಿದ ಆರೋಪಿ. ಜಾರ್ಖಂಡ್ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಬಾವಿ ತೋಡುವ ಬ್ಲಾಸ್ಟಿಂಗ್ ಕೆಲಸ ಮಾಡುತ್ತಿದ್ದ



ಶೇವಾಲಾಲ್, ತನ್ನ ಪತ್ನಿ ಸವಿತಾಳ ಶೀಲದ ಮೇಲೆ ಸದಾ ಅನುಮಾನ ವ್ಯಕ್ತಪಡಿಸುತ್ತಿದ್ದ. ಪತ್ನಿ ಹಾಗೂ ಮಕ್ಕಳು ಪುಣೆಯಲ್ಲಿದ್ದರು. ವಾರದ ಹಿಂದಷ್ಟೇ ಪತ್ನಿ ಮಟಕಿ ತಾಂಡಾಗೆ ಬಂದಿದ್ದ ವಿಚಾರ ತಿಳಿದು ಸೇವಾಲಾಲ್ ಕೂಡ ನಿನ್ನೆಯಷ್ಟೇ ಊರಿಗೆ ಬಂದಿದ್ದ. ನಿನ್ನೆ ಹೆಂಡತಿಯೊಂದಿಗೆ ಜಗಳ ಮಾಡಿದ್ದ. ಮಕ್ಕಳೂ ಸಹ ತಾಯಿಗೆ ಬೆಂಬಲಿಸಿದ ಕಾರಣ ಎಲ್ಲರನ್ನೂ ಒಂದೇ ಬಾರಿಗೆ ಬಲಿ ಪಡೆಯುವ ದುರುದ್ದೇಶದಿಂದ ಈ ಭಯಾನಕ ಪ್ಲಾನ್ ಮಾಡಿಕೊಂಡಿದ್ದಾನೆ.

ಅದರಂತೆ ಬೆಳಗ್ಗೆ 9 ಗಂಟೆಗೆ ಮನೆಗೆ ಎಂಟ್ರಿ ಕೊಟ್ಟ ಸೇವಾಲಾಲ್, ಮೈತುಂಬಾ ಜಿಲೆಟಿನ್ ಕಡ್ಡಿಗಳನ್ನು ಕಟ್ಟಿಕೊಂಡು ಮನೆಯಲ್ಲಿದ್ದ ಪತ್ನಿ, ಮಕ್ಕಳು ಹಾಗೂ ಅಣ್ಣನ ಹೆಂಡತಿಯ ಎದುರೇ ತನ್ನನ್ನು ತಾನೇ ಸ್ಫೋಟಿಸಿಕೊಂಡಿದ್ದಾನೆ. ಸ್ಫೋಟದ ತೀವ್ರತೆಗೆ ಶೇವಾಲಾಲ್ ದೇಹವೇ ಛಿದ್ರ ಛಿದ್ರಗೊಂಡಿದ್ದು, ಆತನ ಮುಖ ಹಾಗೂ ಕತ್ತಿನ ಭಾಗ ದೇಹದಿಂದ ಬೇರ್ಪಟ್ಟು ಬಿದ್ದಿದೆ.

ಘಟನೆಯಲ್ಲಿ ಸೇವಾಲಾಲ್ ಹಾಗೂ ಆತನ 16 ವರ್ಷದ ಮಗಳು ವೀರಾಬಾಯಿ ಸ್ಥಳದಲ್ಲೇ ಉಸಿರು ಚೆಲ್ಲಿದ್ದಾರೆ. ಇನ್ನು ಶೇವಾಲಾಲ್ ಪತ್ನಿ ಸವಿತಾ, ಮಗ ಹಾಗೂ ಅಣ್ಣನ ಹೆಂಡತಿ ಸೇರಿದಂತೆ ನಾಲ್ವರಿಗೆ ತೀವ್ರ ಗಾಯಗಳಾಗಿದ್ದು, ಕಲಬುರಗಿಯ ಟ್ರಾಮಾ ಕೇರನಲ್ಲಿ ಸಾವು ಬದುಕಿನ ನಡುವೆ ಹೋರಾಡುತ್ತಿದ್ದಾರೆ. ಸ್ಫೋಟದ ರಭಸಕ್ಕೆ ಇಡೀ ಮನೆಯೇ ಧರೆಗುರುಳಿದೆ. ವಿಷಯ ತಿಳಿಯುತ್ತಿದ್ದಂತೆ ಕಲಬುರಗಿ ಎಸ್ಪಿ ಅಡ್ಡೂರು ಶ್ರೀನಿವಾಸಲು ಸ್ಥಳಕ್ಕೆ ಭೇಟಿ ನೋಡಿ ಪರಿಶೀಲನೆ ನಡೆಸಿದ್ದಾರೆ.

ಒಟ್ಟಿನಲ್ಲಿ ಅನುಮಾನ ಎನ್ನುವ ಪಿಡುಗು ಒಂದು ಇಡೀ ಕುಟುಂಬವನ್ನೇ ನಾಶಮಾಡಿದ್ದು, ಊರನ್ನೇ ಆತಂಕಕ್ಕೆ ತಳ್ಳಿದೆ. ಘಟನೆಗೆ ಸಂಬಂಧಿಸಿದಂತೆ ಆಳಂದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

# ಶ್ರಾವಣ ಸೋಮವಾರ: ಶರಣರ ಸನ್ನಿಧಿಗೆ ಹರಿದು ಬಂದ ಭಕ್ತಸಾಗರ



**ಕಲಬುರಗಿ, ಆ. 17:** ಬಹುತೇಕ ದೇವಸ್ಥಾನಗಳಲ್ಲಿ ಅಮಾವಾಸ್ಯೆ, ಜಾತ್ರೆ, ಹಬ್ಬ–ಹರಿದಿನಗಳಲ್ಲಿ ಭಕ್ತರಿಗೆ 'ಪ್ರಸಾದ' ಏರ್ಪಡಿಸಲಾಗುತ್ತದೆ. ಕೆಲವು ದೇವಸ್ಥಾನಗಳಲ್ಲಿ ನಿತ್ಯವೂ ದಾಸೋಹ ಸೇವೆ ಇರುತ್ತದೆ. ಆದರೆ, ಇವೆರಡನ್ನೂ ಮೀರಿದ 'ದಾಸೋಹಗುಣ' ಕಲಬುರಗಿಯ ಶರಣಬಸವೇಶ್ವರ ದೇವಸ್ಥಾನದಲ್ಲಿ ಅನಾವರಣಗೊಳ್ಳುತ್ತದೆ. ಅದಕ್ಕೆ ಶ್ರಾವಣ ಸೋಮವಾರ ವೇದಿಕೆ ಒದಗಿಸುತ್ತದೆ.

19ನೇ ಶತಮಾನದ ಆಕರ್ಷಕ ಕಪ್ಪುಗಲ್ಲಿನ ಈ ದೇವಸ್ಥಾನವು ಪ್ರತಿ ಶ್ರಾವಣದಲ್ಲಿ ಮುಂಗಾರು ಮಳೆ ಹನಿಗಳಿಗೂ, ಭಕ್ತಿಯ ಸಿಂಚನಕ್ಕೂ, ದಾಸೋಹಗುಣ ಅನಾವರಣಕ್ಕೂ ಒಟ್ಟೊಟ್ಟಿಗೇ ಸಾಕ್ಷಿಯಾಗುತ್ತದೆ. ಒಂದೆಡೆ ಶರಣಬಸವೇಶ್ವರ ದಾಸೋಹ ವರ್ಷವಿಡೀ ಸಾಗುತ್ತದೆ. ಮತ್ತೊಂದೆಡೆ ಶ್ರಾವಣ ಸೋಮವಾರಗಳಂದು ಭಕ್ತರ 'ದಾಸೋಹಗುಣ' ಅನಾವರಣಗೊಳ್ಳುತ್ತದೆ.

ಬದುಕಿನಲ್ಲಿ ಇಷ್ಟಾರ್ಥ ಸಿದ್ಧಿಗಾಗಿ ಹರಕೆ ಹೊತ್ತು ದೇವರ ಮೊರೆ ಹೋಗುವುದು ಸಹಜ. ಅದು ತೀರಿದರೆ ದೇವರಿಗೇ ವಿಶೇಷ ಪೂಜೆಯೋ, ಇಲ್ಲವೇ ಕಾಣಿಕೆಯೋ ಸಲ್ಲಿಸಿ ಹರಕೆ ತೀರಿಸುವುದೂ ಮಾಮೂಲು. ಆದರೆ, ಈ ಭಾಗದಲ್ಲಿ ಇಷ್ಟಾರ್ಥ ನೆರವೇರಿದರೆ ಅದನ್ನು ತೀರಿಸಲು ಜನರಿಗೆ ಭಕ್ಷ್ಯಗಳ ದಾಸೋಹ ಮಾಡಲಾಗುತ್ತದೆ. ಏಕೆಂದರೆ, ಶರಣಬಸವೇಶ್ವರರ ಸನ್ನಿಧಾನವು ಕಾಯಕ–ದಾಸೋಹ ಗುಣದೊಂದಿಗೆ ಶರಣರೇ 'ದೈವತ್ವ'ಕ್ಕೆ ಏರಿದ ನೆಲ. ಇಲ್ಲಿ ದಾಸೋಹವು 'ಸೇವಾ ಪರಿಕಲ್ಪನೆ'ಯಾಗಿ ಬೆಳೆದಿದೆ.

ಶ್ರೀಸಾಮಾನ್ಯರೂ ಬೆವರು ಸುರಿಸಿ ಮಾಡಿದ ಕಾಯಕದಿಂದ ಬಂದ ಹಣದಲ್ಲಿ ಕೈಲಾದಷ್ಟು ವೆಚ್ಚ ಮಾಡಿ ವಿವಿಧ ಬಗೆಯ ಭಕ್ಷ್ಯಗಳನ್ನು ಮನೆಗಳಲ್ಲಿ ಸಿದ್ಧಪಡಿಸಿಕೊಂಡು ಶರಣರ ಸನ್ನಿಧಿಗೆ ತರುತ್ತಾರೆ. ಅದನ್ನು ಶರಣಬಸವೇಶ್ವರರ ದೇವಸ್ಥಾನದ ಆವರಣದಲ್ಲಿ 'ಅಪ್ಪ'ನ ಭಕ್ತರಿಗೆ ಹಂಚುತ್ತಾರೆ. ಹರಕೆಯ ತೀರಿಸುವ ನೆಪದಲ್ಲಿ ಅನ್ನ ಹಂಚಿ ಖುಷಿ ಪಡುವ ಭಕ್ತಿ ಅವರದು.

ಅಪ್ಪನ ದಾಸೋಹ: ಶರಣಬಸವೇಶ್ವರರ ದೇವಸ್ಥಾನ ಭಕ್ತಿಯ ಕೇಂದ್ರ. ಬರುವ ಭಕ್ತರಿಗೆ 'ಪ್ರಸಾದ' ನೀಡುವ ತಾಣ ಶರಣಬಸವೇಶ್ವರರ ದಾಸೋಹ ಮಹಾಮನೆ. ಇಲ್ಲಿ ವರ್ಷವಿಡೀ ಬರುವ ಭಕ್ತರಿಗೆಲ್ಲ ಅನ್ನ ದಾಸೋಹ ಇರುತ್ತದೆ. ಈ ದಾಸೋಹಕ್ಕೆ ತಮ್ಮದೊಂದು ಹಿಡಿಕಾಳು ಇರಲಿ' ಎಂದು ಈ ಭಾಗದ ಅನ್ನದಾತರು ಪ್ರತಿ ವರ್ಷ ಮುಂಗಾರು, ಹಿಂಗಾರು ಬೆಳೆಗಳ ಒಂದಷ್ಟು ಪಾಲು ತಂದು 'ದಾಸೋಹ'ಕ್ಕೆ ಸಮರ್ಪಣೆ ಮಾಡುತ್ತಾರೆ. ಶ್ರಾವಣ ಸೋಮವಾರಗಳಂದು ಸಾರ್ವಜನಿಕರು ತರಹೇವಾರಿ ಭಕ್ಷ್ಯಗಳನ್ನು ಸಿದ್ಧಪಡಿಸಿ ದಾಸೋಹ ಮಾಡುವ ಪದ್ಧತಿಯೂ ಇಲ್ಲಿದೆ. ಇನ್ನು ಜಿಲ್ಲೆಯ ಸಗಟು ಅಂಗಡಿ ವ್ಯಾಪಾರಿಗಳು ಲಾರಿಗಟ್ಟಲೇ ಧಾನ್ಯಗಳನ್ನು ಶರಣಬಸವೇಶ್ವರರ ದಾಸೋಹಕ್ಕೆ ಒಪ್ಪಿಸಿ ಕೃತಾರ್ಥರಾಗುತ್ತಾರೆ.

ಶ್ರಾವಣ ಸೋಮವಾರದಂದು ನಸುಕಿನಲ್ಲೇ ಎದ್ದು ಶುಚಿರ್ಭೂತರಾಗಿ ಬ್ರಾಹ್ಮಿ ಮುಹೂರ್ತದ ಹೊತ್ತಿಗೆ ಭಕ್ತರು ಕಾಲ್ನಡಿಗೆಯ ಮೂಲಕ ದೇವಸ್ಥಾನ ತಲುಪಿರುತ್ತಾರೆ. ಹಣೆಯಲ್ಲಿ ವಿಭೂತಿ, ಕೈಯಲ್ಲಿ ಪುಷ್ಪ–ಬಿಲ್ವಪತ್ರೆ ಹಿಡಿದು 'ಮೊದಲ ಪೂಜೆ' ನೋಟ ಕಣ್ತುಂಬಿಕೊಳ್ಳಲು ಕಾದು ನಿಲ್ಲುತ್ತಾರೆ.

ಬೆಳಗಿನ ಪೂಜೆಯ ನಂತರ ಗರ್ಭಗುಡಿ ದ್ವಾರ ಪರದೆ ಸರಿಯುತ್ತಲೇ ಕಾದುನಿಂತ ಭಕ್ತಗಣ 'ಶರಣಬಸವೇಶ್ವರ ಮಹಾರಾಜಕೀ ಜೈ' ಎಂಬ ಘೋಷಣೆ ಮೊಳಗಿಸುತ್ತದೆ. ಒಂದೆಡೆ ಘಂಟಾನಾದ, ಮತ್ತೊಂದೆಡೆ ಭಕ್ತರ ಜೈಕಾರ ಬೆಳಗಿನ ಪರಿಸರಕ್ಕೆ ವಿಶೇಷ ಪ್ರಭೆ ತುಂಬುತ್ತದೆ.

# ಬೀದರ್ ಸಕ್ಕರೆ ಕಾರ್ಖಾನೆ ಆರಂಭಿಸಲು ಶಾಸಕ ಡಾ.ಸಿದ್ದು ಪಾಟೀಲ ಆಗ್ರಹ



ಬೀದರ ಜಿಲ್ಲೆಯ ಹುಮನಾಬಾದ ತಹಶೀಲ್ದಾರ್ ಕಚೇರಿಯಲ್ಲಿ ಸ್ವಾತಂತ್ರ್ಯೋತ್ಸವದ ಅಂಗವಾಗಿ ಶಾಸಕ ಸಿದ್ದು ಪಾಟೀಲ್ ಅವರು ಧ್ವಜಾರೋಹಣ ನೆರವೇರಿಸಿದರು.

**ಬೀದರ, ಆ.17:** ಜಿಲ್ಲೆಯ ರೈತರ ಹಾಗೂ ಕಾರ್ಮಿಕರ ಹಿತದೃಷ್ಟಿಯಿಂದ ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ ಈ ಬಾರಿಯ ಹಂಗಾಮಿನಲ್ಲಿ ಆರಂಭಿಸಬೇಕು. ಇಲ್ಲದಿದ್ದರೆ ರೈತರೊಂದಿಗೆ ಹೋರಾಟ ಮಾಡಬೇಕಾಗುತ್ತದೆ ಎಂದು ಶಾಸಕ ಡಾ.ಸಿದ್ದು ಪಾಟೀಲ್ ಎಚ್ಚರಿಕೆ ನೀಡಿದರು.

ಜಿಲ್ಲೆಯ ಹುಮನಾಬಾದ ತಹಶೀಲ್ ಕಚೇರಿಯಲ್ಲಿ ಆಯೋಜಿಸಿದ್ದ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸದ್ಯ ಕಾರ್ಖಾನೆ ಡಿಸಿಸಿ ಬ್ಯಾಂಕ್‌ನವರ ಅಧೀನದಲ್ಲಿದ್ದು, ಇದನ್ನು ಮಾರಾಟ ಇಲ್ಲವೆ ಹರಾಜು ಮಾಡಬೇಕೆಂಬ ಪ್ರಕ್ರಿಯೆ ನಡೆಯುತ್ತಿದೆ. ಈ ಬಗ್ಗೆ ರಾಜ್ಯ ಸರ್ಕಾರ ಮಧ್ಯ ಪ್ರವೇಶಿಸಿ ಕಾರ್ಖಾನೆ ಪುನಃಶ್ಚೇತನಕ್ಕೆ ಕಾಳಜಿ ವಹಿಸಬೇಕು ಎಂದರು.

ಪರಿಷತ್ ಸದಸ್ಯ ಡಾ.ಚಂದ್ರಶೇಖರ ಪಾಟೀಲ ಮಾತನಾಡಿ, ಕೆಲವು ಕಾರ್ಖಾನೆ ಬಂದ್ ಆಗಿದ್ದು, ಇನ್ನಿರುವ ಕೆಮಿಕಲ್ ಕಾರ್ಖಾನೆಗಳು ಸಹ ಬಂದ್ ಮಾಡುವುದಕ್ಕೆ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು. ಬಿಎಸ್‌ಎಸ್‌ಕೆ ಈ ವರ್ಷ ಆರಂಭಿಸಬೇಕು ಎಂದರು. ಹನುಮಂತ ಗೌಡಗಾಂವಕರ್ ವಿಶೇಷ ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಜಗದೀಶ್ ಚೌರ, ತಾ.ಪಂ ಇಓ ದೀಪಿಕಾ ನಾಯ್ಕರ್, ಪುರಸಭೆ ಮುಖ್ಯಾಧಿಕಾರಿ ವನಿತಾಬಾಯಿ, ಪಶು ಸಂಗೋಪನಾ ಇಲಾಖೆ ಸಹಾಯಕ ನಿರ್ದೇಶಕ ಡಾ.ಗೋವಿಂದ್, ಬಿಇಓ ವೆಂಕಟೇಶ್ ಗುಡಾಳ, ಕೃಷಿ ಸಹಾಯಕ ನಿರ್ದೇಶಕ ಶರಣ್‌ಕುಮಾರ್ ಸೇರಿದಂತೆ ಬೇರೆ ಬೇರೆ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಇತರರು ಇದ್ದರು.



ಕನ್ನಡ ಮಾಧ್ಯಮ ಶಾಲೆಗಳಿಗೆ ರಾಜ್ಯ ಸರ್ಕಾರದಿಂದ ನೆರವು ನೀಡುವಂತೆ ಒತ್ತಾಯಿಸಿ ಕರ್ನಾಟಕ ಅನುದಾನ ರಹಿತ ಶಾಲೆಗಳು ಮತ್ತು ಕಾಲೇಜುಗಳ ನೌಕರರು ಸೋಮವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ನಡೆಸಿದರು.

# ಆರೋಪ ಹೊತ್ತವರಿಗೆ ಸಚಿವ ಸ್ಥಾನ ಸರಿಯಲ್ಲ ಮಾಜಿ ಸಚಿವ ಶ್ರೀರಾಮುಲು ಖಂಡನೆ



**ಬಳ್ಳಾರಿ, ಆ.17:** ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣದ ಅಕ್ರಮಕ್ಕೆ ಸಂಬಂಧಿಸಿದ ಆರೋಪ ಎದುರಿಸುತ್ತಿರುವ ಬಿ.ನಾಗೇಂದ್ರ ಅವರಿಗೆ ಮತ್ತೆ ಸಚಿವ ಸ್ಥಾನ ನೀಡಿರುವುದನ್ನು ಬಿಜೆಪಿ ಮುಖಂಡ ಹಾಗೂ ಮಾಜಿ ಸಚಿವ ಬಿ.ಶ್ರೀರಾಮುಲು ತೀವ್ರವಾಗಿ ಖಂಡಿಸಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಾಗೇಂದ್ರ ಅವರ ವಿರುದ್ಧ 32 ಪ್ರಕರಣಗಳಿವೆ. ಲೋಕಾಯುಕ್ತ, ಜಾರಿ ನಿರ್ದೇಶನಾಲಯ (ಹಾಗೂ ಎಸ್‌ಐಟಿ ಸೇರಿದಂತೆ ವಿವಿಧ ತನಿಖಾ ಸಂಸ್ಥೆಗಳ ವಿಚಾರಣೆಗೆ ಒಳಪಟ್ಟಿರುವ ವ್ಯಕ್ತಿಗೆ ಸಚಿವ ಸ್ಥಾನ ನೀಡಿರುವುದು ಸರಿಯಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಪ್ರಕರಣಗಳು ಎಲ್ಲರ ಮೇಲೂ ಇರಬಹುದು. ಆದರೆ ನಾಗೇಂದ್ರ ಅವರ ವಿರುದ್ಧ 32 ಪ್ರಕರಣಗಳಿವೆ. ವಾರದಲ್ಲಿ ಐದು ದಿನ ಕೋರ್ಟ್‌ಗೆ ಹಾಜರಾಗುವಂತಹ ಪರಿಸ್ಥಿತಿ ಇರುವ ವ್ಯಕ್ತಿಗೆ ಸಚಿವ ಸ್ಥಾನ ನೀಡಿರುವುದು ಖಂಡನೀಯ" ಎಂದು ಶ್ರೀರಾಮುಲು ಹೇಳಿದರು.

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ ಹಣದ ಅಕ್ರಮ ನಡೆದಿದೆ ಎಂಬ ಆರೋಪವನ್ನು ಪ್ರಸ್ತಾಪಿಸಿದ ಅವರು, ಇಂತಹ ಗಂಭೀರ ಆರೋಪಗಳನ್ನು ಎದುರಿಸುತ್ತಿರುವ ನಾಗೇಂದ್ರ ಅವರಿಗೆ ಸಚಿವ ಸ್ಥಾನ ನೀಡಿರುವುದನ್ನು ಬಿಜೆಪಿ ತೀವ್ರವಾಗಿ ವಿರೋಧಿಸುತ್ತದೆ ಎಂದರು."ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವವರೆಗೂ ನಮ್ಮ ಹೋರಾಟ ಮುಂದುವರಿಯಲಿದೆ. ಭ್ರಷ್ಟಾಚಾರದ ಆರೋಪ ಎದುರಿಸುತ್ತಿರುವ ವ್ಯಕ್ತಿಗೆ ಸಚಿವ ಸ್ಥಾನ ನೀಡಿರುವ ಸರ್ಕಾರದ ಕ್ರಮವನ್ನು ನಾವು ಖಂಡಿಸುತ್ತೇವೆ" ಎಂದು ಶ್ರೀರಾಮುಲು ತಿಳಿಸಿದರು.ನಾಗೇಂದ್ರ ಅವರ ರಾಜಕೀಯ ಬೆಳವಣಿಗೆಗಳಿಂದ ಬಳ್ಳಾರಿ ಜಿಲ್ಲೆಯ ಸಂಪೂರ್ಣ ಅಭಿವೃದ್ಧಿ ಕುಂಠಿತವಾಗಿದೆ ಎಂದು ಆರೋಪಿಸಿದ ಶ್ರೀರಾಮುಲು, ಜಿಲ್ಲೆಯ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

# ನಾಗೇಂದ್ರ ಸಚಿವರಾಗಲಿ ಎಂಬ ಹರಕೆ 3,500 ಮೆಟ್ಟಿಲು ಏರಿದ ಅಭಿಮಾನಿ

**ಕೈಯಲ್ಲಿ ನಾಗೇಂದ್ರರ ಭಾವಚಿತ್ರ... ಕೊನೆ ಹಂತದಲ್ಲಿ ಮೊಳಕಾಲಿನಲ್ಲೇ ಮೆಟ್ಟಿಲೇರಿದ ಎಂ.ಜಿ. ಕನಕ**

**ತಿರುಪತಿ ತಿಮ್ಮಪ್ಪನ ಸನ್ನಿಧಿಯಲ್ಲಿ ಹರಕೆ ತೀರಿಸಿ, ಬಿ. ನಾಗೇಂದ್ರ ಅವರಿಗೆ ಸಚಿವ ಸ್ಥಾನ ಸಿಕ್ಕಿದ್ದಕ್ಕೆ ಕೃತಜ್ಞತೆ ಸಲ್ಲಿಸಿದ ಅಭಿಮಾನಿ**

ಬಳ್ಳಾರಿ ಆ 17: ರಾಜಕೀಯ ನಾಯಕರ ಮೇಲಿನ ಅಭಿಮಾನಕ್ಕೆ ಹಲವು ರೂಪಗಳಿವೆ. ಆದರೆ, ತಮ್ಮ ನೆಚ್ಚಿನ ನಾಯಕ ಮತ್ತೆ ಸಚಿವರಾಗಲಿ ಎಂದು ದೇವರ ಮುಂದೆ ಹರಕೆ ಹೊತ್ತು, ಆ ಹರಕೆಯನ್ನು ತೀರಿಸಲು ನೂರಾರು ಕಿಲೋಮೀಟರ್ ಪ್ರಯಾಣಿಸಿ, ಸಾವಿರಾರು ಮೆಟ್ಟಿಲು ಗಳನ್ನು ಏರಿ, ಕೈಯಲ್ಲಿ ನಾಯಕನ ಭಾವಚಿತ್ರ ಹಿಡಿದು ದೇವರ ದರ್ಶನ ಪಡೆದಿರುವುದು ಅಪರೂಪದ ಅಭಿಮಾನದ ನಿದರ್ಶನವಾಗಿದೆ.

ಬಳ್ಳಾರಿ ಗ್ರಾಮೀಣ ಶಾಸಕ ಹಾಗೂ ಮಾಜಿ ಸಚಿವ ಬಿ. ನಾಗೇಂದ್ರ ಅವರ ಆಪ್ತ ಬೆಂಬಲಿಗ, ಕುರುಬ ಸಮಾಜದ ಮುಖಂಡ ಎಂ.ಜಿ. ಕನಕ, ನಾಗೇಂದ್ರ ಮತ್ತೆ ಸಚಿವರಾಗಬೇಕು ಎಂಬ ಸಂಕಲ್ಪದೊಂದಿಗೆ ತಿರುಪತಿ ತಿಮ್ಮಪ್ಪನಿಗೆ ಹರಕೆ ಹೊತ್ತಿದ್ದರು. ಇದೀಗ ಆ ಹರಕೆಯನ್ನು ನೆರವೇರಿಸುವ ಮೂಲಕ ತಮ್ಮ ಅಭಿಮಾನ ಹಾಗೂ ನಂಬಿಕೆಯನ್ನು ವಿಭಿನ್ನ ರೀತಿಯಲ್ಲಿ ವ್ಯಕ್ತಪಡಿಸಿದ್ದಾರೆ.

ನಾಗೇಂದ್ರ ಅವರು ವಾಲ್ಮೀಕಿ ನಿಗಮದ ಹಣಕಾಸು ಅಕ್ರಮ ಪ್ರಕರಣದ ಹಿನ್ನೆಲೆಯಲ್ಲಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ ಸಂದರ್ಭದಲ್ಲಿ, ಅವರ ಅಭಿಮಾನಿಗಳು ಹಾಗೂ ಬೆಂಬಲಿಗರಲ್ಲಿ ತೀವ್ರ ಬೇಸರ ವ್ಯಕ್ತವಾಗಿತ್ತು. ನಾಗೇಂದ್ರ ಅವರು ಯಾವುದೇ ತಪ್ಪು ಮಾಡಿಲ್ಲ, ಅಧಿಕಾರಿಗಳ ಮಟ್ಟದಲ್ಲಿ ನಡೆದಿರುವ ವಿಚಾರಕ್ಕೆ ಅವರನ್ನು ರಾಜಕೀಯವಾಗಿ ಹೊಣೆಗಾರರನ್ನಾಗಿ ಮಾಡಲಾಗಿದೆ ಎಂಬ ನಂಬಿಕೆಯನ್ನು ಕನಕ ಸೇರಿದಂತೆ ಅವರ ಬೆಂಬಲಿಗರು ವ್ಯಕ್ತಪಡಿಸುತ್ತಲೇ ಬಂದಿದ್ದರು.

ಆ ಸಂದರ್ಭದಲ್ಲಿ ನಾಗೇಂದ್ರ ಅವರಿಗೆ ಮತ್ತೆ ಸಚಿವ ಸ್ಥಾನ ದೊರಕಬೇಕು ಎಂದು ಕನಕ ಅವರು ದೇವರ ಮೊರೆಹೋಗಿದ್ದರು. "ನಾಗೇಂದ್ರ ಮತ್ತೆ ಸಚಿವರಾಗುವ ವರೆಗೂ ತಲೆ ಕೂದಲು, ಗಡ್ಡ ಮತ್ತು ಮೀಸೆ ತೆಗೆಯುವುದಿಲ್ಲ" ಎಂಬ ಸಂಕಲ್ಪವನ್ನೂ ಕೈಗೊಂಡಿದ್ದರು. ಅಲ್ಲದೆ, ತಿರುಪತಿ ತಿಮ್ಮಪ್ಪನಿಗೆ ಹರಕೆ ಹೊತ್ತಿದ್ದರು.

ಇದೀಗ ಆ ಸಂಕಲ್ಪಕ್ಕೆ ಫಲ ಸಿಕ್ಕಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ರಾಜ್ಯ ಸಚಿವ ಸಂಪುಟದಲ್ಲಿ ಬಿ. ನಾಗೇಂದ್ರ ಅವರಿಗೆ ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವ ಸ್ಥಾನ ದೊರೆತ ಹಿನ್ನೆಲೆಯಲ್ಲಿ, ಎಂ.ಜಿ. ಕನಕ ಅವರು ತಮ್ಮ ಹರಕೆಯನ್ನು ತೀರಿಸಲು ತಿರುಪತಿಗೆ ತೆರಳಿದ್ದಾರೆ.



ತಿರುಪತಿ ತಿಮ್ಮಪ್ಪನ ಸನ್ನಿಧಿಗೆ ತೆರಳಿದ ಕನಕ ಅವರು ಸುಮಾರು 3,500 ಮೆಟ್ಟಿಲುಗಳನ್ನು ಏರಿ ದೇವರ ದರ್ಶನ ಪಡೆದಿದ್ದಾರೆ. ಈ ಸಂದರ್ಭದಲ್ಲಿ ತಮ್ಮ ನೆಚ್ಚಿನ ನಾಯಕ ಬಿ. ನಾಗೇಂದ್ರ ಅವರ ಭಾವಚಿತ್ರವನ್ನು ಕೈಯಲ್ಲಿ ಹಿಡಿದುಕೊಂಡೇ ಮೆಟ್ಟಿಲು ಗಳನ್ನು ಏರಿದ್ದು ವಿಶೇಷವಾಗಿತ್ತು.

ಅಭಿಮಾನದ ಈ ಪಯಣದಲ್ಲಿ ಕೊನೆಯ ಹಂತ ಮತ್ತಷ್ಟು ಭಾವುಕ ವಾಗಿತ್ತು. ದೈಹಿಕವಾಗಿ ಕಷ್ಟವಾಗಿದ್ದರೂ ಸಹ, ಕೊನೆಯ ಭಾಗದಲ್ಲಿ ಮೊಳಕಾಲಿನ ಮೇಲೆ ಮೆಟ್ಟಿಲುಗಳನ್ನು ಏರುತ್ತಾ ತಿರುಮಲದ ಸನ್ನಿಧಿ ತಲುಪಿದ ಕನಕ ಅವರು, ತಮ್ಮ ಹರಕೆಯನ್ನು ನೆರವೇರಿಸಿ ತಿರುಪತಿ ತಿಮ್ಮಪ್ಪನ ದರ್ಶನ ಪಡೆದರು. ಸುಮಾರು 12 ಕಿ.ಮೀ.ಗಳಷ್ಟು ದೂರದ ತಿರುಮಲದ ಪವಿತ್ರ ಮಾರ್ಗದಲ್ಲಿ ಸಾಗಿದ ಅವರು, ತಮ್ಮ ಸಂಕಲ್ಪವನ್ನು ದೇವರ ಸನ್ನಿಧಿಯಲ್ಲಿ ಪೂರ್ಣ ಗೊಳಿಸಿದರು. ಕೈಯಲ್ಲಿ ನಾಗೇಂದ್ರ ಭಾವಚಿತ್ರ, ಮನಸ್ಸಿನಲ್ಲಿ ನಾಯಕನ ಮೇಲಿನ ಅಭಿಮಾನ ಹಾಗೂ ದೇವರ ಮೇಲಿನ ಭಕ್ತಿ, ಈ ಮೂರು ಸಂಗತಿಗಳು ಕನಕ ಅವರ ಈ ಯಾತ್ರೆಯ ವಿಶೇಷತೆಯಾಗಿದ್ದವು.

ಬಿ. ನಾಗೇಂದ್ರ ಅವರಿಗೆ ಸಚಿವ ಸ್ಥಾನ ದೊರೆತ ನಂತರವೇ ತಮ್ಮ ಹರಕೆಯನ್ನು ತೀರಿಸಲು ತಿರುಪತಿಗೆ ತೆರಳಿರುವ ಕನಕ ಅವರ ನಡೆ ಇದೀಗ ಬಳ್ಳಾರಿ ರಾಜಕೀಯ ವಲಯದಲ್ಲಿ ಗಮನ ಸೆಳೆದಿದೆ.

ನಾಗೇಂದ್ರ ಸಚಿವ ಸ್ಥಾನ ಕಳೆದುಕೊಂಡ ಸಂದರ್ಭದಲ್ಲಿ ನೋವು ವ್ಯಕ್ತಪಡಿಸಿದ್ದ ಇದೇ ಅಭಿಮಾನಿ, ಅವರು ಮತ್ತೆ ಸಚಿವರಾಗುವವರೆಗೂ ತಮ್ಮ ವೈಯಕ್ತಿಕ ಸಂಕಲ್ಪವನ್ನು ಮುಂದುವರಿಸಿ ಕೊಂಡು ಬಂದಿದ್ದರು. ಇದೀಗ ನಾಗೇಂದ್ರ ಅವರಿಗೆ ಸಚಿವ ಸ್ಥಾನ ದೊರೆತಿರುವುದನ್ನು ದೇವರ ಕೃಪೆ ಹಾಗೂ ತಮ್ಮ ಹರಕೆಯ ಫಲವೆಂದು ಭಾವಿಸಿರುವ ಕನಕ ಅವರು, ತಿರುಪತಿ ತಿಮ್ಮಪ್ಪನಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

ರಾಜಕೀಯದಲ್ಲಿ ಅಧಿಕಾರದ ಸ್ಥಾನಮಾನಗಳು ಬದಲಾಗಬಹುದು. ಆದರೆ, ಒಬ್ಬ ನಾಯಕನಿಗಾಗಿ ಅಭಿಮಾನಿಯೊಬ್ಬರು ಕೈಗೊಳ್ಳುವ ಇಂತಹ ವೈಯಕ್ತಿಕ ಸಂಕಲ್ಪಗಳು ರಾಜಕೀಯದ ಆಚೆಗಿನ ಭಾವನಾತ್ಮಕ ಸಂಬಂಧವನ್ನು ತೋರಿಸುತ್ತವೆ. ನಾಗೇಂದ್ರ ರಾಜಕೀಯ ಪಯಣದಲ್ಲಿ ತಮ್ಮ ಅಭಿಮಾನವನ್ನು ಈ ರೀತಿಯಾಗಿ ದಾಖಲಿಸಿರುವ ಎಂ.ಜಿ. ಕನಕ ನಡೆ, ಬಳ್ಳಾರಿಯಲ್ಲಿ ವಿಶೇಷ ಚರ್ಚೆಗೆ ಕಾರಣವಾಗಿದೆ.

ಬಿ. ನಾಗೇಂದ್ರ ಸಚಿವರಾಗಿರುವ ಸಂದರ್ಭದಲ್ಲಿ, ತಮ್ಮ ಅಭಿಮಾನಿಯೊಬ್ಬರು ಅವರಿಗಾಗಿ ಹೊತ್ತ ಹರಕೆಯನ್ನು ತೀರಿಸಲು ತಿರುಪತಿ ತಿಮ್ಮಪ್ಪನ ಸನ್ನಿಧಿಗೆ ತೆರಳಿ, ಸಾವಿರಾರು ಮೆಟ್ಟಿಲುಗಳನ್ನು ಏರಿ, ಕೊನೆಯ ಹಂತದಲ್ಲಿ ಮೊಳಕಾಲಿನಲ್ಲೇ ಮೆಟ್ಟಿಲು ಹತ್ತಿ ದೇವರ ದರ್ಶನ ಪಡೆದಿರುವುದು ನಿಜಕ್ಕೂ ಅಪರೂಪದ ಅಭಿಮಾನದ ಪ್ರಸಂಗವಾಗಿದೆ.

ನಾಗೇಂದ್ರ ಅವರ ರಾಜಕೀಯ ಬದುಕಿನ ಒಂದು ಕಷ್ಟದ ಸಂದರ್ಭದಲ್ಲಿ ಹುಟ್ಟಿದ ಹರಕೆ, ಅವರು ಮತ್ತೆ ಸಚಿವರಾದ ಸಂದರ್ಭದಲ್ಲಿ ತಿರುಪತಿ ತಿಮ್ಮಪ್ಪನ ಸನ್ನಿಧಿಯಲ್ಲಿ ಪೂರ್ಣಗೊಂಡಿದೆ.

# ಹೊಸ ತಂತ್ರಜ್ಞಾನದ ಅರಿವು ಔಷಧ ವಿಜ್ಞಾನ ವಿದ್ಯಾರ್ಥಿಗಳಿಗೆ ಅಗತ್ಯ

**ರಾಯಚೂರು, ಆ. 17:** ಔಷಧ ವಿಜ್ಞಾನದಲ್ಲಿ ಬಹಳಷ್ಟು ಪ್ರಗತಿಯಾಗಿದೆ. ವಿದ್ಯಾರ್ಥಿಗಳು ಹೊಸ ತಂತ್ರಜ್ಞಾನಗಳ ಬಗ್ಗೆ ತಿಳಿದುಕೊಳ್ಳಬೇಕು. ಹೊಸತನ್ನು ನಿರಂತರ ಕಲಿಯುತ್ತಿರಬೇಕು ಎಂದು ನವೋದಯ ಶಿಕ್ಷಣ ಸಂಸ್ಥೆಯ ಕುಲಸಚಿವ ಡಾ.ಟಿ.ಶ್ರೀನಿವಾಸ್ ಹೇಳಿದರು.

ನವೋದಯ ಶಿಕ್ಷಣ ಸಂಸ್ಥೆಯ ಎನ್‌ಇಟಿ ಫಾರ್ಮಸಿ ಕಾಲೇಜಿನಲ್ಲಿ '3ಡಿ ಪ್ರಿಂಟಿಂಗ್‌ನಲ್ಲಿ ಔಷಧ ವಿಜ್ಞಾನ ಮತ್ತು ವೈಯಕ್ತಿಕೀಕೃತ ಔಷಧ ಚಿಕಿತ್ಸೆ: ಪಿಕ್ಸೆಲ್‌ನಿಂದ ಮಾತ್ರೆಗಳವರೆಗೆ ಕುರಿತ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಔಷಧ ವಿಜ್ಞಾನದಲ್ಲಿ 3ಡಿ ಪ್ರಿಂಟಿಂಗ್ ವಿಧಾನವು ಹೊಸ ತಂತ್ರಜ್ಞಾನವಾಗಿದೆ. 3ಡಿ ವಿನ್ಯಾಸದ ಆಧಾರದ ಮೇಲೆ ವಸ್ತುವನ್ನು ಪದರ ಪದರವಾಗಿ, ರೋಗಿಯ ಅಗತ್ಯಕ್ಕೆ ತಕ್ಕಂತೆ ಔಷಧದ ರೂಪ ಮತ್ತು ಪ್ರಮಾಣ ತಯಾರಿಸಲಾಗುತ್ತದೆ. ಹೀಗಾಗಿ ಈ ತಂತ್ರಜ್ಞಾನವು ರೋಗಿ ಮತ್ತು ಔಷಧಗಳ ನಡುವೆ ಸೇತುವೆಯಾಗಿದೆ ಎಂದರು.

ವಿದ್ಯಾರ್ಥಿಗಳು ಕಾರ್ಯಾಗಾರ ದಲ್ಲಿ ಉತ್ಸಾಹದಿಂದ ಭಾಗವಹಿಸಿ, ಈ ಹೊಸ ತಂತ್ರಜ್ಞಾನ ಕಲಿಯಬೇಕು ಎಂದು ಕಿವಿಮಾತು ಹೇಳಿದರು.




ರಾಯಚೂರಿನ ನವೋದಯ ಶಿಕ್ಷಣ ಸಂಸ್ಥೆಯ ಎನ್‌ಇಟಿ ಫಾರ್ಮಸಿ ಕಾಲೇಜಿನಲ್ಲಿ '3ಡಿ ಪ್ರಿಂಟಿಂಗ್‌ನಲ್ಲಿ ಔಷಧ ವಿಜ್ಞಾನ ಮತ್ತು ವೈಯಕ್ತಿಕೀಕೃತ ಔಷಧ ಚಿಕಿತ್ಸೆ: ಪಿಕ್ಸೆಲ್‌ನಿಂದ ಮಾತ್ರೆಗಳವರೆಗೆ' ಕುರಿತ ಕಾರ್ಯಾಗಾರವನ್ನು ಕುಲಸಚಿವ ಡಾ.ಟಿ.ಶ್ರೀನಿವಾಸನ್ ಅವರು ಉದ್ಘಾಟಿಸಿ ಮಾತನಾಡಿದರು.

ನವೋದಯ ಶಿಕ್ಷಣ ಸಂಸ್ಥೆಯ ಶೈಕ್ಷಣಿಕ ಅಭಿವೃದ್ಧಿ ಮತ್ತು ಸಂಶೋಧನೆ ವಿಭಾಗದ ನಿರ್ದೇಶಕ ಡಾ.ವಿ.ರಾಮ ಮೋಹನ್ ಗುಪ್ತ ಮಾತನಾಡಿ, ಇಂದು 3ಡಿ ಪ್ರಿಂಟಿಂಗ್ ವಿಧಾನವು ಔಷಧ ಕ್ಷೇತ್ರದಲ್ಲಿ ವ್ಯಾಪಕವಾಗಿ ಬಳಕೆಯಾಗುತ್ತಿದೆ. ಅದರಲ್ಲೂ ಮಕ್ಕಳ ಮತ್ತು ವಯೋವೃದ್ಧ ರೋಗಿಗಳ ಔಷಧಗಳ ತಯಾರಿಕೆಯಲ್ಲಿ ಹೆಚ್ಚು ಪ್ರಾಮುಖ್ಯತೆಯನ್ನು ಪಡೆದಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎನ್‌ಇಟಿ ಫಾರ್ಮಸಿ ಕಾಲೇಜಿನ ಪ್ರಾಂಶುಪಾಲ ಡಾ.ಎಚ್. ದೊಡ್ಡಯ್ಯ ಮಾತನಾಡಿ, ನವೋದಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎಸ್. ಆರ್.ರೆಡ್ಡಿ, ಕಾರ್ಯಾಚರಣೆಗಳ ನಿರ್ದೇಶಕ ಎಸ್. ಅಮೃತ್ ರೆಡ್ಡಿ ಅವರು ಹೊಸ ತಂತ್ರಜ್ಞಾನಗಳ ಅಳಡಿಕೆಗೆ ಪ್ರೋತ್ಸಾಹ ನೀಡುತ್ತ ಬಂದಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಾಲೇಜಿನಿಂದ ಪ್ರಕಟಿಸುವ ತ್ರೈಮಾಸಿಕ ಪತ್ರಿಕೆಯಾದ ಫಾರ್ಮ ಫೋಕಸ್ ಅನ್ನು ಬಿಡುಗಡೆ ಮಾಡಲಾಯಿತು. ಇತ್ತೀಚೆಗೆ ನಡೆದ ರಾಜ್ಯಮಟ್ಟದ ಹ್ಯಾಕಥಾನ್ ಸ್ಪರ್ಧೆಯಲ್ಲಿ ಎರಡನೇಯ ಸ್ಥಾನವನ್ನು ಗಳಿಸಿದ ಎನ್‌ಇಟಿ ಫಾರ್ಮಸಿ ಕಾಲೇಜಿನ ವಿದ್ಯಾರ್ಥಿಗಳಾದ ನೇಹಾ ಶಂಕರ್ ಎಲೆ, ಉಮ್ಮೆ ರೆಹಮಾನ್ ಖಾನ್ ಮತ್ತು ರಶೀದ್ ಅಹಮದ್ ಅವರಿಗೆ ಪ್ರಶಸ್ತಿ ಪತ್ರ ಮತ್ತು ಬಹುಮಾನಗಳನ್ನು ನೀಡಲಾಯಿತು.

ಕಾರ್ಯಾಗಾರದಲ್ಲಿ ರಾಯಚೂರು, ಯಾದಗಿರಿ, ಕಲಬುರಗಿ, ಕೊಪ್ಪಳ, ಚಿಕ್ಕಬಳ್ಳಾಪುರ, ಅನಂತಪುರ, ಕರ್ನೂಲ್ ಸೇರಿ ಮುಂತಾದ ಜಿಲ್ಲೆಗಳ 200 ಫಾರ್ಮಸಿ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಸಂಸ್ಥೆಯ ಆಡಳಿತ ವಿಭಾಗದ ನಿರ್ದೇಶಕ ಪ್ರೊ.ಸಿ.ಸುರೇಶ್ ಬಾಬು ಮತ್ತು ಸಂಪನ್ಮೂಲ ವ್ಯಕ್ತಿ ಡಾ.ಪ್ರಕಾಶ್ ಕಟ್ಟಿಮ್ ಉಪಸ್ಥಿತರಿದ್ದರು. ಡಾ.ಪ್ರಜ್ಞಾ ಪಾಟೀಲ ಸಂಪನ್ಮೂಲ ವ್ಯಕ್ತಿಯನ್ನು ಪರಿಚಯಿಸಿದರು. ಡಾ.ಸರ್ಫರಾಜ್ ಮಹಮ್ಮದ್ ಸ್ವಾಗತಿಸಿದರು. ಡಾ.ರಾಜೇಶ್ ಪವನ್ ವಂದಿಸಿದರು.

# ಬ್ರಾಹ್ಮಣರು ಮತಭೇದ ಮರೆತು ಒಗ್ಗಟ್ಟಾಗಬೇಕು: ರಘುನಾಥ ಕರೆ

**ಕಲಬುರಗಿ, ಆ. 17:** ಬ್ರಾಹ್ಮಣರು ಒಳಪಂಗಡಗಳ ಭಿನ್ನಾಭಿಪ್ರಾಯಗಳನ್ನು ಮರೆತು ಒಗ್ಗಟ್ಟಿನಿಂದ ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು. ಪರಸ್ಪರ ಸಹಕರ ಮತ್ತು ಗೌರವಗಳ ಮೂಲಕ ಸಮಾಜದ ಏಕತೆ ಹಾಗೂ ಬಲ ಹೆಚ್ಚಿಸಬೇಕು ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಎಸ್. ರಘುನಾಥ್ ಕರೆ ನೀಡಿದರು.

ನಗರದ ಮರಾಠಿ ಸಾಹಿತ್ಯ ಮಂಡಳ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಸ್ವಾತಂತ್ರ್ಯ ಯೋಧ ರಾಷ್ಟ್ರವೀರ ಸ್ವಾಮಿ ರಮಾನಂದತೀರ್ಥರ ಕುರಿತ ಪುಸ್ತಕ ಬಿಡುಗಡೆ ಹಾಗೂ ಮಾಸ್ಟರ್ ಹಿರಣ್ಣಯ್ಯ ಜೀವನ ಗೌರವ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬ್ರಾಹ್ಮಣ ಸಮಾಜದ ಏಳ್ಗೆಗೆ ಸಂಘಟನೆ ಮತ್ತು ಒಗ್ಗಟ್ಟು ಅಗತ್ಯವಿದೆ. ಭಿನ್ನಾಭಿಪ್ರಾಯಗಳು ಹಾಗೂ ಒಳಪಂಗಡಗಳ ವಿಚಾರಗಳಿಂದ ಸಮಾಜದಲ್ಲಿ ಒಡಕು ಉಂಟಾಗಲು ಕಾರಣವಾಗ ಬಾರದು. ಎಲ್ಲರೂ ಒಂದೇ ಸಮಾಜದ ಸದಸ್ಯರು ಎಂಬ ಭಾವನೆಯೊಂದಿಗೆ ಪರಸ್ಪರ ಗೌರವದಿಂದ ನಡೆದುಕೊಳ್ಳಬೇಕು ಎಂದರು.

ಮಹಾನ್ ಯತಿಗಳು, ಸಂತರ ಹಾಗೂ ಧಾರ್ಮಿಕ ಮುಖಂಡರ ಬಗ್ಗೆ ಅಪಾರ ಗೌರವ ಹೊಂದಿರಬೇಕು. ಶ್ರೀ ಶಂಕರಾಚಾರ್ಯರು, ಶ್ರೀ ರಾಮಾನುಜಾಚಾರ್ಯರು ಹಾಗೂ ಶ್ರೀ ಮಧ್ವಾಚಾರ್ಯರ ಸಾಧನೆ, ತ್ಯಾಗ ಮತ್ತು ಸಮಾಜಕ್ಕೆ ನೀಡಿದ ಕೊಡುಗೆಗಳನ್ನು ಅರಿತುಕೊಳ್ಳದೆ ನಿಂದಿಸುವ ಅಥವಾ ಅವಹೇಳನ ಮಾಡುವ ಪ್ರವೃತ್ತಿ ಸರಿಯಲ್ಲ. ಅಭಿಪ್ರಾಯ ಭೇದಗಳಿದ್ದರೂ ಸೌಹಾರ್ದಯುತವಾಗಿ ಚರ್ಚಿಸಿ ಪರಿಹರಿಸಿಕೊಳ್ಳಬೇಕು. ಎಲ್ಲ ಮಠಾಧೀಶರನ್ನೂ ಭೇಟಿಯಾಗಿ ತಮ್ಮ ಶಿಷ್ಯರು, ಭಕ್ತರಿಗೆ ಸೂಚನೆ ಕೊಡಿಸಲು ಬ್ರಾಹ್ಮಣ ಮಹಾಸಭಾ ಉದ್ದೇಶಿಸಿದೆ ಎಂದು ತಿಳಿಸಿದರು.



ಸಮಾಜದ ವಿದ್ಯಾರ್ಥಿ, ಯುವಜನರಿಗೆ ಉತ್ತಮ ಶಿಕ್ಷಣ, ಸಂಸ್ಕಾರ ಹಾಗೂ ಅವಕಾಶಗಳನ್ನು ಕಲ್ಪಿಸುವುದು, ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ನೆರವು ನೀಡುವುದು ಮತ್ತು ಸಾಮಾಜಿಕ ಸೇವಾ ಕಾರ್ಯಗಳನ್ನು ಮತ್ತಷ್ಟು ಬಲಪಡಿಸುವುದು ಇಂದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದರು.

ಈ ಸಂದರ್ಭದಲ್ಲಿ ಎನ್.ವಿ. ಪದವಿ ಕಾಲೇಜಿನ ನಿವೃತ್ತ ಇಂಗ್ಲಿಷ್ ಪ್ರಾಧ್ಯಾಪಕಿ ಪ್ರೊ. ಸುನಂದಾ ಕುಲಕರ್ಣಿ ಅವರ 'ರಾಷ್ಟ್ರವೀರ ಸ್ವಾಮಿ ರಮಾನಂದತೀರ್ಥ' ಕೃತಿ ಬಿಡುಗಡೆ ಮಾಡಲಾಯಿತು. ಬ್ರಾಹ್ಮಣ ಸಮುದಾಯ ಆರ್ಥಿಕ ದುರ್ಬಲರಿಗೆ ನೆರವು ನೀಡಲು ಅ.ಕ. ಬ್ರಾಹ್ಮಣ ಮಹಾಸಭಾ 100 ಕೋಟಿ ರೂ.ಗಳ ನಿಧಿ ಸ್ಥಾಪಿಸಲು ಉದ್ದೇಶಿಸಿದೆ. ರಾಜ್ಯದಾದ್ಯಂತ 10 ಸಾವಿರ ಜನರಿಂದ ತಲಾ ಒಂದು ಲಕ್ಷರೂ. ಸಂಗ್ರಹಿಸುವ ಹೆಗ್ಗುರಿ ಹೊಂದ್ದು, ಈಗಾಗಲೇ 82 ಲಕ್ಷ ರೂ. ಸಂಗ್ರಹಿಸಲಾಗಿದೆ ಎಂದು ಮಹಾಸಭಾ ಅಧ್ಯಕ್ಷ ಎಸ್. ರಘುನಾಥ ಹೇಳಿದರು.

ಜಿಲ್ಲಾ ಪ್ರತಿನಿಧಿ ಪ್ರಮೋದ ದೇಶಪಾಂಡೆ ಆಡಕಿ ಪ್ರಾಸ್ತಾವಿಕ ಮಾತನಾಡಿದರು. ಮಹಾಸಭಾ ಉಪಾಧ್ಯಕ್ಷ ರಾಮ್ ಗೋವಿಂದರಾವ್ ರಾಜಶೇಖರ್, ಉತ್ತರಾದಿ ಮಠದ ಮಠಾಧಿಕಾರಿ ರಾಮಾಚಾರ್ಯ ಘಂಟಿ, ಶಂಕರ ಮಠದ ವಿಶೇಷ ಪ್ರತಿನಿಧಿ ಪ್ರಕಾಶ ಎಚ್. ಕುಲಕರ್ಣಿ, ಉದ್ಯಮಿ ಕೃಷ್ಣಾಜಿ ಕುಲಕರ್ಣಿ, ಪಾಲಿಕೆ ವಿರೋಧ ಪಕ್ಷದ ನಾಯಕಿ ಶೋಭಾ ದೇಸಾಯಿ, ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಪಾಂಡುರಂಗ ದೇಶಮುಖ, ದತ್ತಾತ್ರೇಯ ಪೂಜಾರಿ ಗಾಣಗಾಪುರ, ಪಿ.ವಿ.ಜೋಶಿ, ಮಹಾಸಭಾ ವಲಯ ಸಂಘಟನಾ ಕಾರ್ಯದರ್ಶಿ ಮೋಹನ ಓಂಕಾರ್, ಬೀದರ್ ಜಿಲ್ಲಾ ಪ್ರತಿನಿಧಿ ವೆಂಕಟೇಶ ಕುಲಕರ್ಣಿ ಮತ್ತಿತರರು ಉಪಸ್ಥಿತರಿದ್ದರು. ಜಿಲ್ಲಾ ಮಹಿಳಾ ಘಟಕದ ಸಂಚಾಲಕಿ ಲೀಲಾವತಿ ದೇಶಪಾಂಡೆ ನಿರೂಪಿಸಿದರು. ಗುರುರಾಜ ಕುಲಕರ್ಣಿ ವಂದಿಸಿದರು.

# ಬೈಕ್‌ಗಳ ಮುಖಾಮುಖಿ ಡಿಕ್ಕಿ, ಯುವತಿ ಸಾವು, ಮೂವರು ಆಸ್ಪತ್ರೆ ಪಾಲು



**ಬಳ್ಳಾರಿ, ಆ 17:** ಬಳ್ಳಾರಿ–ಸಿರುಗುಪ್ಪ ಮುಖ್ಯ ರಸ್ತೆಯ ಸಿರುಗುಪ್ಪ ಹೊರವಲಯದ ಭರತ್ ಪೆಟ್ರೋಲ್ ಬಂಕ್ ಹತ್ತಿರ ಎರಡು ಬೈಕ್ ಗಳ ನಡುವೆ ಅಪಘಾತ ಸಂಭವಿಸಿದೆ. ಕರೆಯ ಮೂಲಕ ವಿಷಯವನ್ನು ಬಿಜೆಪಿ ಯುವಮೋರ್ಚ ಜಿಲ್ಲಾಧ್ಯಕ್ಷ ಎಂ.ಎಸ್.ಸಿದ್ದಪ್ಪರಿಗೆ ತಿಳಿದ ತಕ್ಷಣ ಅಪಘಾತ ಸ್ಥಳಕ್ಕೆ ಭೇಟಿ ನೀಡಿ ಗಾಯಳುಗಳನ್ನು ಸಿರುಗುಪ್ಪ ತಾಲೂಕಿನ ಸರ್ಕಾರಿ ಆಸ್ಪತ್ರೆಗೆ ಆಂಬುಲೆನ್ಸ್ ಮೂಲಕ ಕರೆದುಕೊಂಡು ಹೋಗಿ ಚಿಕಿತ್ಸೆ ನೀಡಿಸಲಾಯಿತು.

4 ಜನಗಳ ಪೈಕಿ ಭವಾನಿ ತೆಕ್ಕಲಕೋಟೆ 20ನೇ ವಾರ್ಡಿನ ನಿವಾಸಿ ( 19ವರ್ಷದ) ಯುವತಿ ಚಿಕಿತ್ಸೆ ಫಲಿಸದೇ ಸಾವನಪ್ಪಿದ್ದಾಳೆ, ಇನ್ನುಳಿದ ಪವನ್ ಕುಮಾರ್ ತೆಕ್ಕಲಕೋಟೆ ನಿವಾಸಿ, ವೀರಭದ್ರಪ್ಪ ಮತ್ತು ತಿಪ್ಪಮ್ಮ ಗಂಡ ಹೆಂಡತಿ ಹಳೆಕೋಟೆಯ ನಿವಾಸಿಗಳು ಮೂರು ಜನರನ್ನು ಹೆಚ್ಚಿನ ಚಿಕಿತ್ಸೆಗಾಗಿ ಬಳ್ಳಾರಿಯ ಬಿಮ್ಸ್ ಆಸ್ಪತ್ರೆಗೆ ಗಾಯಳುಗಳನ್ನು ಕಳಿಸಿಕೊಟ್ಟಿದ್ದಾರೆ

# ದೇಶದ ವಿದ್ಯುತ್ ಬೇಡಿಕೆ ಶೇ.7ರಷ್ಟು ಹೆಚ್ಚಳ: ಎಂ.ಜೆ.ಚಂದ್ರೇಗೌಡ

**ರಾಯಚೂರು, ಆ. 17:** ದೇಶದ ವಿದ್ಯುತ್ ಬೇಡಿಕೆಯು ವಾರ್ಷಿಕವಾಗಿ ಶೇ 7ರಷ್ಟು ಹೆಚ್ಚಳವಾಗಿದೆ. ಮುಂದಿನ ದಶಕದಲ್ಲಿ ಈ ಬೇಡಿಕೆ ಮತ್ತಷ್ಟು ಏರಿಕೆಯಾಗುವ ನಿರೀಕ್ಷೆಯಿದೆ ಎಂದು ಕೃಷಿ ತಂತ್ರಜ್ಞಾನ ಅನ್ವಯಿಕ ಸಂಶೋಧನಾ ಸಂಸ್ಥೆಯ (ಎಟಿಎಆರ್‌ಐ) ಮಾಜಿ ನಿರ್ದೇಶಕ ಎಂ. ಜೆ.ಚಂದ್ರೇಗೌಡ ಹೇಳಿದರು.

ಕೃಷಿ ವಿಜ್ಞಾನ ಕೇಂದ್ರದ ಸಭಾಂಗಣದಲ್ಲಿ ಕೃಷಿ ವಿಜ್ಞಾನ ಕೇಂದ್ರ ಹಾಗೂ ಭಾರತದ ಕೃಷಿ ಕೌಶಲ್ಯ ಮಂಡಳಿಯ ಆಶ್ರಯದಲ್ಲಿ ಏರ್ಪಡಿಸಿದ್ದ ಕೃಷಿ–ಸೌರವಿದ್ಯುತ್ ಕುರಿತ ಜಾಗೃತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ವಿದ್ಯುತ್ ವಾಹನಗಳು, ಡೇಟಾ ಕೇಂದ್ರಗಳು ಹಾಗೂ ಕೃಷಿ ಕ್ಷೇತ್ರ ಹೆಚ್ಚುತ್ತಿರುವ ವಿದ್ಯುತ್ ಬೇಡಿಕೆಗೆ ಪ್ರಮುಖ ಕಾರಣಗಳಾಗಲಿವೆ. ಹೆಚ್ಚುತ್ತಿರುವ ವಿದ್ಯುತ್ ಬೇಡಿಕೆಯನ್ನು ಪೂರೈಸುವುದರ ಜೊತೆಗೆ ಕೃಷಿಗೆ ಅಗತ್ಯವಾದ ಭೂಮಿ ಮತ್ತು ಜಲ ಸಂಪನ್ಮೂಲಗಳನ್ನು ಸಂರಕ್ಷಿಸಲು ನವೀಕರಿಸಬಹುದಾದ ಇಂಧನದ ಬಳಕೆ ಅನಿವಾರ್ಯವಾಗಿದೆ ಎಂದು ಅವರು ಪ್ರತಿಪಾದಿಸಿದರು.




ದೇಶದಲ್ಲಿ ಹೆಚ್ಚುತ್ತಿರುವ ವಿದ್ಯುತ್ ಬೇಡಿಕೆ, ತೀವ್ರವಾಗುತ್ತಿರುವ ನೀರಿನ ಕೊರತೆ ಹಾಗೂ ನಿರಂತರ ಆಹಾರ ಭದ್ರತೆಯ ಸವಾಲುಗಳು ಪರಸ್ಪರ ಸಂಬಂಧ ಹೊಂದಿವೆ. ರೈತರು ತಮ್ಮ ಕೃಷಿ ಭೂಮಿಯಲ್ಲಿಯೇ ಸೌರ ಫಲಕಗಳನ್ನು ಅಳವಡಿಸಿ ವಿದ್ಯುತ್ ಉತ್ಪಾದಿಸಬಹುದು. ಉತ್ಪಾದಿಸಿದ ವಿದ್ಯುತ್ ಅನ್ನು ಕೃಷಿ ಚಟುವಟಿಕೆಗಳಿಗೆ ಬಳಸುವುದರ ಜೊತೆಗ ಹೆಚ್ಚುವರಿ ವಿದ್ಯುತ್ ಅನ್ನು ವಿದ್ಯುತ್ ಜಾಲಕ್ಕೆ ಮಾರಾಟ ಮಾಡುವ ಮೂಲಕ ಹೆಚ್ಚುವರಿ ಆದಾಯ ಗಳಿಸಬಹುದು ಎಂದು ಸಲಹೆ ನೀಡಿದರು. ಅಧ್ಯಕ್ಷತೆ ವಹಿಸಿದ್ದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕ ಎ.ಆರ್. ಕುರುಬರ ಮಾತನಾಡಿ, ಜನಸಂಖ್ಯೆ ಹೆಚ್ಚುತ್ತಿರುವುದರಿಂದ ವಿದ್ಯುತ್ ಬೇಡಿಕೆ ಹೆಚ್ಚುತ್ತಿದೆ. ಈ ಹಿನ್ನೆಲೆಯಲ್ಲಿ ರೈತರು ಸೌರಶಕ್ತಿ ಆಧಾರಿತ ತಂತ್ರಜ್ಞಾನಗಳನ್ನು ಅಳವಡಿಸಿ ಕೊಳ್ಳಬೇಕು. ಸೌರಶಕ್ತಿಯ ಬಳಕೆಯಿಂದ ಕೃಷಿಗೆ ಅಗತ್ಯವಾದ ಇಂಧನ ಲಭ್ಯತೆ ಹೆಚ್ಚುವುದರ ಜೊತೆಗೆ ರೈತರ ಆದಾಯ ಹೆಚ್ಚಿಸಲು ಸಹಕಾರಿ ಯಾಗಲಿದೆ ಎಂದು ತಿಳಿಸಿದರು.

ತಾಂತ್ರಿಕ ಅಧಿವೇಶನದಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಜಯಕುಮಾರ ಪಲ್ಲೇದ್ ಅವರು ವಿಶ್ವವಿದ್ಯಾಲಯದ ವತಿಯಿಂದ ಅಭಿವೃದ್ಧಿಪಡಿಸಲಾದ ವಿವಿಧ ಸೌರಶಕ್ತಿ ಚಾಲಿತ ಕೃಷಿ ಯಂತ್ರೋಪಕರಣಗಳ ಕುರಿತು ಉಪನ್ಯಾಸ ನೀಡಿದರು.

ಭಾರತದ ಕೃಷಿ ಕೌಶಲ್ಯ ಮಂಡಳಿಯ ದಕ್ಷಿಣ ವಲಯದ ಮುಖ್ಯಸ್ಥ ಎಂ. ಪುರುಷೋತ್ತಮಗೌಡ ಹಾಗೂ ವೀರಭದ್ರ ರೆಡ್ಡಿ ಅವರು ಕೃಷಿಯಲ್ಲಿ ಇತ್ತೀಚೆಗೆ ಅಭಿವೃದ್ಧಿಪಡಿಸ ಲಾದ ಸೌರಶಕ್ತಿ ಆಧಾರಿತ ತಂತ್ರಜ್ಞಾನಗಳು ಹಾಗೂ ಪಿ.ಎಂ ಕುಸುಮ್ ಯೋಜನೆಯಡಿ ಸೌರ ಪಂಪ್‌ಸೆಟ್‌ಗಳು ಸೇರಿದಂತೆ ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡಿದರು.

ಅತಿಥಿಗಳಾಗಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಜಯಪ್ರಕಾಶ ನಿಡಗುಂದಿ, ಹಾಗೂ ವೀರಭದ್ರ ರೆಡ್ಡಿ ಆಗಮಿಸಿದ್ದರು.

ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಮಲ್ಲರೆಡ್ಡಿ ನಿರೂಪಿಸಿದರು. ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ತಿಮ್ಮಣ್ಣ ನಾಯಕ ಸ್ವಾಗತಿಸಿದರು. ವೀಣಾ ಟಿ. ವಂದಿಸಿದರು. ಸನ್ಮತಿ ನಾಯಕ, ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು, ಶಿಕ್ಷಕೇತರ ಸಿಬ್ಬಂದಿ ಹಾಗೂ ಸುಮಾರು 75 ರೈತರು ಕಾರ್ಯಾಗಾರ ದಲ್ಲಿ ಪಾಲ್ಗೊಂಡಿದ್ದರು.

# ಬಾಲ್ಯ ವಿವಾಹ ಕಾನೂನುಬಾಹಿರ: ಶಿಕ್ಷಣಾಧಿಕಾರಿ ರೇಣುಕಾ ಜಡಗಣ್ಣನವರ್ ಎಚ್ಚರಿಕೆ

**ಬಳ್ಳಾರಿ, ಆ.17:** ಹೆಣ್ಣಿಗೆ 18 ವರ್ಷ ಮತ್ತು ಗಂಡಿಗೆ 21 ವರ್ಷ ತುಂಬುವ ಮುನ್ನ ಮಾಡುವ ಬಾಲ್ಯ ವಿವಾಹವು ಮಕ್ಕಳ ಮೂಲಭೂತ ಹಕ್ಕುಗಳ ಗಂಭೀರ ಉಲ್ಲಂಘನೆಯಾಗಿದೆ ಎಂದು ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೇಣುಕಾ ಜಡಗಣ್ಣನವರ ಅವರು ಹೇಳಿದರು.

ನಗರ ಆರೋಗ್ಯ ಕೇಂದ್ರ ಕೌಲ್ ಬಜಾರ್ ವ್ಯಾಪ್ತಿಯ ಸರ್ಕಾರಿ ಬಾಲಕಿಯರ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿದ್ಯಾರ್ಥಿನಿಯರಿಗೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳು ಹಾಗೂ ಹದಿಹರೆಯದ ಆರೋಗ್ಯದ ಕುರಿತು ಸೋಮವಾರ ಏರ್ಪಡಿಸಿದ್ದ ವಿಶೇಷ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.




ಬಾಲ್ಯ ವಿವಾಹ ನಿಷೇಧ ಕಾಯ್ದೆ 2006ರ ಪ್ರಕಾರ ಬಾಲ್ಯ ವಿವಾಹ ಮಾಡಿಸುವುದು ಅಥವಾ ಪ್ರೋತ್ಸಾಹಿಸುವುದು ಶಿಕ್ಷಾರ್ಹ ಅಪರಾಧವಾಗಿದ್ದು, ತಪ್ಪಿತಸ್ಥರಿಗೆ 2 ವರ್ಷಗಳ ಕಠಿಣ ಜೈಲು ಶಿಕ್ಷೆ ಹಾಗೂ 1 ಲಕ್ಷ ರೂ. ದಂಡ ವಿಧಿಸಲಾಗುತ್ತದೆ ಎಂದು ಎಚ್ಚರಿಸಿದರು.

ಇಂತಹ ಪ್ರಕರಣಗಳು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ 1098 ಅಥವಾ 112ಕ್ಕೆ ಕರೆ ಮಾಡಬೇಕು ಎಂದು ತಿಳಿಸಿದ ಅವರು, ಜೊತೆಗೆ ಪೋಕ್ಸೋ ಕಾಯ್ದೆ–2012ರ ಅಡಿಯಲ್ಲಿ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆ ಕುರಿತೂ ಮಾಹಿತಿ ನೀಡಿದರು.

ಕಡಿಮೆ ವಯಸ್ಸಿನ ಗರ್ಭಧಾರಣೆಯಿಂದ ತಾಯಿ–ಶಿಶು ಮರಣದ ಅಪಾಯ, ರಕ್ತಹೀನತೆ, ಅಪೌಷ್ಟಿಕತೆ ಹಾಗೂ ಕಡಿಮೆ ತೂಕದ ಮಗುವಿನ ಜನನದಂತಹ ಗಂಭೀರ ಸಮಸ್ಯೆಗಳು ಎದುರಾಗುತ್ತವೆ. ಬಾಲ್ಯ ವಿವಾಹದಿಂದ ಶಿಕ್ಷಣ ಮೊಟಕುಗೊಳ್ಳುವುದರ ಜೊತೆಗೆ ಆತಂಕ, ಖಿನ್ನತೆ ಮತ್ತು ಸಾಮಾಜಿಕ ಪ್ರತ್ಯೇಕತೆ ಕಾಡುತ್ತದೆ. ಮಾನಸಿಕ ನೆರವಿಗಾಗಿ ಉಚಿತ ಟೆಲಿ–ಮನಸ್ ಸಹಾಯವಾಣಿ ಸಂಖ್ಯೆ 14416 ಅನ್ನು ಬಳಸಿಕೊಳ್ಳಬಹುದು ಎಂದು ತಿಳಿಸಿದರು.

ಹದಿಹರೆಯದ ಹೆಣ್ಣುಮಕ್ಕಳು ರಕ್ತಹೀನತೆ ತಡೆಗಟ್ಟಲು ಪೌಷ್ಟಿಕ ಆಹಾರದೊಂದಿಗೆ ವಾರಕ್ಕೊಮ್ಮೆ ಕಬ್ಬಿಣಾಂಶ (ಐರನ್) ಮಾತ್ರೆಗಳನ್ನು ತಪ್ಪದೇ ಸೇವಿಸಬೇಕು. ಹದಿಹರೆಯದಲ್ಲಿ ದೇಹದಲ್ಲಿ ಸಹಜ ಬದಲಾವಣೆಗಳು ಕಂಡುಬರುವುದರಿಂದ ಸೂಕ್ತ ವೈಯಕ್ತಿಕ ಶುಚಿತ್ವ ಕಾಪಾಡಿಕೊಳ್ಳುವುದು ಅತ್ಯಗತ್ಯ ಎಂದರು.

ಕಾರ್ಯಕ್ರಮದಲ್ಲಿ ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶಾಂತಮ್ಮ ಉಪ್ಪಾರ, ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಗಂಗಮ್ಮ, ಕಾಲೇಜಿನ ಪ್ರಾಚಾರ್ಯರಾದ ಡಾ. ಪ್ರಜ್ಞಾ, ಬೋಧಕ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

